ಸಂಪುಟ: 13 Volume ಸಂಚಿಕೆ: 237 Issue ಪುಟಗಳು: 08 Pages ಗುರುವಾರ 06 ನವೆಂಬರ 2025 ₹2 PRGINO. 120927(RNINO:KARKAN/2011/48371) BDR/054/2026-2027 mallammanudi@gmail.com www.mallammanudi.in 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ಮನಸ್ಸಿನ ಅಭಿವೃದ್ಧಿ ಮಾನವ ಜನಾಂಗದ ಅಂತಿಮಗುರಿಯಾಗಿರಬೇಕು.
ಡಾ.ಬಿ.ಆರ್.ಅಂಬೇಡ್ಕರ್

4 ಏಕತಾ ನಡಿಗೆ: ಜಿಲ್ಲಾಧಿಕಾರಿ | 2 ಡಾ.ರಜನೀಶ ವಾಲಿಯವರಿಗೆ ಗೌರವ ಸನ್ಮಾನ | 8 ಶಾಸಕಿ ಕನೀಜ್ ಫಾತಿಮಾ ಭೇಟಿ

# ಸಿದ್ದು ಬಲ ಪ್ರದರ್ಶನ

## ನವೆಂಬರ್ ಕ್ರಾಂತಿಯ ಚರ್ಚೆ ಬೆನ್ನಲ್ಲೇ ಸಿದ್ದರಾಮಯ್ಯ ಅಹಿಂದ ಸಮಾವೇಶಕ್ಕೆ ಸಜ್ಜು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ನ.5: ನವೆಂಬರ್ ಕ್ರಾಂತಿಯ ಸದ್ದಿನ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆಂಬಲಿಗರು ಅಹಿಂದ ಸಮಾವೇಶಕ್ಕೆ ತಯಾರಿ ಆರಂಭಿಸಿದ್ದಾರೆ. ಈ ಮೊದಲು 2023, 2024ರಲ್ಲಿ ರಾಜ್ಯದ ಹಲವು ಭಾಗಗಳಲ್ಲಿ ಅಹಿಂದ ಸಮಾವೇಶಗಳನ್ನು ಆಯೋಜಿಸಲಾಗಿತ್ತು 2025ರಲ್ಲಿ ಇದೇ ಮಾದರಿಯ ಸಮಾವೇಶಗಳನ್ನು ನಡೆಸಲು ಪ್ರಯತ್ನಿಸಿದಾಗ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅಡ್ಡಗಾಲು ಹಾಕಿದರು. ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ಸರ್ಕಾರದ ಸಂಪನ್ಮೂಲ ಬಳಸಿ ನಡೆಸಲಾಗುವ ಈ ಕಾರ್ಯಕ್ರಮವನ್ನು ಪಕ್ಷೇತರವಾಗಿ ಬಿಂಬಿಸುವ ಬದಲಾಗಿ ಕಾಂಗ್ರೆಸ್ಸಿನ ವೇದಿಕೆಯಲ್ಲೇ ಮಾಡಬೇಕೆಂದು ಪಟ್ಟು ಹಿಡಿದರು.

ಹೀಗಾಗಿ ಹಾಸನದಲ್ಲಿನ ಸಮಾವೇಶ ಕಾಂಗ್ರೆಸ್ ಕಾರ್ಯಕ್ರಮವಾಗಿ ಪರಿವರ್ತನೆಯಾಯಿತು. ಅಲ್ಲಿಂದಾಚೆಗೆ ಅಹಿಂದ ಸಮಾವೇಶಗಳು ಕಾಂಗ್ರೆಸ್ ಕಾರ್ಯಕ್ರಮಗಳಾಗಿ ಬದಲಾಗಿವೆ. ಸಿದ್ದರಾಮಯ್ಯ ಅವರಿಗೆ ರಾಜಕೀಯ ಅಸ್ಥಿರತೆ ಕಾಡಿದಾಗಲೆಲ್ಲ ಅಹಿಂದ ಸಮಾವೇಶಗಳ ಮೂಲಕ ಶಕ್ತಿ ಪ್ರದರ್ಶನ ಮಾಡಿದ್ದಾರೆ.

ಅದರ ಬೆನ್ನಲ್ಲೆ ಸಿದ್ದರಾಮಯ್ಯ ಅವರಿಗೆ ಎದುರಾದ ಅಡೆ-ತಡೆಗಳು ನಿವಾರಣೆಯಾಗಿವೆ. ಈಗ ನವೆಂಬರ್ ಕ್ರಾಂತಿಯ ನೆಪದಲ್ಲಿ ಸಿದ್ದರಾಮಯ್ಯ ಅವರ ಬಲ ಕುಗ್ಗಿಸುವ ಅಧಿಕಾರದಿಂದ ಕೆಳಗಿಳಿಸುವ ಪ್ರಯತ್ನಗಳಾಗುತ್ತಿವೆ. ಹೀಗಾಗಿ ಮತ್ತೊಮ್ಮೆ ಅಹಿಂದ ವರ್ಗ ಮೈಕೊಡವಿ ನಿಂತಿದೆ. ವರ್ಷಾಂತ್ಯಕ್ಕೆ ಬೃಹತ್ ಅಹಿಂದ ಸಮಾವೇಶ ನಡೆಸುವ ಚರ್ಚೆಗಳಾಗಿವೆ. ಅದಕ್ಕೆ ಈ ತಿಂಗಳ ಕೊನೆಯಲ್ಲಿ ಪೂರ್ವಭಾವಿ ಸಭೆ ನಡೆಸುವ ಚರ್ಚೆಯಾಗಿದೆ. ಈ ಬಾರಿಯ ಅಹಿಂದ ಸಮಾವೇಶವನ್ನು ಪಕ್ಷಾತೀತವಾಗಿ ಮಾಡಬೇಕೆಬುದು ಸಿದ್ದರಾಮಯ್ಯ ಅವರ ಬೆಂಬಲಿಗರ ಆಶಯವಾಗಿದೆ. ಹೀಗಾಗಿ ಡಿ.ಕೆ. ಶಿವಕುಮಾರ್ ಅವರ ಒತ್ತಡಕ್ಕೆ ಮಣಿಯದೇ ಸಮಾವೇಶ ನಡೆಸಲು ಪ್ರತ್ಯೇಕ ತಂತ್ರಗಾರಿಕೆಗಳು ನಡೆಯುತ್ತಿವೆ. ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಎಲ್ಲಾ ಪಕ್ಷಗಳಲ್ಲಿರುವ ಅಹಿಂದ ನಾಯಕರನ್ನು ಒಂದೇ ವೇದಿಕೆಗೆ ಕರೆತರುವ ಚಿಂತನೆ ಇದೆ. ರಾಷ್ಟ್ರಿಯ ಮಟ್ಟದಲ್ಲಿ ಅಹಿಂದ ನಾಯಕರಾಗಿ ಗುರುತಿಸಿಕೊಂಡಿರುವ ಪ್ರಭಾವಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸುವ ಸಾಧ್ಯತೆ ಇದೆ. ಪಕ್ಷ ಅಥವಾ ಸರ್ಕಾರದ ಕಾರ್ಯಕ್ರಮವಾಗಿಸದೆ ಪ್ರತ್ಯೇಕ ಸಮಾವೇಶ ಮಾಡಿ, ಅಹಿಂದ ವರ್ಗದ ಬೇಡಿಕೆಗಳ ಬಗ್ಗೆ ಚರ್ಚೆ ನಡೆಸುವುದು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಒಕ್ಕೊರಲ ಬೆಂಬಲ ವ್ಯಕ್ತಪಡಿಸುವ ಮೂಲ ಆಶಯ ವ್ಯಕ್ತವಾಗಿದೆ ಎನ್ನಲಾಗುತ್ತಿದೆ.

ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಿದರೆ ಅಹಿಂದ ವರ್ಗ ತಿರುಗಿ ಬೀಳಲಿದೆ ಎಂಬ ಸಂದೇಶವನ್ನು ರವಾನಿಸುವುದು ಕಾರ್ಯಕ್ರಮದ ಮೂಲ ಉದ್ದೇಶ. ಆದರೆ ಅಹಿಂದ ಬೇಡಿಕೆಗಳನ್ನು ಆಧಾರವಾಗಿಟ್ಟುಕೊಂಡು ರಾಷ್ಟ್ರ ಮಟ್ಟದ ಚರ್ಚೆಗೆ ವೇದಿಕೆ ಕಲ್ಪಿಸುವುದಾಗಿ ಸಂಘಟಕರು ಸಮರ್ಥಿಸಿಕೊಳ್ಳುತ್ತಿದ್ದಾರೆ.

## ಭೀಕರ ಅಪಘಾತ 3 ಸ್ಥಳದಲ್ಲೇ ದುರ್ಮರಣ



ಮಲ್ಲಮ್ಮ ನುಡಿ ವಾರ್ತೆ

ಬೀದರ್.ನ.05:- ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ನೀಲಮ್ಮನಳ್ಳಿ ತಾಂಡಾ ಬಳಿ ಬುಧವಾರ ಬೆಳಗ್ಗೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ದುರ್ಮರಣ ಹೊಂದಿದ್ದಾರೆ. ಕಾರು ಮತ್ತು ಕೊರಿಯರ್? ವಾಹನ ಮುಖಾಮುಖಿ ಡಿಕ್ಕಿಯಾಗಿ ಕಾರಿನ ಚಾಲಕ ಕಾರಿನಲ್ಲಿದ್ದ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಧನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಧನ್ನೂರು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತರು ತೆಲಂಗಾಣ ಮೂಲದವರಾಗಿದ್ದು, ಅವರೆಲ್ಲ ತೆಲಂಗಾಣದಿಂದ ಕಲಬುರಗಿಯ ಗಾಣಗಾಪುರ ದತ್ತಾತ್ರೇಯ ದೇಗುಲಕ್ಕೆ ತೆರಳುತ್ತಿದ್ದರು ಎಂದು ತಿಳಿದುಬಂದಿದೆ. ಮೃತಪಟ್ಟವರು ರಾಜಪ್ಪ, ನವೀನ್, ನಾಗರಾಜ್ ಎಂದು ಗುರುತಿಸಲಾಗಿದೆ. ಮೃತ ನಾಗರಾಜ್ ನಾರಾಯಣ ಖೇಡ್‌ನಲ್ಲಿ ಪಿಯುಸಿ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಕೆಲಸ ಮಾಡುತ್ತಿದ್ದರು ಎನ್ನಲಾಗಿದೆ.

## ಸಿ.ಟಿ. ರವಿ ಹೇಳಿಕೆಗೆ ತೀವ್ರ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಸವಿತಾ ಸಮಾಜದ ಕುರಿತು ಬಿಜೆಪಿ ಮುಖಂಡ ಸಿ.ಟಿ. ರವಿ ನೀಡಿರುವ ಹೇಳಿಕೆಯನ್ನು ಕಾಂಗ್ರೆಸ್ ಇತರ ಹಿಂದುಳಿದ ವರ್ಗಗಳ (ಒಬಿಸಿ) ವಿಭಾಗದ ಜಿಲ್ಲಾ ಘಟಕದ ಅಧ್ಯಕ್ಷ ಶಂಕರ ರೆಡ್ಡಿ ಚಿಟ್ಟಾ ತೀವ್ರವಾಗಿ ಖಂಡಿಸಿದ್ದಾರೆ. ಸಿ.ಟಿ. ರವಿ ಅವರು ಸವಿತಾ ಸಮಾಜದ ನಿಷೇಧಿತ ಪದ ಬಳಸಿ, ಸಮಾಜವನ್ನು ಅವಮಾನಿಸಿದ್ದಾರೆ. ಹಿಂದುಳಿದ ವರ್ಗಗಳಿಗೆ ನೋವು ಉಂಟು ಮಾಡಿದ್ದಾರೆ ಎಂದು ಹೇಳಿದ್ದಾರೆ.

ಒಂದು ಸಮುದಾಯವನ್ನು ಸಾರ್ವಜನಿಕವಾಗಿ ಅಪಮಾನಿಸುವುದು ಅಕ್ಷಮ್ಯ. ಸವಿತಾ ಸಮಾಜದ ವಿರುದ್ಧದ ಸಾರ್ವಜನಿಕ ಹೇಳಿಕೆ ಸಂವಿಧಾನದ ಮೂಲ ಆಶಯಕ್ಕೆ ವಿರುದ್ಧವಾಗಿದೆ. ಸಮಾಜದಲ್ಲಿ ಜಾತಿ ಆಧಾರಿತ ತಾರತಮ್ಯ, ದ್ವೇಷ ಹಾಗೂ ಅಶಾಂತಿಗೆ ಕಾರಣ ಆಗುವಂಥದ್ದಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಸಣ್ಣ ಸಣ್ಣ ಸಮುದಾಯಗಳನ್ನು ಕೀಳಾಗಿ ಕಾಣುವುದು ಬಿಜೆಪಿಯ ಸಂಸ್ಕೃತಿಯಾಗಿದೆ. ಆ ಪಕ್ಷದ ನಾಯಕರು ಜಾತಿಗಳನ್ನು ವೃತ್ತಿಯ ಹೆಸರಲ್ಲಿ ಹಂಗಿಸುವ ಚಾಳಿ ಬೆಳೆಸಿಕೊಂಡಿದ್ದಾರೆ. ಇದಕ್ಕೆ ಸಿ.ಟಿ. ರವಿ ಅವರ ಹೇಳಿಕೆಯೇ ತಾಜಾ ಉದಾಹರಣೆ ಎಂದು ಹೇಳಿದ್ದಾರೆ. ಸವಿತಾ ಸಮಾಜವನ್ನು ಅಪಮಾನಿಸಿದ ಸಿ.ಟಿ. ರವಿ ವಿರುದ್ಧ ಬಿಜೆಪಿ ವರಿಷ್ಠರು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

## ಟ್ರಂಪ್ ಮೋದಿ ರಹಸ್ಯ ಮಾತುಕತೆ ಪ್ರಧಾನಿ ಮೌನ ಪ್ರಶ್ನಿಸಿದ ಕಾಂಗ್ರೆಸ್

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ, ನ. 5 ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಪ್ರಧಾನಿ ನರೇಂದ್ರ ಮೋದಿ ಪರಸ್ಪರ ಆಗಾಗ್ಗೆ ಮಾತನಾಡುತ್ತಾರೆ ಎಂದು ಶ್ವೆ?ತಭವನ ತಿಳಿಸಿದೆ ಆದರೂ ಮೋದಿ ಅವರು ಇದನ್ನು ಒಪ್ಪಿಕೊಳ್ಳಲು ನಿರಾಕರಿಸುತ್ತಿರುವುದು ಏಕೆ ಎಂದು ಕಾಂಗ್ರೆಸ್? ಪ್ರಶ್ನಿಸಿದೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಸಂವಹನ ಉಸ್ತುವಾರಿ, ಜೈರಾಮ್ ರಮೇಶ್ ಅವರು ವಾಷಿಂಗ್ಟನ್‌ನೊಂದಿಗಿನ ಸಂಬಂಧಗಳ ಬಗ್ಗೆ ಪ್ರಧಾನಿಯನ್ನು ಟೀಕಿಸಿದರು ಮತ್ತು ಮೇ 10 ರಂದು ಸಂಜೆ 5.37 ಕ್ಕೆ ಅಮೆರಿಕ ವಿದೇಶಾಂಗ ಕಾರ್ಯದರ್ಶಿಯ ಘೋಷಣೆಯಿಂದ ಮಾತ್ರ ಆಪರೇಷನ್ ಸಿಂಧೂರ್ ಅನ್ನು ನಿಲ್ಲಿಸಲಾಗಿದೆ ಎಂದು ಭಾರತದ ಜನರು ತಿಳಿದುಕೊಂಡರು ಎಂದು ಗಮನಸೆಳೆದರು. ಅಧ್ಯಕ್ಷ ಟ್ರಂಪ್ ಮತ್ತು ಪ್ರಧಾನಿ ಮೋದಿ ವ್ಯಾಪಾರ (ಅಥವಾ) ಒಪ್ಪಂದದ ಕುರಿತು ಪರಸ್ಪರ ಆಗಾಗ್ಗೆ ಮಾತನಾಡುತ್ತಿದ್ದಾರೆ ಎಂದು ಶ್ವೇತಭವನದ ವಕ್ತಾರೆ ಕ್ಯಾರೋಲಿನ್ ಲೀವಿಟ್ ಅವರಿಂದ ಭಾರತದ ಜನರು ತಿಳಿದುಕೊಂಡಿದ್ದಾರೆ ಎಂದು ರಮೇಶ್ ಎಕ್ ಮಾಡಿದ್ದಾರೆ.

2ನೇ ಪುಟನೋಡಿ

## ಕಬ್ಬು ಬೆಳೆಗಾರರ ಹೋರಾಟ ಹೆದ್ದಾರಿ ಬಂದ್ ವಿಜಯೇಂದ್ರ, ಅಹೋರಾತ್ರಿ ಧರಣಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ನ.5: ಕಬ್ಬು ಬೆಳೆಗೆ ಸೂಕ್ತ ಬೆಲೆ ನಿಗದಿ ಹಾಗೂ ಬಾಕಿ ಹಣವನ್ನು ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿ ರೈತರು ನಡೆಸುತ್ತಿರುವ ಹೋರಾಟ 7ನೇ ದಿನಕ್ಕೆ ಕಾಲಿಟ್ಟಿದ್ದು, ಸರ್ಕಾರ ನಡೆಸಿದ ಸಂಧಾನವು ವಿಫಲವಾಗಿದೆ.

ರೈತರ ಸಹನೆ ಕಟ್ಟೆ ಒಡೆದಿದ್ದು, ಬೆಳಗಾವಿಯ ಸುವರ್ಣಸೌಧದ ಬಳಿ ಪುಣೆ-ಬೆಂಗಳೂರು ಸಂಪರ್ಕ ಕಲ್ಪಿಸುವ ರಾಷ್ಟ್ರಿಯ ಹೆದ್ದಾರಿ 4ನ್ನು ಬಂದ್ ಮಾಡಿದ್ದಾರೆ. ಮತ್ತೊಂದೆಡೆ ಕರ್ನಾಟಕ ರಕ್ಷಣಾ ವೇದಿಕೆಯ ನೂರಾರು ಕಾರ್ಯಕರ್ತರು ಟೈರ್‌ಗಳಿಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು. ಮುನ್ನೆಚ್ಚರಿಕಾ ಕ್ರಮವಾಗಿ ಪೊಲೀಸರು ಕೆಲವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಬೆಳಗಾವಿ, ಚಿಕ್ಕೋಡಿ, ಹುಕ್ಕೇರಿ ಸೇರಿದಂತೆ ಮತ್ತಿತರ ಕಡೆ ನಡೆಸುತ್ತಿರುವ ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಸರ್ಕಾರ ಕಬ್ಬಿಗೆ ಬೆಲೆ ನಿಗದಿಪಡಿಸುವವರೆಗೂ ಹೋರಾಟ ಕೈಬಿಡುವುದಿಲ್ಲ ಎಂದು ರೈತರು ಗುಡುಗಿದ್ದಾರೆ.

ಆದರೆ ಪಟ್ಟು ಸಡಿಲಿಸದ ರೈತರು ನಮಗೆ ಸ್ಥಳದಲ್ಲೇ ದರ ಘೆಟಿಜಜಿಟಿಜಷಣೆ ಮಾಡಬೇಕು. ಅಲ್ಲಿಯವರೆಗೂ ಯಾವುದೇ ಕಾರಣಕ್ಕೂ ಈ ಸ್ಥಳದಿಂದ ಕದಲುವುದಿಲ್ಲ ಎಂದರು. ಇನ್ನೊಂದೆಡೆ ರೈತರು ಹೆದ್ದಾರಿಗಳನ್ನು ಬಂದ್ ಮಾಡಿ ಅರೆಬೆತ್ತಲೆ ಮೆರವಣಿಗೆ ನಡೆಸಿ ಕೇಂದ್ರ, ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ಮುಖ್ಯಮಂತ್ರಿ, ಸಚಿವರು, ಸಂಸದರು, ಶಾಸಕರು ಸೇರಿದಂತೆ ಜನಪ್ರತಿನಿಧಿಗಳು ಕಣರೆಯಾಗಿದ್ದಾರೆ ಇವರನ್ನು ಹುಡುಕಿಕೊಡಿ ಎಂದು ಎಂದು ಶವಯಾತ್ರೆಯ ಅಣಕು ಪ್ರದರ್ಶನ ನಡೆಸಿದರು. ಇನ್ನು ಕೆಲವು ರೈತರು ಬಾರುಕೋಲು ಚಳವಳಿಯನ್ನೂ ಸಹ ನಡೆಸಿ ತಮ ಆಕ್ರೊ?ಶವನ್ನು ಹೊರಹಾಕಿದರು.

## ಸಾರ್ವಜನಿಕರ, ರೈತರ, ಕೃಷಿಕರ ನೆರವಿಗೆ ಮಾಣಿಕ ಪ್ರಭು ಸಹಕಾರಿ ಮುಂದೆ ಬರಲಿ: ಅಭಿಷೇಕ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಗ್ರಾಮೀಣ ಆರ್ಥಿಕತೆಗೆ ಬಲ ನೀಡುವ ಕಾರ್ಯದಲ್ಲಿ ಸಹಕಾರಿ ಸಂಘಗಳ ಪಾತ್ರ ಮಹತ್ತರ. ಈ ಹಿನ್ನೆಲೆಯಲ್ಲಿ, ಸಾರ್ವಜನಿಕರು, ರೈತರು ಮತ್ತು ಕೃಷಿಕರ ಆರ್ಥಿಕ ಸಂಕಷ್ಟ ನಿವಾರಣೆಗೆ ಶ್ರೀ ಮಾಣಿಕಪ್ರಭು ಸಹಕಾರಿ ಸಂಸ್ಥೆ ಮುಂದಿನ ದಿನಗಳಲ್ಲಿ ಹೆಚ್ಚು ಕಾರ್ಯನಿರ್ವಹಿಸಬೇಕೆಂದು ಡಿಸಿಸಿ ಬ್ಯಾಂಕ್

2ನೇ ಪುಟನೋಡಿ

## ಸ್ವಾಮೀಜಿಗಳು, ಮಂತ್ರಿಗಳು, ಶಾಸಕರು ಭಾಗಿ ಸಕಲ ಸರ್ಕಾರಿ ಗೌರವದೊಂದಿಗೆ ಶಾಸಕ ಮೇಟಿ ಅಂತ್ಯ ಸಂಸ್ಕಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.5- ಮಂಗಳವಾರ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದ ಬಾಗಲಕೋಟೆ ಶಾಸಕ ಎಚ್.ವೈ.ಮೇಟಿ ಅವರ ಅಂತ್ಯಸಂಸ್ಕಾರ ಬುಧವಾರ ಅವರ ಹುಟ್ಟೂರು ತಿಮ್ಮಾಪೂರದ ಅವರ ತೋಟದಲ್ಲಿ ಜರುಗಿತು. ನಾಡಿನ ಹಲವಾರು ಜನಹರಗುರು ಚರಮೂರ್ತಿಗಳು, ಮುಖ್ಯಮಂತ್ರಿಗಳಾದಿಯಾಗಿ, ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರು, ಮಾಜಿ ಶಾಸಕರು, ಗಣ್ಯರು ಅಂತ್ಯಸಂಸ್ಕಾರದಲ್ಲಿ ಪಾಲ್ಗೊಂಡು ಅಗಲಿದ ನಾಯಕನಿಗೆ ಅಂತಿಮ ನಮನ ಸಲ್ಲಿಸಿದರು. ಮೇಟಿ ಅವರ ಪಾರ್ಥಿವ ಶರೀರ ಬೆಳಿಗ್ಗೆ 8 ಗಂಟೆಗೆ ಬಾಗಲಕೋಟೆ

2ನೇ ಪುಟನೋಡಿ

## ಸಂಭ್ರಮೋಲ್ಲಾಸದಿಂದ ಗುರುನಾನಕ ಜಯಂತಿ ಆಚರಣೆ






ಮಲ್ಲಮ್ಮ ನುಡಿ ವಾರ್ತೆ

ಬೀದರ್.ನ.05: ಸಿಖ್ ಧರ್ಮದ ಸಂಸ್ಥಾಪಕ ಗುರುನಾನಕದೇವ ಅವರ 556ನೇ ಜಯಂತಿಯನ್ನು ನಗರದಲ್ಲಿ ಇಂದು (ಬುಧವಾರ) ಶ್ರದ್ಧಾ, ಭಕ್ತಿ ಹಾಗೂ ಸಂಭ್ರಮೋಲ್ಲಾಸದಿಂದ ಆಚರಿಸಲಾಯಿತು.

ದಿನವಿಡೀ ನಗರದ ಗುರುನಾನಕ ಝೀರಾದಲ್ಲಿ (ಗುರುದ್ವಾರ) ಜಾತ್ರೆಯ ವಾತಾವರಣ ಇತ್ತು. ದೇಶದ ವಿವಿಧ ಭಾಗಗಳಿಂದ ಸಿಖ್ ಧರ್ಮೀಯರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ದರ್ಶನ ಪಡೆದರು.

ಅನ್ಯಧರ್ಮೀಯರು, ಸ್ಥಳೀಯರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ಕೊಟ್ಟು ಧಾರ್ಮಿಕ ಕಾರ್ಯಗಳನ್ನು ಕಣ್ತುಂಬಿಕೊಂಡರು.

ಬುಧವಾರ ಬೆಳಿಗ್ಗೆ ಗುರುದ್ವಾರದಲ್ಲಿ ವಿಶೇಷ ಪೂಜೆ, ಪ್ರಾರ್ಥನೆ ನಡೆಯಿತು. ಆನಂತರ ಗುರುಗ್ರಂಥ ಸಾಹಿಬ್ ಪಠಣ ಜರುಗಿತು. ಕೀರ್ತನೆ, ಪ್ರವಚನ ಕಾರ್ಯಕ್ರಮಗಳು ನಡೆದವು. ಭಕ್ತರು ಸರತಿ ಸಾಲಲ್ಲಿ ಹೋಗಿ ಗುರುಗ್ರಂಥ ಸಾಹೀಬ್ ದರ್ಶನ ಪಡೆದರು.

ಸಂಸದ ಸಾಗರ ಖಂಡ್ರೆ, ಗುರುದ್ವಾರ ನಾನಕ್ ಝೀರಾ ಪ್ರಬಂಧಕ ಕಮಿಟಿ ಅಧ್ಯಕ್ಷ ಸರ್ದಾರ್ ಬಲಬೀರ್ ಸಿಂಗ್, ಸದಸ್ಯರಾದ ಮನಪ್ರೀತ್ ಸಿಂಗ್, ಜಸ್ಪ್ರೀತ್ ಸಿಂಗ್ ಸೇರಿದಂತೆ ಹಲವು ಗಣ್ಯರು ಸಹ ಭೇಟಿ ನೀಡಿದರು. ಜಯಂತಿ ಅಂಗವಾಗಿ ಇಡೀ ಗುರುದ್ವಾರ ಹಾಗೂ ಅದರ ಪರಿಸರವನ್ನು ತಳಿರು ತೋರಣ, ಹೂಗಳಿಂದ ಸಿಂಗರಿಸಿ, ವಿದ್ಯುತ್ ದೀಪಾಲಂಕಾರ ಮಾಡಲಾಗಿತ್ತು.

**ಭವ್ಯ ಮೆರವಣಿಗೆ:**

ಗುರುನಾನಕ ದೇವ ಅವರ ಜಯಂತಿ ಅಂಗವಾಗಿ ಬುಧವಾರ ಸಂಜೆ ನಗರದಲ್ಲಿ ಭವ್ಯ ಮೆರವಣಿಗೆ ನಡೆಯಿತು. ನಗರದ ಕೇಂದ್ರ ಬಸ್ ನಿಲ್ದಾಣ ಸಮೀಪದ ಗುರುದ್ವಾರದಿಂದ ಡಾ.ಬಿ.ಆರ್. ಅಂಬೇಡ್ಕರ್-ವೃತ್ತದ ವರೆಗೆ ಮೆರವಣಿಗೆ ನಡೆಯಿತು. ನ್ಯೂ ಟೌನ್ ಪೊಲೀಸ್ ಠಾಣೆ ಮಾರ್ಗವಾಗಿ ನಾಂದೇಡ್-ಹೈದರಾಬಾದ್ ಮುಖ್ಯರಸ್ತೆ

2ನೇ ಪುಟನೋಡಿ

## ಪಿಡಿಒ ಲೋಕಾಯುಕ್ತ ಬಲೆಗೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್.ನ.05:- ಔರಾದ್ ಡಿಜಿಟಲ್ ಖಾತೆ ಮಾಡಿಕೊಡಲು ಹಣ ನೀಡುವಂತೆ ಒತ್ತಾಯ ಮಾಡಿದ ಧೂಪತಮಹಗಾಂವ್ ಗ್ರಾಮಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಅನಿತಾ ರಾಠೋಡ್ ?12 ಸಾವಿರ ಹಣ ಪಡೆಯುವಾಗ ಬುಧವಾರ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಜೀರ್ಗಾ (ಬಿ) ಗ್ರಾಮದ ರಾಜ ಕುಮಾರ ಪಾಟೀಲ ಅವರು ತಮ್ಮ ನಿವೇಶನ ಸಂಖ್ಯೆ 5 ಹಾಗೂ 6ಕ್ಕೆ ಡಿಜಿಟಲ್ ಖಾತೆ ಮಾಡಿಕೊಡಲು ಅರ್ಜಿ ಸಲ್ಲಿಸಿದರು. ಇದಕ್ಕಾಗಿ ಪಿಡಿಒ ಅನಿತಾ ರಾಠೋಡ್ ಅವರು ಅವರ ಪತಿ ದಯಾನಂದ ರಾಠೋಡ್ ಮೂಲಕ ಹಣದ ಬೇಡಿಕೆ ಇಟ್ಟಿದ್ದರು ಎಂದು ಲೋಕಾಯುಕ್ತರಿಗೆ ದೂರು ನೀಡಲಾಗಿತ್ತು. ದೂರು ಆಧರಿಸಿ ಬುಧವಾರ ಧೂಪತಮಹಾಗಾಂವ್

2ನೇ ಪುಟನೋಡಿ

## ಜೂಜಾಟ: 7 ಜನರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.5- ತಾಲ್ಲೂಕಿನ ಉದನೂರ ಗ್ರಾಮದಿಂದ ನಂದಿಕೂರ ಗ್ರಾಮಕ್ಕೆ ಹೋಗುವ ಸಾರ್ವಜನಿಕ ರಸ್ತೆ ಪಕ್ಕದ ಖಾಲಿ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಮೃತ್ಯುಂಜಯ, ಯಲ್ಲಪ್ಪ, ಅಶೋಕ ಕಟಕೆ, ಶಿವಕುಮಾರ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ 7 ಜನರನ್ನು ಬಂಧಿಸಿದ್ದಾರೆ.

ಶಿವಶರಣಪ್ಪ ಯಮಂಟಿ, ಶಿವರಾಜ ಬಿರಾದಾರ, ಮಹಾಂತಪ್ಪ ಅಲ್ಲಾಪೂರ, ಲಕ್ಷ್ಮೀಕಾಂತ ಧಂಗಾಪೂರ, ಮಲ್ಲಿಕಾರ್ಜುನ ಕಪನೂರ, ಶರಣಪ್ಪ ಸಿರಸಗಿ, ಜೈಭೀಮ ಕೊರಳ್ಳಿ ಎಂಬುವವರನ್ನು ಬಂಧಿಸಿ 17,320 ರೂ.ನಗದು ಜಪ್ತಿ ಮಾಡಿದ್ದಾರೆ. ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ವರದಿಗಾರರು ಬೇಕಾಗಿದ್ದಾರೆ**

ಕನ್ನಡ ಕಿರಣ

ಮಲ್ಲಮ್ಮ ನುಡಿ
ಪ್ರಾದೇಶಿಕ ಕನ್ನಡ ದಿನಪತ್ರಿಕೆ | ಸಂಪಾದಕರು: ರಮೇಶರೆಡ್ಡಿ | 9448 604450
Mallammanudi Regional News Paper | Editor: Ramesh Reddy | RNI NO:KARKAN/2011/48371

ಪ್ರಾದೇಶಿಕ ಕನ್ನಡ ದೈನಿಕ

ಬೀದರ, ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟವಾಗುತ್ತಿರುವ ನಮ್ಮ ಪತ್ರಿಕೆಗೆ ಮೇಲಿನ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲೆ ಹಾಗೂ ತಾಲೂಕುಗಳಿಗೆ ಅರೆಕಾಲಿಕ ವರದಿಗಾರರು ಬೇಕಾಗಿದ್ದಾರೆ. ಆಸಕ್ತರು ಕೂಡಲೆ ಈ ಕೆಳಗಿನ ಇಮೇಲ್ ಗೆ ತಮ್ಮ ಪೂರ್ಣ ವಿವರದೊಂದಿಗೆ ಅರ್ಜಿ ಕಳುಹಿಸಿ ಕೊಡಬಹುದು.

mallammanudi@gmail.com

ಅನುಭವ ಇರುವವರಿಗೆ ಮೊದಲ ಆದ್ಯತೆ
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
ಮೋ : 9449732000

ಐಸಿಸಿ ಟಿ20 ರ್‍ಯಾಂಕಿಂಗ್: ಅಭಿಷೇಕ್, ವರುಣ್ ಅಗ್ರಸ್ಥಾನ ಅಬಾಧಿತ

## ಸಿಬ್ಬಂದಿ ಕೊರತೆ ನಿವಾರಿಸುವ ಭರವಸೆ : ಜೆಸ್ಕಾಂ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ 05: ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ ಶಹಾಪೂರ ಕಾರ್ಯ ಮತ್ತು ಪಾಲನೆ ಉಪವಿಭಾಗದ ಕಚೇರಿಗೆ ಇಂದು ಭೇಟಿ ನೀಡಿದ ಜೆಸ್ಕಾಂನ ನೂತನ ಅಧ್ಯಕ್ಷರಾದ ಪ್ರವೀಣ ಪಾಟೀಲ್ ಹರವಾಳ ಅವರು ಸಿಬ್ಬಂದಿಗಳ ಸಮಸ್ಯೆಗಳನ್ನು ಆಲಿಸಿದರು.


ಉಪ ವಿಭಾಗಕ್ಕೆ ಕುದ್ದಾಗಿ ಭೇಟಿ ನೀಡಿ ಸಿಬ್ಬಂದಿಗಳ ಸಮಸ್ಯೆ ಹಾಗು ವಿದ್ಯುತ್ ಕರವಸೂಲಿ ಬಗ್ಗೆ ಮಾಹಿತಿಯನ್ನು ಕಲೆಹಾಕಿದರು. ಸಿಬ್ಬಂದಿಗಳ ಕೊರತೆ ಹೆಚ್ಚಾಗಿರುವುದರಿಂದ ಕೆಲಸದಲ್ಲಿ ಅಡಚಣೆಯಾಗುತ್ತಿದೆ, ಅಲ್ಲದೇ ಕಾರ್ಯಗಳು ಬೇಗ ಮುಗಿಯದೇ ಗ್ರಾಹಕರಿಗೆ ತೊಂದರೆಯಾಗುತ್ತಿದೆ. ಈ ಕುರಿತು ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಮಾತಾಡಿ, ಸರಕಾರದ ಗಮನಕ್ಕೆ ತರುತ್ತೇನೆ. ಜನರ ತೊಂದರೆಗಳಿಗೆ ಶ್ರಮಿಸುತ್ತಿರುವ ಜೆಸ್ಕಾಂ ಸಿಬ್ಬಂದಿಗಳ ತೊಂದರೆಯನ್ನು ಆಲಿಸಿದ್ದೇನೆ, ಶೀಘ್ರದಲ್ಲಿ ಇದ-ಕ್ಕೆ ಪರಿಹಾರ ಒದಗಿಸುವಂತೆ ಪ್ರಯತ್ನಿಸುತ್ತೇನೆ ಎಂದು ಭರಸವೆ ನೀಡಿದರು.

ಸಲಂ ಏರಿಯಾ, ಬಡವರ ಮನೆಗಳು ಮತ್ತು ತಗಡು ಇರುವ ಮನೆಗಳನ್ನು ಹೊಂದಿರುವ ಏರಿಯಾಗಳಲ್ಲಿ ಹಳೆಯ ಮತ್ತು ಜೊತು ಬಿದ್ದ ವಿದ್ಯುತ್ ತಂತಿಯನ್ನು ಗುರುತಿಸಿ, ಹೊಸ ವಿದ್ಯುತ್ ತಂತಿಯನ್ನು ಎತ್ತರಕ್ಕೆ ಅವಳವಡಿಸಿ, ಈ ಕೆಲಸವನ್ನು ನಿಮ್ಮ ವಯಕ್ತಿಕ ಕೆಲಸವೆಂದು ಭಾವಿಸಿ ಮಾಡಿ, ಎಲ್ಲೂ ಕೂಡು ಡೆಂಜರ್ ಜೋನ್ ಕಾಣಿಸಬಾರದು ನಮ್ಮ ಈ ಒಂದು ಸಣ್ಣ ಅಭಿವೃದ್ಧಿ ಅವರ ಜೀವ ರಕ್ಷಣೆಗೆ ಸಹಾಯಕವಾಗುತ್ತದೆ ಎಂದು ಹೇಳಿದರು.

ಈ ಭಾಗದಲ್ಲಿ ಕಾಟನ್ ಫ್ಯಾಕ್ಟರಿಗಳು ಹೆಚ್ಚಾಗಿದ್ದು, ವಿದ್ಯುತ್ ವ್ಯತ್ಯಯ ಸಮಸ್ಯೆ ಹೆಚ್ಚಾಗಿದೆ ಎಂದು ದೂರುಗಳು ಕೇಳಿಬರುತ್ತಿವೆ, ಅದನ್ನು ಬಗೆಹರಿಸುವ ಪ್ರಯತ್ನ ಮಾಡುತ್ತವೆ ಎಂದು ಹೇಳಿದರು. ಜೊತೆಗೆ ಗ್ರಾಹಕರಿಗೆ ಲಭ್ಯವಿರುವ 24ಘ7 ಸಹಾಯವಾಣಿ ಬಗ್ಗೆ ತಿಳಿಸಿ ಎಂದರು.

## ಏಕರೂಪ ಕಾಲಾವಧಿಯನ್ನು ನಿಗದಿಪಡಿಸಲು ಸೂಚನೆ

ಯಾದಗಿರಿ : ನವೆಂಬರ್ 05, (ಕ.ವಾ) : ಸಕಾಲ ಅಧಿಸೂಚಿತ ಸೇವೆಗಳ ವಿತರಣೆ ಸಂಬಂಧ ನಾಗರಿಕರಿಂದ ಸಲ್ಲಿಸಲ್ಪಡುವ ಸಕಾಲ ಮೊದಲದ ಹಾಗೂ ಎರಡನೇ ಮೇಲ್ಮನವಿಗಳನ್ನು ಇತ್ಯರ್ಥ ಪಡಿಸಲು ಏಕರೂಪ ಕಾಲಾವಧಿಯನ್ನು ನಿಗದಿಪಡಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ ಜನನ ಮರಣ ಮುಖ್ಯ ನೊಂದಣಾಧಿಕಾರಿಗಳು ಹಾಗೂ ಅಪರ ನಿರ್ದೇಶಕರು, ಬೆಂಗಳೂರು ಅವರ ಸಕಾಲ ಅಧಿಸೂಚಿತ ಸೇವೆಗಳ ವಿತರಣೆ ಸಂಬಂಧ ನಾಗರಿಕರಿಂದ ಸಲ್ಲಿಸಲ್ಪಡುವ ಸಕಾಲ ಮೊದಲನೆ ಹಾಗೂ ಎರಡನೇ ಮೇಲ್ಮನವಿಗಳನ್ನು ಇತ್ಯರ್ಥ ಪಡಿಸಲು ಏಕರೂಪ ಕಾಲಾವಧಿಯನ್ನು ನಿಗದಿಪಡಿಸುವ ಕುರಿತು ಸಕಾಲ ಮಿಷನ್ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಅವರ ಹೊರಡಿಸಿರುವ ಸಕಾಲ ಕಾಯ್ದೆಯ ಕಲಂ 4ರ ಅಡಿಯಲ್ಲಿನ 2025ರ ಆಗಸ್ಟ್ 1 ರಂದು ತಿದ್ದುಪಡಿ ಅಧಿಸೂಚನೆಯನ್ನು ನೀಡಲಾಗಿದೆ, ಅದರಂತೆ ಕ್ರಮ ವಹಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಲಬುರ್ಗಿ ಹಾಗೂ ಯಾದಗಿರಿ ಜಿಲ್ಲೆಯ ಡಿಸಿಸಿ ಬ್ಯಾಂಕಿನ ನೂತನ ನಿರ್ದೇಶಕರಾಗಿ 2ನೇ ಬಾರಿ ಅವಿರೋಧವಾಗಿ ಗುರುನಾಥ್ ರೆಡ್ಡಿ ಆಯ್ಕೆ. ನಮ್ಮೂರಿನ ಹೆಮ್ಮೆಯ ಹಾಗೂ ನೆಚ್ಚಿನ ನಾಯಕರಾದ ಸನ್ಮಾನ್ಯ ಶ್ರೀ ಗುರುನಾಥರಡ್ಡಿ ಪೊಲೀಸ್ ಪಾಟೀಲ್ ಹಳಿಸಗರ ಅವರಿಗೆ ನಗರಸಭೆಯ ಸದಸ್ಯ ಶರಣಪ್ಪ ಮುಂಡಾಸ್. ಹಿರಿಯ ಕಾಂಗ್ರೇಸ್ ಪಕ್ಷದ ಮುಖಂಡರಾದ ಭಾಗಪ್ಪ ಪೂಜಾರಿ ಮುಂಡಾಸ್. ಭಾಗಪ್ಪ ಮುಂಡಾಸ್ ದೊಡ್ಡ ಭೀಮರಾಯ ಮುಂಡಾಸ್ ಮೆರೆಪ್ಪ ಮುಂಡಾಸ್. ಲಕ್ಷ್ಮಣ ಮುಂಡಾಸ್, ಸನ್ಮಾನಿಸಿದರು ಈ ಸಂದರ್ಭದಲ್ಲಿ ಸಿದ್ದಲಿಂಗಪ್ಪ ಬಬಲಾದಿ, ಸುರೇಶ ಮುಂಡಾಸ್, ಶರಣಪ್ಪ ರಾಸ್ತಾಪುರ, ಮಹಾಲಿಂಗಪ್ಪ ಮುಂಡಾಸ್,ಸಿದ್ದು ಮುಂಡಾಸ್ ಇತರರು ಇದ್ದರು

ಮಲ್ಲಮ್ಮ ನುಡಿ ಚಿತ್ರ

## ವಿಕೆ ಪಾಟೀಲ್ ಜನ್ಮದಿನ ಕಾರ್ಯಕ್ರಮ ಇಂದು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ, ತಾಲೂಕಿನ ಖಟಕ ಚಿಂಚೋಳಿ ಕ್ರಾಸ್ ಸಮೀಪದ ನೀಲಮ್ಮ ವೀರಬಸಪ್ಪ ಪಾಟೀಲ್ ಕಲ್ಯಾಣ ಮಂಟಪದಲ್ಲಿ ಬುಧವಾರ ಬೆಳಿಗ್ಗೆ 10 ಗಂಟೆಗೆ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಕರ್ನಾಟಕ ರಾಜ್ಯೋತ್ಸವ ಹಾಗೂ ದಿವಂಗತ ವಿ.ಕೆ.ಪಾಟೀಲ್ ಜನ್ಮದಿನೋತ್ಸವ ಮತ್ತು ಶಾಲಾ ವಾರ್ಷಿಕೋತ್ಸವ ಸಮಾರಂಭ ಆಯೋಜಿಸಲಾಗಿದೆ.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಮಹಾಲಿಂಗ ಸ್ವಾಮೀಜಿ ನೇತೃತ್ವ ವಹಿಸುವರು. ಸಂಸದ ಸಾಗರ ಖಂಡ್ರೆ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ವಿ.ಕೆ.ಪಾಟೀಲ್ ಸಮುಚ್ಛಯದ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಮುಗನೂರ ಅಧ್ಯಕ್ಷತೆ ವಹಿಸಲಿದ್ದಾರೆ.

ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ, ವೀರೇಂದ್ರ ಪಾಟೀಲ್, ಶಾಂತಕುಮಾರ ರಾಗಾ, ಪ್ರಭಾಕರ ಪಾಟೀಲ್, ಚನ್ನಬಸಪ್ಪ ತಳವಾಡೆ, ಆಡಳಿತಾಧಿಕಾರಿ ಮೋಹನ ರೆಡ್ಡಿ ಸೇರಿದಂತೆ ಮುಂತಾದವರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಯುವತಿಯರು ಉದ್ಯಮ ಮಾಡಲು ಸರ್ಕಾರದ ಯೋಜನೆಗಳು ಸದ್ಬಳಕೆ ಮಾಡಿಕೊಳ್ಳಬೇಕು-ಲಕ್ಷ್ಮೀಕಾಂತ

ಬೀದರ,ನವೆಂಬರ್.04(ಕರ್ನಾಟಕ ವಾರ್ತೆ):- ಯವತಿಯರಿಗೆ ಉದ್ಯಮ ಮಾಡಲು ಸರ್ಕಾರದಿಂದ ಕೆಲವೊಂದು ಯೋಜನೆಗಳು ಇದ್ದು, ಅವುಗಳನ್ನು ಸರಿಯಾಗಿ ಸದ್ಬಳಕೆ ಮಾಡಿಕೊಂಡಾಗ ನಿಮ್ಮ ಜೀವನ ಸಾರ್ಥಕವಾಗುತ್ತದೆ ಎಂದು ಬೀದರ ಸರ್ಕಾರಿ ಐಟಿಐ ಕಾಲೇಜಿನ ಪ್ರಾಂಶುಪಾಲರಾದ ಲಕ್ಷ್ಮೀಕಾಂತ ಅವರು ತಿಳಿಸಿದರು.

ಅವರು ಇತ್ತೀಚಿಗೆ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಬೀದರ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಬೆಂಗಳೂರು ಇವರ ಸಹಯೋಗದಲ್ಲಿ ಬೀದರ ನಗರದ ಸಕಾರಿ ಐಟಿಐ ಕಾಲೇಜುನಲಿ ಹಮ್ಮಿಕೊಂಡಿದ್ದ ಪರಿಶಿಷ್ಟ ಜಾತಿ ಮಹಿಳಾ ಭಾವಿ ಉದ್ಯಮಶೀಲ ಯವತಿಯರಿಗೆ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಸಾಧನೆ ಮಾಡಬೇಕಾದರೆ ನೀವು ನಿರಂತರ ಪರಿಶ್ರಮ, ಭಧ್ಧತೆ, ತ್ಯಾಗ, ಬೇರೆ ಬೇರೆ ಸಲಹೆಗನ್ನು ಪಡೆದು ಸಾಧಿಸಬಹುದು. ಕೈಗಾರಿಕಾ ಮತ್ತು ಸೇವಾ ವಿಭಾಗದಲ್ಲಿ ಉದ್ಯಮಗಳನ್ನು ಪ್ರಾರಂಭಿಸಲು ಸಾಕಷ್ಟು ಅವಕಾಶಗಳು ಲಭ್ಯವಿರುತ್ತದೆ. ನಮ್ಮ ದೇಶದಲ್ಲಿ ಯುವ ಜನ ಹೆಚ್ಚಿನ ಸಂಖೆಯಲ್ಲಿದ್ದು ಬುದ್ಧಿವಂತರಿದ್ದಾರೆ ಹಾಗೂ ಸಣ್ಣ ಪ್ರಮಾಣದ ಉತ್ಪಾದನಾ ಚಟುವಟಿಕೆ ಮತ್ತು ಸೇವಾ ಚಟುವಟಿಕೆಗಳನ್ನು ಸ್ಥಾಪಿಸಲು ಹೆಚ್ಚಿನ ಅವಕಶವಿರುತ್ತದೆ ಎಂದು ಹೇಳಿದರು. ಸಮಾರಂಭದಲ್ಲಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರಗಳು ವಿತರಿಸಿದರು.

ಈ ಸಂದರ್ಭದಲ್ಲಿ ಬೀದರ ಭಾರತೀಯ ಸ್ಟೇಟ್ ಬ್ಯಾಂಕಿನ ವ್ಯವಸ್ಥಾಪಕರಾದ ಸುನೀಲಕುಮಾರ, ಸಿಡಾಕ್ ಕಲಬುರಗಿ ಉಪನ್ಯಾಸಕರಾದ ಸೈಯದ ಅಶ್ಫಕ ಅಹ್ಮದ ಸ್ಭೆರಿದಂತೆ ಇತರರು ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ದಿಗೆ ಒತ್ತು-ಯು.ನಿಸಾರ ಅಹಮದ್



ಮಲ್ಲಮ್ಮ ನುಡಿ ವಾರ್ತೆ

ಬೀದರ,ನವೆಂಬರ್.04(ಕರ್ನಾಟಕ ವಾರ್ತೆ):-ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ವಿಶೇಷ ಒತ್ತು ಕಾಳಜಿ ನೀಡುವಂತೆ ಅಲ್ಪಸಂಖ್ಯಾತರ ಅಯೋಗದ ಅಧ್ಯಕ್ಷರಾದ ಯು.ನಿಸಾರ ಅಹಮದ್ ಇಂದಿಲ್ಲಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಅಲ್ಪಸಂಖ್ಯಾತರ ವಿವಿಧ ಸಮುದಾಯಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಮುಸ್ಲಿಂ ಹಾಗೂ ಸಿಖ್ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಮುಸ್ಲಿಂ ಸಮುದಾಯದ ಮಕ್ಕಳು ಶಾಲೆಯಿಂದ ಹೆಚ್ಚು ಹೊರಗುಳಿದವರಾಗಿದ್ದು ಈ ಬಗ್ಗೆ ಅಧಿಕಾರಿಗಳು ಗಮನ ನೀಡುವಂತೆ ತಿಳಿಸಿದರು.

2011ರ ಜನಗಣತಿ ಪ್ರಕಾರ ಶೇ.43 ರಷ್ಟು ಮುಸ್ಲಿಂ ಜನಸಂಖ್ಯೆ ಅಶಿಕ್ಷಿತರಾಗಿದ್ದು, ಶೇ.15% ಮಕ್ಕಳು ಶಾಲೆಯಿಂದ ಹೊರಗುಳಿದಿದ್ದಾರೆ. ಸಮೀಕ್ಷೆ ಪ್ರಕಾರ ಶೇ.6 ರಷ್ಟು ಮಕ್ಕಳು 10ನೇ ತರಗತಿಗೆ ದಾಖಲಾಗಿರುತ್ತಾರೆ. ಡಿಡಿಪಿಐ ಹಾಗೂ ಮಹಿಳಾ ಮಕ್ಕಳ ಅಧಿಕಾರಿಗಳು ಸಮಗ್ರ ಶಿಕ್ಷಣ ಯೋಜನೆ ಅಧಿಕಾರಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳು ಈ ನಿಟ್ಟಿನಲ್ಲಿ ಅಲ್ಪಸಂಖ್ಯಾತರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಒತ್ತು ನೀಡಬೇಕೆಂದು ತಿಳಿಸಿದರು.

ಅಂಗನವಾಡಿಯಿಂದ ಪ್ರಾಥಮಿಕ ಶಾಲೆಗೆ ಮಕ್ಕಳು ಕಡ್ಡಾಯವಾಗಿ ದಾಖಲಾಗುವಂತೆ ಅಧಿಕಾರಿಗಳು ನಿಗಾ ವಹಿಸಬೇಕು. ಜಿಲ್ಲೆಯಲ್ಲಿ ಈ ಬಗ್ಗೆ ಸಮೀಕ್ಷೆ ನಡೆಸಿ ಒಂದು ತಿಂಗಳಲ್ಲಿ ಆಯೋಗಕ್ಕೆ ವರದಿ ಸಲ್ಲಿಸುವಂತೆ ಮಹಿಳಾ ಮಕ್ಕಳ ಕಲ್ಯಾಣ ಅಧಿಕಾರಿಗಳಿಗೆ ಸೂಚಿಸಿದರು.

ಬೀದರ ಜಿಲ್ಲೆಯ ಬಿದರಿ ಕಲೆ, ಗೋಮಿತ್ರಿ ಸೀರೆ ನೇಕಾರರು ಹಾಗೂ ಸಿಕ್ಕಲಗಾರರ ಸಮುದಾಯದ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ವಿವಿಧ ಅಧಿಕಾರಿಗಳು ಯೋಜನಾ ವರದಿಯೊಂದನ್ನು ಶೀಘ್ರವೇ ರೂಪಿಸಿ ಆಯೋಗಕ್ಕೆ ಕಳುಹಿಸುವಂತೆ ಅಧ್ಯಕ್ಷರು ತಿಳಿಸಿದರು.

ಬಿದರ ಕಲೆಯನ್ನು ಹೆಚ್ಚೆಚ್ಚು ಪ್ರೋತ್ಸಾಹಿಸಲು ಸಾಕಷ್ಟು ಅವಕಾಶವಿದ್ದು, ಈ ನಿಟ್ಟಿನಲ್ಲಿ 6 ತಿಂಗಳ ವಿಶೇಷ ಕೋರ್ಸ ಒದಗಿಸುವ ಯೋಜನೆಯನ್ನು ಆಯೋಗದಿಂದ ಆರಂಭಿಸುವ ಬಗ್ಗೆ ಚಿಂತಿಸಲಾಗುವುದೆಂದು ಆಯೊಗದ ಅಧ್ಯಕ್ಷರಾದ ಯು.ನಿಸಾರ ಅಹಮದ್ ತಿಳಿಸಿದರು.

ಬಸವಕಲ್ಯಾಣದಲ್ಲಿ ಗೋಮಿತ್ರಿ ಸೀರೆಗಳನ್ನು ನೇಯುವ ಅಲ್ಪಸಂಖ್ಯಾತರ ನೇಕಾರರ ಸಮುದಾಯವಿದ್ದು ಅವರ ಅಭಿವೃದ್ಧಿಗೆ ವಿಶೇಷ ಯೋಜನೆ ರೂಪಿಸುವಂತೆ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಅಧ್ಯಕ್ಷರ ಗಮನಕ್ಕೆ ತಂದರು. ಅಲ್ಲದೇ ಸಿಕ್ಕೆಲಗಾರರ ಎಂಬ ಚಾಕು, ಚೂರಿ ಹರಿತಗೊಳಿಸುವ ಸಮುದಾಯದ ಅಭಿವೃದ್ಧಿಗೂ ಸಹ ಯೋಜನೆವೊಂದನ್ನು ರೂಪಿಸಲಾಗುವುದು ಎಂದು ಆಯೋಗದ ಅಧ್ಯಕ್ಷರು ತಿಳಿಸಿದರು.

ಕರ್ನಾಟಕ ಅಲ್ಪಸಂಖ್ಯಾತರ ಅಬಿವೃದ್ಧಿ ಕಾರ್ಪೋರೇಶನ್ ಕೌಶಲ್ಯ ಅಭಿವೃದ್ಧಿ ಅಧಿಕಾರಿ, ಜವಳಿ ಇಲಾಖೆ ಹಾಗೂ ಅಲ್ಪಸಂಖ್ಯಾತರ ಇಲಾಖೆ ಅಧಿಕಾರಿಗಳು ಒಟ್ಟಾಗಿ ಸೇರಿ ಬಿದರಿ, ಗೋಮಿತ್ರಿ ಹಾಗೂ ಸಿಕ್ಕೆಲಗಾರ ಕ್ಲಸ್ಟರ್ ನಿರ್ಮಿಸಲು ಯೋಜನೆಯೊಂದನ್ನು ನಿರ್ಮಿಸಿದಲ್ಲಿ ಮುಂಬರುವ ಬಜೇಟನಲ್ಲಿ ವಿಶೇಷ ಅನುದಾನ ಒದಗಿಸಲು ಕ್ರಮ ಕೈಗೊಳ್ಳಲಾಗುವುದೆಂದರು.

ಈ ಸಭೆಯಲ್ಲಿ ಅಲ್ಪಸಂಖ್ಯಾತರ ಆಯೋಗದ ವಿವಿಧ ಸದಸ್ಯರುಗಳು ಹಾಗೂ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅಳವಡಿಕೆ ಕಡ್ಡಾಯ

ಮಲ್ಲಮ್ಮ ನುಡಿ ವಾರ್ತೆ ಬೀದರ, ನವೆಂಬರ್.05(ಕರ್ನಾಟಕ ವಾರ್ತೆ) : ಜಿಲ್ಲೆಯ ಎಲ್ಲಾ ಸರ್ಕಾರಿ ಅರೆ ಸರ್ಕಾರಿ ಮತ್ತು ಸ್ವಯಂ ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ 1098 ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಅವರು ಸೂಚನೆ ನೀಡಿದ್ದಾರೆ. ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈಗಾಗಲೇ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯೂ ಮಕ್ಕಳ ಅಭಿವೃದ್ಧಿ ಹಾಗೂ ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದ್ದು, ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತ ರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೆ ಹಾಗೂ ಪುನರ್ವಸತಿ ಸೇವೆ ಒದಗಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರ ವಹಿಸುತ್ತದೆ. ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಿದ್ದಲ್ಲಿ ಬಾಲ್ಯ ವಿವಾಹ, ಬಾಲಕಾರ್ಮಿಕತೆ, ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ.

ಬಾಲ್ಯವಿವಾಹ, ಪೋಕ್ಸೋ, ಬಾಲಗರ್ಭಿಣಿ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿರುವುದು ಆತಂಕಕಾರಿ ವಿಚಾರವಾಗಿದೆ. ಮಕ್ಕಳ ಸಹಾಯವಾಣಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಕಲ್ಯಾಣ ಸಮಿತಿ ಇತ್ಯಾದಿ ಸುರಕ್ಷಿತ ಬೆಂಬಲ ವ್ಯವಸ್ಥೆ ಇರುವುದರ ಕುರಿತು ಮಕ್ಕಳಿಗೆ ಮಾಹಿತಿ ಇರಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಸಾರ್ವಜನಿಕರು, ವಿವಿಧ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೂ ಸಹ ಈ ಕುರಿತು ಮಾಹಿತಿ ಇದ್ದಲ್ಲಿ ಮಕ್ಕಳಿಗೆ ಸಕಾಲದಲ್ಲಿ ಸ್ಪಂದನೆ ಮತ್ತು ಅಗತ್ಯ ಬೆಂಬಲ ಪಡೆಯಲು ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಜಿಲ್ಲಾ, ತಾಲ್ಲೂಕು, ಹೋಬಳಿ, ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಮಟ್ಟದ ಸರ್ಕಾರಿ ಕಛೇರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸ್ವಯಂ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳಲ್ಲಿ ಮಕ್ಕಳ ಸಹಾಯವಾಣಿ 1098 ನಾಮ ಫಲಕವನ್ನು ಕಡ್ಡಾಯವಾಗಿ ಅಳವಡಿಸಲು ಕ್ರಮ ವಹಿಸುವಂತೆ ಸೂಚಿಸಿ, ಸುತ್ತೋಲೆಯನ್ನು ಸರ್ಕಾರವು ಹೊರಡಿಸಿರುತ್ತದೆ. ಆದ್ದರಿಂದ ಮಕ್ಕಳ ಸಹಾಯವಾಣಿ ಮಾದರಿ ಪ್ರಚಾರದ ಮಾಹಿತಿಯನ್ನು ಇದರೊಂದಿಗೆ ಲಗತ್ತಿಸುತ್ತ, ಬೀದರ ಜಿಲ್ಲೆಯ ಎಲ್ಲಾ ಜಿಲ್ಲಾ, ತಾಲ್ಲೂಕು, ಹೋಬಳಿ, ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಮಟ್ಟದ ಸರ್ಕಾರಿ ಕಛೇರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸ್ವಯಂ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ 1098 ನಾಮ ಫಲಕವನ್ನು ಕಡ್ಡಾಯವಾಗಿ ಅಳವಡಿಸುವಂತೆ ವ್ಯಾಪಕವಾಗಿ ಪ್ರಚಾರ ಮಾಡಲು ಪ್ರಕಟಣೆ ತಿಳಿಸಿದೆ.

## ಉಚಿತ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ:

ಮಲ್ಲಮ್ಮ ನುಡಿ ವಾರ್ತೆ

ಬೀದರ,ನವೆಂಬರ್.05(ಕರ್ನಾಟಕ ವಾರ್ತೆ): 2025-26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಐ.ಎ.ಎಸ್ ಮತ್ತು ಕೆ.ಎ.ಎಸ್ ಪರೀಕ್ಷಾ ಪೂರ್ವ ತರಬೇತಿ ಮತ್ತು ಗ್ರೂಪ್-ಸಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ದಿನಾಂಕ:08-11-2025(ಗ್ರೂಪ್-ಸಿ) ಮತ್ತು ದಿನಾಂಕ:09-11-2025 ರಂದು (ಐ.ಎ.ಎಸ್ ಮತ್ತು ಕೆ.ಎ.ಎಸ್) ಮೌಲಾನಾ ಆಜಾದ ಮಾದರಿ ಶಾಲೆ ರಟಕಲ್‌ಪುರ ಸರಕಾರಿ ಪದವಿ ಪೂರ್ವ (ಬಾಲಕಿಯರ) ಕಾಲೇಜು ಹತ್ತಿರ ಚಿತ್ತಾಖಾನಾ ಬೀದರ-585401 ರಲ್ಲಿ ನಡೆಸಲಾಗುತ್ತಿದೆ. ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯ ಅಧಿಕೃತ ಜಾಲತಾಣ https://sevasindhu.karnataka.gov.in ನಲ್ಲಿ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಜಿಲ್ಲಾ ಕಛೇರಿ ಮತ್ತು ತಾಲ್ಲೂಕ ಕಛೇರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಬೀದರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನವೆಂಬರ್.11 ರಂದು ವಾಹನ ಹರಾಜು

ಮಲ್ಲಮ್ಮ ನುಡಿ ವಾರ್ತೆ

ಬೀದರ,ನವೆಂಬರ್.04(ಕರ್ನಾಟಕ ವಾರ್ತೆ):- ಅಬಕಾರಿ ನಿರೀಕ್ಷಕರ ಕಛೇರಿ ಭಾಲ್ಕಿ ಇಲ್ಲಿ ನವೆಂಬರ್.11 ರಂದು ಅಬಕಾರಿ ಇಲಾಖೆಯ ವತಿಯಿಂದ ಘೋರ ಪ್ರಕರಣಗಳಲ್ಲಿ ಜಪ್ತು ಪಡಿಸಿದ ಒಟ್ಟು 13 ವಿವಿಧ ಬಗೆಯ ವಾಹನಗಳನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿಗಾಗಿ ದಿನಾಂಕದವನ್ನು ನಿಗದಿಪಡಿಸಲಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಅಬಕಾರಿ ನಿರೀಕ್ಷಕರ ಕಛೇಇರ, ಭಾಲ್ಕಿ ವಲಯ ಹಾಗೂ ಅಬಕಾರಿ ಉಪ ಅಧೀಕ್ಷಕರ ಕಛೇರಿ ಬೀದರ ಉಪ ವಿಭಾಗ ಇವರುಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಬೀದರ ಡೆಪ್ಯುಟಿ ಕಮೀಷನರ್ ಆಫ್ ಎಕ್ಸೈಜ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :- ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ನಡೆಯಲಿರುವ 46. ನೇಯ ಶರಣ ಕಮ್ಮಟ ಅನುಭವ ಮಂಟಪ ಉತ್ಸವ-2025ರ ನಿಮಿತ್ಯ ನಗರದ ಶಾಹಪೂರ ಹಾಗೂ ವಿಜಯನಗರ ಬಡಾವಣೆಗಳಲ್ಲಿ ಪ್ರಚಾರ ಮಾಡಲಾಯಿತು. ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಬಸವಲಿಂಗ ದೇವರು. . ಶಂಕರ ಮದರಗೈ . ನ್ಯಾಯವಾದಿ ಪಂಡಿತ ನಾಗರಳೆ. ರವೀಂದ್ರ ಕೊಳಕೂರ. ಕಾಶಿನಾಥ ನಿಣ್ಣೆ. ಶೋಭಾ ನಿಣ್ಣೆ. ಶಿವಕುಮಾರ್ ಹೊಳೆ ನಾಗಪ್ಪ ನಿಣ್ಣೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ನ,14,15 ಕ್ಕೆ ಏಕತಾ ನಡಿಗೆ: ಜಿಲ್ಲಾಧಿಕಾರಿ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150ನೇ ಜನ್ಮದಿನಾಚರಣೆ ಪೂರ್ಣಗೊಂಡ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಇದೆ ನವೆಂಬರ 14, 15 ಕ್ಕೆ ಏಕತಾ ನಡಿಗೆ ( ಯುನಿಟಿ ಮಾರ್ಚ್ ) ಎಂಬ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಕ್ರೀಡಾ ಮತ್ತು ಯುವ ಸಬಲೀಕರಣ

ಮಂತ್ರಾಲಯದ ಮೇರಾ ಯುವ ಭಾರತ್ ಬೀದರ ಅವರ ಸಂಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಹೇಳಿದರು.

ಅವರು ಮಂಗಳವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನವೆಂಬರ್. 14 ರಂದು ಬೆಳಿಗ್ಗೆ 8 ಗಂ-ಟೆಗೆ ಭೂಮರೆಡ್ಡಿ ಕಾಲೇಜುನಿಂದ ಮೈಲೂರ ಕ್ರಾಸ್, ಬೊಮಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತ ಭಗತ್ ಸಿಂಗ್ ವೃತ್ತ, ಹರಳಯ್ಯ ವೃತ್ತ, ಗುದುಗೆ ಆಸ್ಪತ್ರೆಯಿಂದ ನೆಹರು ಕ್ರೀಡಾಂಗಣದ ವರೆಗೆ ಹಾಗೂ ನವೆಂಬರ 15 ರಂದು ಬರಿದ್ ಶಾಹಿ ಮೈದಾನದಿಂದ ಕೇಂದ್ರ ಬಸ್ ನಿಲ್ದಾಣ, ಮಡಿವಾಳ ವೃತ್ತ, ರೋಟರಿ ವೃತ್ತ, ಬ್ರೀಮ್ಸ್ ಆಸ್ಪತ್ರೆ, ಅಂಬೇಡ್ಕರ್ ವೃತ್ತ, ಶಿವಾಜಿ ವೃತ್ತ, ಗುದಗೆ ಆಸ್ಪತ್ರೆಯಿಂದ ರಂಗಮಂದಿರದ ವರೆಗೆ ನಡಿಗೆ ನಡೆಯಲಿದೆ.

ಮಹಾನಗರ ಪಾಲಿಕೆಯಿಂದ ಕುಡಿಯುವ ನೀರು ಹಾಗೂ ಸ್ವಚ್ಛತೆ ಕೈಗೊಳ್ಳಲಾಗುವುದು. ಪೋಲಿಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲಾಗುವುದು ಎಂದರು. ಇದೇ ಸಮಯದಲ್ಲಿ ನಡಿಗೆಗೆ ಸಂಬಂಧಿಸಿದ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಮುಕುಲ್ ಜೈನ್, ಮೇರಾ ಯುವ ಭಾರತ್ ಜಿಲ್ಲಾ ಯುವ ಅಧಿಕಾರಿ ಮಯೂರ ಕುಮಾರ್ ಗೊರ್ಮೆ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯಮಟ್ಟದ 17 ವಯೋಮಿತಿಯ ಬಾಲಕ ಬಾಲಕಿಯರ ಚದುರಂಗ ಸ್ಪರ್ಧೆಯು ಬುಧವಾರ ಸಂಪನ್ನಗೊಂಡ ಹಿನ್ನಲೆಯ ಸಮಾರೋಪಸಮಾರಂಭ ಜರುಗಿತು.



ಚೆಸ್ ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟಕ್ಕೆ ಸ್ಥಾನಪಡೆದ ಪ್ರತಿಭೆಗಳಿಗೆ ಪಾರೀತೋಷಕ ನೀಡಿದರು.

**ಶಹಾಪುರದಲ್ಲಿ ಜರುಗಿದ ರಾಜ್ಯಮಟ್ಟದ ಚೆಸ್ ಸ್ಪರ್ಧೆ ಸಂಪನ್ನ:**
**ಚೆಸ್ ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟಕ್ಕೆ ಸ್ಥಾನಪಡೆದ ಪ್ರತಿಭೆಗಳು:**
**ಕರ್ನಾಟಕದ ಪ್ರತಿಭೆಗಳು ರಾಷ್ಟ್ರಮಟ್ಟದಲ್ಲಿ ಪ್ರಜ್ವಲಿಸಲಿ:**
**ಶಾಂತಗೌಡ ಪಾಟೀಲ**

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಬರುವ ದಿನಗಳಲ್ಲಿ ತ್ರಿಪೂರಾದಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಚದುರಂಗ(ಚೆಸ್) ಸ್ಪರ್ಧೆಯಲ್ಲಿ ಕರ್ನಾಟಕದ ಪ್ರತಿಭೆಗಳು ರಾಷ್ಟ್ರಮಟ್ಟದಲ್ಲೂ ಪ್ರಜ್ವಲಿಸಲಿ ಎಂದು ವಿಶ್ರಾಂತ ಉಪನಿರ್ದೇಶಕರಾದ ಶಾಂತಗೌಡ ಪಾಟೀಲ ತಿಳಿಸಿದರು.

ನಗರದಲ್ಲಿ ಜರುಗಿದ ರಾಜ್ಯಮಟ್ಟದ 17 ವಯೋಮಿತಿಯ ಬಾಲಕ ಬಾಲಕಿಯರ ಚದುರಂಗ ಸ್ಪರ್ಧೆಯು ಬುಧವಾರ ಸಂಪನ್ನಗೊಂಡ ಹಿನ್ನಲೆಯಲ್ಲಿ ಆಯೋಜಿಸಿದ್ದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು, ವಿಜೇತ ವಿದ್ಯಾರ್ಥಿಗಳಿಗೆ ಪಾರೀತೋಷಕ ವಿತರಿಸಿ ಮಾತನಾಡಿದ ಅವರು, ಯಾದಗಿರಿ ಜಿಲ್ಲೆಯ ಶಹಾಪುರದಲ್ಲಿ ಜರುಗಿದ ಚೆಸ್ ಪಂದ್ಯಾಟದ ವ್ಯವಸ್ಥೆಯು ಸರ್ವರಿಗೂ ಮೆಚ್ಚುಗೆಯಾಗಿದ್ದು, ಸಂತಸದ ಸಂಗತಿ. ಸಗರನಾಡು ಸದಾಕಾಲ ಹೃದಯ ಶ್ರೀಮಂತಿಕೆಯ ನಾಡು ಎಂಬುವುದಕ್ಕೆ ಪಂದ್ಯಾಟದ ಯಶಸ್ಸು ಸಾಕ್ಷಿಯಾಗಿದೆ ಎಂದರು. ಬಾಲಕರ ವಿಭಾಗದಲ್ಲಿ ರಿತೇಶ.ಕೆ (ಉಡುಪಿ)8 ಅಂಕ ಗಳಿಸಿ ಪ್ರಥಮ ಸ್ಥಾನ, ವೈಭವ.ಬಿ(ಗದಗ)7.5 ಅಂಕ ಗಳಿಸಿ ದ್ವಿತೀಯ ಸ್ಥಾನ, ಪ್ರಥಮ ರಾವ್ (ಶಿವಮೊಗ್ಗ)7.5 ಅಂಕಗಳಿಸಿ ತೃತೀಯ ಸ್ಥಾನ, ನಂದನ.ಎಮ್ (ಮೈಸೂರು)7.5 ಅಂಕಗಳಿಸಿ ಚತುರ್ಥ ಸ್ಥಾನ, ಹೃತ್ವಿಕ್.ಆರ್(ಮೈಸೂರು)7.0 ಅಂಕ ಗಳಿಸಿ ಪಂಚಮ ಸ್ಥಾನ ಗಳಿಸಿದರು. ಬಾಲಕಿಯರ ವಿಭಾಗದಲ್ಲಿ ವರ್ಣಿತ.ವಿ (ಉಡುಪಿ)8.5 ಅಂಕ ಗಳಿಸಿ ಪ್ರಥಮ ಸ್ಥಾನ, ಪಾವನಿ. ಆರ್(ಶಿವಮೊಗ್ಗ)7.5 ಅಂಕ ಗಳಿಸಿ ದ್ವಿತೀಯ ಸ್ಥಾನ, ಪ್ರಕೃತಿ.ಪಿ.ಶೆಟ್ಟಿ (ಉಡುಪಿ)7.5 ಅಂಕಗಳಿಸಿ ತೃತೀಯ ಸ್ಥಾನ, ನವ್ಯಶ್ರೀ (ಶಿವಮೊಗ್ಗ)7.5 ಅಂಕ ಗಳಿಸಿ ಚತುರ್ಥ ಸ್ಥಾನ, ನಿಯತಿ.ಎಂ(ಸಿರಸಿ)7.0 ಅಂಕ ಗಳಿಸಿ ಪಂಚಮ ಸ್ಥಾನ ಗಳಿಸಿದರು.

ಈ ಸಂದರ್ಭದಲ್ಲಿ ಬಿಇಓ ವಾಯ್. ಎಸ್.ಹರಗಿ, ಕ್ಷೇತ್ರಸಮನ್ವಯಾಧಿಕಾರಿ ರೇಣುಕಾ ಪಾಟೀಲ, ಚೆಸ್ ಫೆಡಿರೇಶನದ ಪ್ರಮೋದ ಮೋರೆ, ದೈಹಿಕ ಶಿಕ್ಷಣಾಧಿಕಾರಿ ಹಣಮಂತ ಹೊಸ್ಮನಿ, ಅನೀಲ ನಾಯಕ, ಶರಣಪ್ಪ ಪಾಟೀಲ, ಲಕ್ಷ ಲಾಳಸೇರಿ, ಮುರ್ತುಜಾ, ರಾಮನಗೌಡ, ಹಣಮಂತ್ರಾಯ ಸೋಮಪೂರ, ಬಸವರಾಜ ಪಾಟೀಲ, ಸುಧಾಕರ ಗುಡಿ, ಸೇರಿದಂತೆ ಪ್ರಮುಖರು ಇದ್ದರು. ಬಸವರಾಜ ಗೋಗಿ ನಿರ್ವಹಿಸಿದರು, ಶರಣಪ್ಪ ಪಾಟೀಲ ಸ್ವಾಗತಿಸಿದರು, ವಿ.ಪಿ.ಭಟ್, ರಾಘವೇಂದ್ರ ಅನಿಸಿಕೆ ಹಂಚಿಕೊಂಡರು, ಇದೇ ಸಂದರ್ಭದಲ್ಲಿ ಸ್ಪರ್ಧೆಗಳಿಗೆ ಪ್ರಮಾಣ ಪತ್ರ ಹಾಗೂ ಪಾರಿತೋಷಕ ವಿತರಿಸಿದರು. ಸಮಸ್ತ ದೈಹಿಕ ಶಿಕ್ಷಕರ ಬಳಗ, ಶಿಕ್ಷಣ ಸಂಯೋಜಕರು, ಸಂಪನ್ಮೂಲ ವ್ಯಕ್ತಿಗಳು, ಅಧಿಕಾರಿಗಳು ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾದರು.

# ಪ್ರವಾಹ ರಕ್ಷಣಾ ಕಾರ್ಯದ ಅಣಕು ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು 05: ಪ್ರವಾಹ ಸಂದರ್ಭದಲ್ಲಿ ಜನರ ರಕ್ಷಣೆಗಾಗಿ ಕೈಗೊಳ್ಳಬೇಕಾಗಿರುವ ಮುನ್ನೆಚ್ಚರಿಕೆ ಕ್ರಮಗಳು, ವಿಪತ್ತು ನಿರ್ವಹಣೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ನಗರದ ಕೃಷ್ಣಗಿರಿಯ ಚೇತನ್ ಟೆಕ್ನೋ ಶಾಲೆಯ ಪಕ್ಕದ ಕೆರೆಯಲ್ಲಿ ಬುಧವಾರ ಅಣುಕು ಪ್ರದರ್ಶನ ನಡೆಸಲಾಯಿತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಅಗ್ನಿಶಾಮಕದಳ, ಗೃಹರಕ್ಷಕ ದಳ ಹಾಗೂ ಪೊಲೀಸ್ ಇಲಾಖೆ ಸಹಯೋಗದಿಂದ ನಡೆದ ಅಣಕು ಪ್ರದರ್ಶನದಲ್ಲಿ, ವಿಪತ್ತು ಅಪಾಯಕ್ಕೆ ಸಿಲುಕಿರುವ ಜನರ ರಕ್ಷಣೆ ಮಾಡುವ ಕಾರ್ಯಾಚರಣೆಯ ಪ್ರಾತ್ಯಕ್ಷಿಕೆ ನಡೆಸಲಾಯಿತು.

ನದಿಯಲ್ಲಿ ಸಿಲುಕಿರುವ ಜನರನ್ನು ರಕ್ಷಿಸಿ ನದಿಯಿಂದ ಹೊರ ತಂದು ಪ್ರಥಮ ಚಿಕಿತ್ಸೆ ನೀಡುವುದು ಮತ್ತು ಅಲ್ಲಿಂದ ಆಸ್ಪತ್ರೆಗೆ ಕಳುಹಿಸುವ ಸನ್ನಿವೇಶ ಪ್ರದರ್ಶಿಸಲಾಯಿತು. ಪ್ರವಾಹದಲ್ಲಿ ಕೊಚ್ಚಿಕೊಂಡು ಹೋಗಿ ವ್ಯಕ್ತಿ ಮುಳುಗುತ್ತಿರುವ ಸಮಯದಲ್ಲಿ ಅಗ್ನಿಶಾಮಕ ಸಿಬ್ಬಂದಿ ದೋಣಿಯಲ್ಲಿ ರಕ್ಷಣೆ ಮಾಡುವ ಪ್ರಾತ್ಯಕ್ಷಿಕೆ ಎಲ್ಲರ ಗಮನ ಸೆಳೆಯಿತು. ಈ ವೇಳೆ ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮ ಅವರು ಮಾತನಾಡಿ, ಪ್ರವಾಹ ಪರಿಸ್ಥಿತಿ ಉಂಟಾದಲ್ಲಿ ನಿರ್ವಹಣೆಗೆ ಎಲ್ಲ ರೀತಿಯಲ್ಲಿ ಸಿದ್ಧತೆ ಮಾಡಿಕೊಂಡಿದೆ. ಎಲ್ಲ ರೀತಿಯಿಂದ ಜಿಲ್ಲಾಡಳಿತ ಸನ್ನದ್ಧವಾಗಿದ್ದು, ಪೊಲೀಸ್ ಹಾಗೂ ಅಗ್ನಿಶಾಮಕ ದಳ ಕಾರ್ಯಾಚರಣೆ ಸಜ್ಜುಗೊಂಡಿದ್ದಾರೆ. ಜನರು ಪ್ರವಾಹ ಪರಿಸ್ಥಿತಿಯಲ್ಲಿ ನೀರಿಗೆ ಇಳಿಯುವುದು, ನೀರಿನ ಜೊತೆ ದುಸ್ಸಾಹಸಕ್ಕೆ ಕೈಹಾಕುವುದು ಮಾಡಬಾರದು. ಜಿಲ್ಲಾಡಳಿತಕ್ಕೆ ಸ್ಪಂದಿಸುವ ಕಾರ್ಯವಾಗಬೇಕು ಎಂದರು.

ಜಿಲ್ಲೆಯಲ್ಲಿ ಕೃಷ್ಣಾ, ತುಂಗಭದ್ರಾ ಹಾಗೂ ಭೀಮಾ ನದಿ ಪಾತ್ರದಲ್ಲಿ ಪ್ರವಾಹ ಉಂಟಾದಾಗ, ರಕ್ಷಣಾ ಕಾರ್ಯಾಚರಣೆ ಹೇಗಿರಬೇಕು ಎಂಬುದರ ಬಗ್ಗೆ ಅಣಕು ಪ್ರದರ್ಶನ ನಡೆಸಲಾಗುತ್ತಿದೆ. ಎಲ್ಲೆಲ್ಲಿ ಪ್ರವಾಹ ಉಂಟಾಗುತ್ತದೆ. ಎಷ್ಟು ಸೇತುವೆಗಳು ಮುಳುಗಡೆಯಾಗುತ್ತವೆ ಎಂಬುದನ್ನು ಗುರುತಿಸಿಕೊಂಡು ಆ ವ್ಯಾಪ್ತಿಯಲ್ಲಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡಲಾಗುತ್ತಿದೆ. ಪ್ರವಾಹ ನಿರ್ವಹಣೆಗೆ ಮುಂಜಾಗ್ರತವಾಗಿ ಜಿಲ್ಲಾಡಳಿತ ಜಾಗೃತಿ ಮೂಡಿಸುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಎನ್.ಡಿ.ಆರ್.ಎಫ್ ಉಪ ಕಮಾಂಡರ್ ಅಕಿಲೇಶ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಭಾರಿ ಅಧಿಕಾರಿ ಡಾ.ಗಣೇಶ್, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ಡಿ.ಆರ್.ಎಫ್ ರವೀಂದ್ರ ಭಟ್ಟ, ರಾಯಚೂರು ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರಜ್ವಲ್, ಚೇತನ್ ಟೆಕ್ನೋ ಶಾಲೆಯ ಪ್ರಾಂಶುಪಾಲರಾದ ಕೆ.ಶ್ರೀರಕ್ಷ, ಜಿಲ್ಲಾಡಳಿತದ ವಿಪತ್ತು ನಿರ್ವಹಣಾ ಪರಿಣಿತರಾದ ಅನೀಲ್ ಕುಮಾರ್ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

# ತರಕಾರಿ ಮಾರುಕಟ್ಟೆ ತೆರವು ನಿಲ್ಲಿಸಿ ಮಾರುಕಟ್ಟೆ ಘೋಷಣೆಗೆ ರೈತರ ಬೇಡಿಕೆ

ರಾಯಚೂರು, ನವೆಂಬರ್ 5 ರಾಯಚೂರು ನಗರ ವಾರ್ಡ್ ನಂ. 13 ರ ಯರ್ಗರಾ ಲೇಔಟ್‌ನ ಅಗಪೆ ಚರ್ಚ್ ಹತ್ತಿರ ಸ್ಥಾಪಿತವಾದ ಹೊಸ ತರಕಾರಿ ಮಾರುಕಟ್ಟೆಯನ್ನು ಶಾಶ್ವತ ಮಾರುಕಟ್ಟೆ ಎಂದು ಘೋಷಿಸುವಂತೆ ಹಾಗೂ ತೆರವು ನೋಟಿಸ್‌ಗಳನ್ನು ಹಿಂಪಡೆಯುವಂತೆ ರಾಯಚೂರು ರೈತ ಮತ್ತು ಸಾರ್ವಜನಿಕರ ಸಂಯುಕ್ತ ಹೋರಾಟ ಸಮಿತಿ ಮನವಿ ಮಾಡಿದೆ.

ಸಮಿತಿಯ ಪ್ರತಿನಿಧಿಗಳು ಬುಧವಾರ ನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಮಾರುಕಟ್ಟೆ ಸ್ಥಳವು ಹತ್ತಿರದ ಹಳೆ ಮಲಯಾಬಾದ್ ಹೊಸ ಮಲಯಾಬಾದ್ಹೊಸ.

, ರಾಜಲ್ಬಂಡಾ, ದೇವೇನಹಳ್ಳಿ, ತುಂಟಾಪುರ, ಸಿದ್ರಾಂಪುರ, ಬಿಜ್ಜೇಂಗೇರಿ, ಚಂದ್ರಬಂಡಾ, ಇಜಾಪುರ, ಮಿತಿ, ಮಾಲ್ಯಾಪುರ, ಬೋಳಮಂಡೋಡಿ ಮುಂತಾದ ಹಳ್ಳಿಗಳ ರೈತರಿಗೆ ತರಕಾರಿ ಮಾರಾಟದ ಪ್ರಮುಖ ಕೇಂದ್ರವಾಗಿದ್ದು, ನೂರಾರು ಮಹಿಳೆಯರು ಹಾಗೂ ಬಡ ರೈತರು ತಮ್ಮ ಜೀವನೋಪಾಯಕ್ಕಾಗಿ ದಿನನಿತ್ಯ ಇಲ್ಲಿ ವ್ಯಾಪಾರ ನಡೆಸುತ್ತಿದ್ದಾರೆ.

ಆದರೆ ಇತ್ತೀಚೆಗೆ ಮಹಾನಗರ ಪಾಲಿಕೆ ಈ ಮಾರುಕಟ್ಟೆ ತೆರವುಗೊಳಿಸಲು ನೋಟಿಸ್ ನೀಡಿದ್ದು, ರೈತರು ಇದನ್ನು ಹಿಂಸಾತ್ಮಕ ಹಾಗೂ ಅನ್ಯಾಯಕರ ಕ್ರಮ ಎಂದು ವಿರೋಧಿಸಿದ್ದಾರೆ.



ಸಮಿತಿಯ ಮುಖಂಡರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ,

ಈ ಮಾರುಕಟ್ಟೆ ರಾಷ್ಟ್ರೀಯ ಹೆದ್ದಾರಿಯಿಂದ ಕೇವಲ 50 ಮೀಟರ್ ದೂರದಲ್ಲಿದ್ದು, ನಗರ ವಿಸ್ತಾರಕ್ಕೆ ಅನುಗುಣವಾಗಿದೆ. ರೈತರು ನೇರವಾಗಿ ತರಕಾರಿ ಮಾರಾಟ ಮಾಡುವುದರಿಂದ ಮಧ್ಯವರ್ತಿಗಳ ಅವಲಂಬನೆ ಕಡಿಮೆಯಾಗಿದೆ. ಹಳೆಯ ಮಾರುಕಟ್ಟೆ ಒಳನಗರದಲ್ಲಿ ಸ್ಥಳಾಭಾವ ಮತ್ತು ಸೌಕರ್ಯ ಕೊರತೆಯಿಂದ ಬಳಲುತ್ತಿದೆ," ಎಂದು ತಿಳಿಸಿದರು. ಅವರು ಮುಂದುವರೆದು,

ನಗರ ಪಾಲಿಕೆ ಕಾಯ್ದೆ 1976ರ ಸೆಕ್ಷನ್ 288–ಃ(3) ಹಾಗೂ ರಾಜ್ಯ ಕೃಷಿ ಉತ್ಪನ್ನ ಮಾರುಕಟ್ಟೆ ಕಾಯ್ದೆ 1966ರ ಸೆಕ್ಷನ್ 6(2) ಪ್ರಕಾರ, ರೈತರಿಗೆ ನೇರವಾಗಿ ಸಾರ್ವಜನಿಕರಿಗೆ ಮಾರಾಟ ಮಾಡುವ ಕಾನೂನು ಹಕ್ಕು ಇದೆ. ತೆರವು ಮಾಡುವ ಮೊದಲು ಬದಲಿ ಸ್ಥಳ ಒದಗಿಸಬೇಕು," ಎಂದು ಉಲ್ಲೇಖಿಸಿದರು. ಸಮಿತಿ ಆಯುಕ್ತರನ್ನು ಮನವಿ ಮಾಡಿ ಈ ಕೆಳಗಿನ ಬೇಡಿಕೆಗಳನ್ನು ಮಂಡಿಸಿದೆ: ಗ್ರ್ರಾ ಲೇಔಟ್‌ನ ಮಾರುಕಟ್ಟೆಯನ್ನು ಶಾಶ್ವತ ತರಕಾರಿ ಮಾರುಕಟ್ಟೆ ಎಂದು ಘೋಷಣೆ. ರೈತರ ವಿರುದ್ಧ ನೀಡಿರುವ ತೆರವು ನೋಟಿಸ್‌ಗಳನ್ನು ತಕ್ಷಣ ಹಿಂಪಡೆದು ಮೂಲಸೌಕರ್ಯ ಒದಗಿಸುವ ಕ್ರಮ. ಶೆಡ್, ನೀರು, ವಿದ್ಯುತ್, ಮಲಿನೀಕರಣ ವ್ಯವಸ್ಥೆ ಹಾಗೂ ಶೌಚಾಲಯಗಳ ನಿರ್ಮಾಣ. ರೈತರಿಂದ ತೆರಿಗೆ ಸಂಗ್ರಹಿಸಿ ಪಾಲಿಕೆಯ ಆದಾಯ ಹೆಚ್ಚಿಸುವ ವ್ಯವಸ್ಥೆ. ರೈತರ ವಿರುದ್ಧ ಹಿಂಸಾತ್ಮಕ ಕ್ರಮ ಅಥವಾ ಬಲವಂತದ ತೆರವು ತಕ್ಷಣ ನಿಲ್ಲಿಸುವುದು.

ಈ ಸಂದರ್ಭದಲ್ಲಿ ರೈತರ ಪ್ರತಿನಿಧಿಗಳು, ಮಹಿಳಾ ಮಾರಾಟಗಾರರು ಹಾಗೂ ಸ್ಥಳೀಯ ನಾಗರಿಕರು ಉಪಸ್ಥಿತರಿದ್ದರು.

ಸಮಿತಿ ಸ್ಪಷ್ಟಪಡಿಸಿದ್ದು  ಈ ಹೋರಾಟ ಯಾವುದೇ ರಾಜಕೀಯ ಉದ್ದೇಶವಲ್ಲ, ಸಂಪೂರ್ಣವಾಗಿ ಸಾಮಾಜಿಕ ಹಿತ ಮತ್ತು ರೈತರ ಬದುಕಿನ ಹಕ್ಕಿಗಾಗಿ ನಡೆಯುತ್ತಿದೆ.

# ಕಾರ್ಮಿಕ ಇಲಾಖೆಯಿಂದ ಸುರಕ್ಷತಾ ಕಿಟ್‌ಗಳ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನ05: ಕಾರ್ಮಿಕ ಇಲಾಖೆಯ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ವಿವಿಧ ಸುರಕ್ಷತಾ ಕಿಟ್‌ಗಳ ಸೌಲಭ್ಯಕ್ಕೆ ಅರ್ಹ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ವಿವಿಧ ತಾಲೂಕಗಳಲ್ಲಿ ಮೇಸನ್, ಎಲೆಕ್ಟ್ರಿಷಿಯನ್, ವೇಲ್ಡರ್, ಕಾರ್ಪೆಂಟರ್,

ಪೇಂಟರ್ ಹಾಗೂ ಪ್ಲಂಬರ್ ಸೇಫ್ಟಿ ಕಿಟ್‌ಗಳನ್ನು ಕಾರ್ಮಿಕರು ಚಾಲ್ತಿಯಲ್ಲಿರುವ ಆಧಾರ್ ಕಾರ್ಡ್, ಗುರುತಿನ ಚೀಟಿ ಹಾಗೂ ಮೊಬೈಲ್ ಸಂಖ್ಯೆಯೊಂದಿಗೆ ಈ ಹಿಂದೆ ಯಾವುದಾದರು ಕಿಟ್ ಈ ಕಚೇರಿಯಿಂದ ಪಡೆಯದಿರುವ ಕುರಿತು ಸ್ವಯಂ ಘೋಷಣಾ ಪತ್ರದೊಂದಿಗೆ ಅರ್ಜಿಯನ್ನು

ನವೆಂಬರ್ 25 ರೊಳಗಾಗಿ ಅಯಾ ತಾಲೂಕಿನ ಕಾರ್ಮಿಕ ನಿರೀಕ್ಷಕರ ಕಚೇರಿಯಲ್ಲಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ನಿಯಾಮಾನುಸಾರ ಮತ್ತು ಜೇಷ್ಠತೆ ಆಧಾರಾದ ಮೇಲೆ ಆಯ್ಕೆ ಮಾಡಿ ಕಿಟ್‌ಗಳನ್ನು ಹಂಚಿಕೆ ಮಾಡಲಾಗುವುದು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.8 ರಂದು ದತ್ತಾತ್ರೇಯ ಸ್ವಾಮಿ ಪಲ್ಲಿಕೆ ಸೇವೆ, ಆರಾಧನ ಮಹೋತ್ಸವ



ರಾಯಚೂರು, ನ.5–ಶ್ರೀ ದತ್ತಾತ್ರೇಯಸ್ವಾಮಿಯವರ ಪಲ್ಲಕಿ ಸೇವೆ ಮತ್ತು ಶ್ರೀ ಸದ್ಗುರು ನಲ್ಲನ್ನ ಸ್ವಾಮಿಯವರ ಹದಿನೇಳನೇ ಆರಾಧನಾ ವಾರ್ಷಿಕ ಮಹೋತ್ಸವ ಕಾರ್ಯಕ್ರಮ ನ.8 ರಂದು ತಾಲೂಕಿನ ಗಂಜಹಳ್ಳಿ ಗ್ರಾಮದಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆಯಲಿದೆ ಎಂದು ಮಠದ ಪೀಠಾಧಿಪತಿ ಸದ್ಗುರು ಜಿ. ಭಾಸ್ಕರಸ್ವಾಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನ.8 ರಂದು

ಬೆಳಿಗ್ಗೆ 6:30.ಕ್ಕೆ ಧ್ವಜಾರೋಹಣ ಜರುಗುವುದು. ಮಹಿಳೆಯರಿಂದ ಕಳಸರೋಹಣ ಮತ್ತು ತಾತನವರ ಪಲ್ಲಕಿ ಸೇವಾ ಅದ್ದೂರಿ ಮೆರವಣಿಗೆ ನಡೆಯಲಿದೆ. ಬೆಳಿಗ್ಗೆ 10:45 ರಿಂದ 12:30 ರವರೆಗೆ ಕಳಸ ಪೂಜೆ ಮತ್ತು ಗುರು ಪೂಜೆ ಕಾರ್ಯಕ್ರಮ ನಡೆಯಲಿದ್ದು, ಮಧ್ಯಾಹ್ನ 1 ಗಂಟೆಯಿಂದ ರಿಂದ ತೀರ್ಥ ಪ್ರಸಾದ ಮತ್ತು ಅನ್ನಸಂತರ್ಪಣೆ ನಡೆಯಲಿದೆ. ಮಧ್ಯಾಹ್ನ 3:15 ರಿಂದ 6 ಗಂಟೆಯವರೆಗೆ ಅಧ್ಯಾತ್ಮಿಕ ನಾಯಕರಿಂದ ವೇದಾಂತ ಪ್ರವಚನ ರಾತ್ರಿ 8 ಗಂಟೆಯಿಂದ ಅಖಂಡ ಭಜನಾ ಕಾರ್ಯಕ್ರಮ ನಡೆಯಲಿದ್ದು, ಸುತ್ತಮುತ್ತಲಿನ ಗ್ರಾಮದ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಪೀಠಾಧಿಪತಿಗಳು ಕೋರಿದ್ದಾರೆ.

# ಸರಕಾರಿ ಕಾಲೇಜಿಗೆ ಸಂಸ್ಕೃತಿ ಕಲಿಕಾ ಮಂಜೂರು–ವೆಂಕಣ್ಣ

ರಾಯಚೂರು,ನ.5– ರಾಷ್ಟ್ರಿಯ ಕೇಂದ್ರಸಂಸ್ಕೃತಿ ವಿಶ್ವವಿದ್ಯಾಲಯದಿಂದ ನಗರದ ಸರಕಾರಿ ಕಾಲೇಜಿಗೆ ಸಂಸ್ಕೃತಿ ಕಲಿಕಾ ಕೇಂದ್ರವನ್ನು ಮಂಜೂರು ಮಾಡಲಾಗಿದೆ ಎಂದು ಸರಕಾರಿ ಕಾಲೇಜು ಪ್ರಾಂಶುಪಾಲರಾದ ವೆಂಕಣ್ಣ ಯಾದವ ಹೇಳಿದರು.



ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಪ್ರತಿವರ್ಷ ನಮ್ಮ ಕಾಲೇಜಿನಲ್ಲಿ ಫಲಿತಾಂಶ ಹೆಚ್ಚಳವಾಗುತ್ತಿದೆ. ಇದನ್ನು ಮನಗಂಡು ಕೇಂದ್ರ ಸಂಸ್ಕೃತಿಕ ವಿಶ್ವವಿದ್ಯಾಲಯ ಸಂಸ್ಕೃತಿಕ ಕಲಿಕಾ ಕೇಂದ್ರವನ್ನು ಮಂಜೂರು ಮಾಡಲಾಗಿದೆ.

ಸಂಸ್ಕೃತ ಭಾಷ ಜ್ಞಾನ ಮತ್ತು ಸಂಸ್ಕೃತಿಯ ಅಪ್ರತಿಮ ನಿಧಿ. ಈ ಭಾಷೆಯಲ್ಲಿ ಸಂರಕ್ಷಿಸಲಾಗಿರುವ ಸಂಪನ್ಮೂಲಗಳು ಅಪಾರ ಮತ್ತು ವೈವಿಧ್ಯಮಯವಾಗಿವೆ. ನಮ್ಮ ಸಂಸ್ಕೃತಿ ಮೂಲ ಸಂರಕ್ಷಿಸಲು ಮತ್ತು ಪ್ರಕ್ಷೇಪಿಸಲು ಹೆಚ್ಚಿನ ಸಂ–ಖ್ಯೆಯ ಸಂಸ್ಕೃತವನ್ನು ಕಲಿಯಲು ಬಯಸುತ್ತಾರೆ.

ಸಂಸ್ಕೃತ ಭಾಷೆಯ ಜ್ಞಾನವನ್ನು ಸರಳವಾದ ವಿಧಾನದ ಮೂಲಕ ಒದಗಿಸುವ ಮೂಲಕ ಮತ್ತು ಸಂಸ್ಕೃತದಲ್ಲಿ ಚೆನ್ನಾಗಿ ಸಂಗ್ರಹವಾಗಿರುವ ಜ್ಞಾನದ ಬಗ್ಗೆ ಅವರಿಗೆ ಅರಿವು ಮೂಡಿಸುವ ಮೂಲಕ ಅವರ ಆಸೆಯನ್ನು ಪೂರೈಸುವುದು ಅತ್ಯಗತ್ಯ. ಸಂಸ್ಕೃತವನ್ನು ಇಚ್ಛಿಸುವವರಿಗೆ ಅವಕಾಶ ಮತ್ತು ಸೌಲಭ್ಯವನ್ನು ಒದಗಿಸುವ ಮೂಲಕ ಈ ಆದರ್ಶ ಮತ್ತು ಅಗತ್ಯ ಉದ್ದೇಶಗಳನ್ನು ಕಾರ್ಯಗತಗೊಳಿಸಲು ಕೇಂದ್ರಸಂಸ್ಕೃತ ವಿಶ್ವವಿದ್ಯಾಲಯವು ಸಂಸ್ಕೃತ ಕಲಿಕಾ ಕೇಂದ್ರವನ್ನು ಪರಿಚಯಿಸಿದೆ. ಅದರೆ ನಮ್ಮ ಕಾಲೇಜಿಗೆ ಸಂಸ್ಕೃತ ಕಲಿಕಾ ಕೇಂದ್ರವನ್ನು ಸ್ಥಾಪನೆ ಮಾಡಿದರು ಮೂಲಕ ಇಲ್ಲಿನ ವಿದ್ಯಾರ್ಥಿಗಳಿಗೆ ಸಂಸ್ಕೃತಿ ಬಗ್ಗೆ ಅರಿವು ಮೂಡಿಸುವುದು ಕಾರ್ಯ ಮಾಡಲಾಗುತ್ತಿದೆ. ಸರ್ಕಾರಿ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಜೊತೆಗೆ ಕೌಶಲ್ಯ ವೃತ್ತಿಯನ್ನು ಬಗ್ಗೆ ಕಲಿಕೆ ಮಾಡಲಾಗುವುದು. ಕೋಚ್ ಬಿಹಾರ್ ಮೂಲದ ಚಂದನ್ ಬರ್ಮನ್ ಅವರನ್ನು ಮೇ.15, 2026 ರವರೆಗೆ ಸಂಸ್ಕೃತಿ ಕೇಂದ್ರದಲ್ಲಿ ಶಿಕ್ಷಕರಾಗಿ ನೇಮಿಸಲಾಗಿದೆ.

ಕೇಂದ್ರದಲ್ಲಿ ಬೋಧನೆಯ ಜೊತೆಗೆ ವಿದ್ಯಾರ್ಥಿಗಳಿಗೆ ಸಂಸ್ಕೃತಿ ಕಲಿಕೆ ಅರಿವು ಮೂಡಿಸಲಾಗುತ್ತಿದೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಮಿಸ್ಟ್ರಿ ವಿಷಯವನ್ನು ಮೊಟ್ಟ ಮೊದಲ ಭಾರಿಗೆ ಕನ್ನಡಕ್ಕೆ ಅನುವಾದಿಸಲಾಗಿದೆ. ವಿದ್ಯಾರ್ಥಿಗಳು

ಆರ್ಥಿಕ ಮತ್ತು ಸ್ವಾವಲಂಬಿ ಜೀವನ ನಿರ್ವಹಣೆಗೆ ಕಲಿಕೆ ಚಟುವಟಿಕೆ ಜೊತೆಗೆ ಹೊಲಿಗೆ ಯಂತ್ರ ಕಲಿಕೆ ಹಾಗೂ ಕೌಶಲ್ಯ ವೃತ್ತಿಯನ್ನು ಕೂಡ ಕಲಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಪ್ರಾಣೇಶ ಕುಲಕರ್ಣಿ, ಡಾ. ಮಹಾಂತೇಶ ಅಂಗಡಿ, ಶ್ಯಾಮ್ ಸುಂದರ್, ಚಂದನ್ ಬರ್ಬನ್ ಸೇರಿದಂತೆ ಉಪಸ್ಥಿತರಿದ್ದರು.

# ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನ05: ಯರಗೇರಾದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಮೆಟ್ರಿಕ್ ನಂತರದ ಬಾಲಕರ ಮತ್ತು ಬಾಲಕಿಯರ ವಸತಿ ನಿಲಯಗಳನ್ನು 100ರ ಸಂಖ್ಯಾಬಲದೊಂದಿಗೆ ಪ್ರಾರಂಭಿಸಲಾಗಿದ್ದು, ಈ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಇಲ್ಲಿನ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 2025–26ನೇ ಸಾಲಿಗೆ ಅರ್ಜಿ ಆಹ್ವಾನಿಸಲಾಗಿದೆ.

ದಾಖಲಾತಿಗಳು: ಹೊಸದಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಖಾತೆಯನ್ನು ಸೃಜನೆ ಮಾಡಿಕೊಳ್ಳಬೇಕು.

ಖಾತೆಯನ್ನು ಸೃಜನೆ ಮಾಡಿಕೊಳ್ಳುವಾಗ ವಿದ್ಯಾರ್ಥಿಯು ಆಧಾರ್ ಕಾರ್ಡನ್ನು ಬಳಸಿಕೊಂಡು ಖಾತೆಯನ್ನು ಸೃಜನೆ ಮಾಡಿಕೊಳ್ಳುವುದು (ವಿದ್ಯಾರ್ಥಿಯ ಬ್ಯಾಂಕ್‌ಗೆ ಆಧಾರ್ ಕಾರ್ಡ್ ಸೀಡಿಂಗ್ ಆಗಿರಬೇಕು). ಎಸ್.ಎಸ್.ಪಿ. ವಿದ್ಯಾರ್ಥಿಯ ಐ.ಡಿ ಸಂಖ್ಯೆ (ನವೀಕರಣ ವಿದ್ಯಾರ್ಥಿಗಳಿಗೆ). ವಿದ್ಯಾರ್ಥಿ /ಪಾಲಕರ ಮೊಬೈಲ್ ಸಂಖ್ಯೆ, ಇ–ಮೇಲ್ ಐಡಿ ವಿದ್ಯಾರ್ಥಿಯ ಸಂಪೂರ್ಣ ವಿಳಾಸ. ಆರ್.ಡಿ. ಸಂಖ್ಯೆ ಹೊಂದಿರುವ ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ (ಚಾಲ್ತಿ ಇರುವ) ಪ್ರತಿ.

ಕಾಲೇಜಿನಿಂದ ಪಡೆದ ವ್ಯಾಸಂಗ ಪ್ರಮಾಣ ಪತ್ರ ಪ್ರತಿ. ಎಸ್.ಎಸ್.ಎಲ್.ಸಿ. ನೋಂದಣಿ ಸಂಖ್ಯೆ ಮತ್ತು ವಿಶ್ವವಿದ್ಯಾಲಯಗಳು ನೀಡುವ ನೋಂದಣಿ ಸಂಖ್ಯೆ. ಹಿಂದಿನ ಸಾಲಿನಲ್ಲಿ ತೇರ್ಗಡೆಯಾದ ಕೋರ್ಸಿನ ಅಂಕಪಟ್ಟಿಯ ಪ್ರತಿಯೊಂದಿಗೆ ವಸತಿ ನಿಲಯಗಳಿಗೆ ಎಸ್.ಹೆಚ್.ಪಿ ತಂತ್ರಾಂಶ ವೆಬ್‌ಸೈಟ್ ವಿಳಾಸ: https://https://shp.karnataka.gov .in/ ನಲ್ಲಿ ನವೆಂಬರ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲೂಕು ಕಚೇರಿಯ ದೂರವಾಣಿ ಸಂಖ್ಯೆ: 080532–295603, 8762178819ಗೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ರುಕ್ಮಣೀ ಬಾಯಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಅಂಧತ್ವ ಕಾರ್ಯಕ್ರಮದ ಅಡಿಯಲ್ಲಿ ಒಪ್ಪಂದಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು : ಕರ್ನಾಟಕ ಸಾರ್ವಜನಿಕ ಸಂಗ್ರಹಗಳ ಪಾರದರ್ಶಕ ಅಧಿನಿಯಮ–99/2000 ಮತ್ತು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಿರುವ ಷರತ್ತುಗಳನ್ವಯ ನೊಂದಾಯಿತ ಅರ್ಹ ಸಂಸ್ಥೆಗಳಿಂದ ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳು ರಾಯಚೂರು 2025–2026 ನೇ ಸಾಲಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯ ಅನ್ವಯ ರಾಷ್ಟ್ರೀಯ ಅಂ–ಧತ್ವ ನಿಯಂತ್ರಣಾ ಕಾರ್ಯಕ್ರಮದಡಿಯಲ್ಲಿ 2025–2026 ನೇ ಸಾಲಿಗೆ ಉಚಿತ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಮಾಡಲು ಆಸಕ್ತಿಯುಳ್ಳ ಸಂಘ ಸಂಸ್ಥೆಯವರು (ಕಣ್ಣಿನ ಬೆಸ್ಡ್ ಆಸ್ಪತ್ರೆ ಹೊಂದಿರುವ) ಸಂಘದ ಜಿಲ್ಲಾ ಅಂಧತ್ವ ಕಾರ್ಯಕ್ರಮದ ಅಡಿಯಲ್ಲಿ ಒಪ್ಪಂದ ಮಾಡಿಕೊಳ್ಳಲು ಟೆ–ಂಡರ್ ಕರೆಯಲಾಗಿದ್ದು,

ಆಸಕ್ತರು ನವೆಂಬರ್ 12ರೊಳಗಾಗಿ ವೆಬ್‌ಸೈಟ್ ವಿಳಾಸ: https://kppp.karnataka.gov.in/ ಮುಖಾಂತರ ಟೆಂಡರ್‌ನಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳನ್ನು ಕಚೇರಿಯ ಸಮಯದಲ್ಲಿ ಭೇಟಿ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕು.ಕ. ಸಂಘ–ನೇತ್ರ ವಿಭಾಗದ ಪ್ರಭಾರಿ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತಾರಾಷ್ಟ್ರೀಯ ದತ್ತು ಮಾಸಾಚರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಪ್ರತಿ ವರ್ಷವು ನವೆಂಬರ್ ತಿಂಗಳನ್ನು ಅಂತಾರಾಷ್ಟ್ರೀಯ ದತ್ತು ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಅಮರೇಶ ಹರಿವಿ ಅವರು ತಿಳಿಸಿದ್ದಾರೆ. ಘಟಕದ ವತಿಯಿಂದ 0–18 ವರ್ಷದೊಳಗಿನ ಮಕ್ಕಳ ಪೋಷಣೆ ಮತ್ತು ರಕ್ಷಣೆಗಾಗಿ ಕಾರ್ಯ ನಿರ್ವಹಿಸುತ್ತಿದೆ. ಅದರಂತೆ ಬಾಲನ್ಯಾಯ ಕಾಯ್ದೆ–2025 ಹಾಗೂ ದತ್ತು ಮಾರ್ಗಸೂಚಿಯನ್ವಯ ಮಕ್ಕಳ ಕಲ್ಯಾಣ ಸಮಿತಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಕಾನೂನಿನಾತ್ಮಕವಾಗಿ ದತ್ತು ಪ್ರಕ್ರಿಯೆ ಮೂಲಕ ಮಕ್ಕಳನ್ನು ಕಾನೂನಿನಾತ್ಮಕ ದತ್ತು ನೀಡಲಾಗುತ್ತದೆ.

ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು, ಮಗುವಿಗೆ ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತವರಣವು ಕಲ್ಪಿಸುತ್ತದೆ. ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಪುರ್ನವಸತಿಗೆ ನೆರವಾಗುವುದು ಮಕ್ಕಳ ರಕ್ಷಣಾ ಯೋಜನೆಯ ಉದ್ದೇಶವಾಗಿರುತ್ತದೆ. ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ ಪ್ರತಿ ವರ್ಷವು ನವೆಂಬರ್ ತಿಂಗಳನ್ನು "ಅಂತಾರಾಷ್ಟ್ರೀಯ ದತ್ತು ಮಾಸಾಚರಣೆ–2025ರ ಈ ಬಾರಿಯ ಘೋಷವಾಕ್ಯ ವಿಶೇಷ ಅಗತ್ಯವಿರುವ ಮಕ್ಕಳನ್ನು ದತ್ತು ಪಡೆಯುವುದೊಂದಿಗೆ ಆಚರಿಸಲಾಗುತ್ತಿದ್ದು, ಯಾವುದೇ ವ್ಯಕ್ತಿ ಕಾನೂನು ಬಾಹಿರವಾಗಿ, ಯಾವುದೇ ಮಗುವನ್ನು ಅನಧಿಕೃತವಾಗಿ ದತ್ತು ಪಡೆಯುವುದು ಅಥವಾ ಮಾರಾಟ ಮಾಡುವುದು ಬಾಲನ್ಯಾಯ (ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015ರ ಸೆಕ್ಷನ್ 81ರನ್ವಯ 05 ವರ್ಷಗಳವರೆಗಿನ ಕಠಿಣ ಕಾರಗೃಹ ಶಿಕ್ಷೆ ಮತ್ತು 01 ಲಕ್ಷ ರೂ. ದಂಡದವರೆಗೆ ಶಿಕ್ಷೆಗೆ ಒಳಪಡುತ್ತಾರೆ. ಮಕ್ಕಳನ್ನು ಕಾನೂನಿನಾತ್ಮಕ ದತ್ತು ಪಡೆಯಲು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಾರ್ಯಾಲಯ ಮನೆ. ಸಂಖ್ಯೆ. 1–9–138 ಪಶ್ಚಿಮ ಪೊಲೀಸ್ ಠಾಣೆ ಹಿಂದೆ, ಮಾರೆಮ್ಮ ದೇವಸ್ಥಾನ ಎದುರುಗಡೆ, ಗೋಲ್ ಮಾರ್ಕೆಟ್, ಆಜಾದನಗರ ರಾಯಚೂರು–584101 ಅಥವಾ ದೂರವಾಣಿ ಸಂಖ್ಯೆ: 08532–226226ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು: ಆಯುಕ್ತ ದೇವರಾಜು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ರಾಯಚೂರಿನ ಮಹಾನಗರ ಪಾಲಿಕೆಯ ಆಸ್ತಿಗಳಾದ ಕೋಟೆ, ಕಂದಕ, ತೀನ್ ಕಂದೀಲ್ ಸೇರಿದಂತೆ ಇತರೆ ಸ್ಥಳಗಳಿಗೆ ಭೇಟಿ ನೀಡಲಾಗಿದ್ದು, ಮುಂದಿನ ದಿನಗಳಲ್ಲಿ ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿ ಪ್ರವಾಸಿಗರ ಸಂಖ್ಯೆಯನ್ನು ಹೆಚ್ಚಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ರಾಜ್ಯ ಪುರಾತತ್ವ ಇಲಾಖೆಯ ಆಯುಕ್ತರಾದ ದೇವರಾಜು ಅವರು ಹೇಳಿದರು.



ರಾಯಚೂರಿನಲ್ಲಿರುವ ಕೋಟೆ–ಯ ಹೊರಗಡೆ ಹಾಗೂ ಒಳಗಡೆ ವಾಸಮಾಡುವ ಮಾಲೀಕರಿಗೆ ಇ–ಖಾತ ವಿತರಿಸುವ ಕುರಿತು ಸಂಬಂಧಿಸಿದಂತೆ 6–8 ತಿಂಗಳಿನಿಂದ ಚರ್ಚೆ ಮಾಡಲಾಗುತ್ತಿದೆ. ಇದಕ್ಕಾಗಿ ಇಲಾಖೆಯ ಕಾನೂನು ರೀತಿಯಲ್ಲಿ ಹೇಗೆ ಪರಿಹಾರ ನೀಡಬೇಕು ಎಂದು ಚರ್ಚೆ ನಡೆಸಲಾಗಿದ್ದು, ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಒತ್ತಾಯ ಮೇರೆಗೆ ಸ್ಥಳಗಳನ್ನು ಪರಿಶೀಲನೆ ಮಾಡಲಾಗಿದೆ ಎಂದರು. ಕೋಟೆ–ಯ ಸುತ್ತಮುತ್ತಲಿನ ಐತಿಹಾಸಿಕ ಸ್ಥಳಗಳ ವೀಕ್ಷಣೆ ಮಾಡಲಾಗಿದ್ದು, ಮುಖ್ಯವಾಗಿ ನಗರದ ನವರಂಗ ದರ್ವಾಜ್ ಹಾಗೂ ಪುರತತ್ವ ಇಲಾಖೆಯ ವಸ್ತು ಸಂಗ್ರಹಾಲಯ, ತೀನ್ ಕಂದಿಲ್, ಕಾಸಭಾವಿ, ಅಮ್ ತಲಾಬ್ ಸೇರಿದಂತೆ ರಾಯಚೂರಿನ ಕೋಟೆಯ ಕಂದಕಗಳನ್ನು ವೀಕ್ಷಣೆ ಮಾಡಲಾಗಿದೆ. ರಾಜ್ಯದಲ್ಲಿ ಸುಮಾರು 800ಕ್ಕೂ ಹೆಚ್ಚು ರಾಜ್ಯ ಸಂರಕ್ಷಿತ ಸ್ಮಾರಕಗಳು ಇವೆ. ಅದರಲ್ಲಿ ಶೇಕಡ 50ರಷ್ಟು ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಂಡುಬರುತ್ತವೆ. ಇವುಗಳ ಸಂಖ್ಯೆ ಅನುಗುಣವಾಗಿ ಇನ್ನೂ ಇಲಾಖೆಯಿಂದ ಆದ್ಯತೆ ನೀಡಬೇಕು. ಅದಕ್ಕಾಗಿ ಮುಂದಿನ ದಿನಗಳಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಕೋಟೆಯಲ್ಲಿ ಪಾಲಿಕೆ ಅನುದಾನದಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿ ಸಾರ್ವಜನಿಕರಿಗೆ ಅವಕಾಶ ನೀಡಲಾಗುವುದು.

ಜೆಸ್ಕಾಂ ಇಲಾಖೆ ಪಕ್ಕದಲ್ಲಿ ಮುಖ್ಯ ಪ್ರವೇಶ ದ್ವಾರ ಮಾಡಲಾಗುತ್ತದೆ. ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ಪುರತತ್ವ ಇಲಾಖೆಯಿಂದ ಪಾಲಿಕೆ ವ್ಯಾಪ್ತಿ ಸೇರಿದಂತೆ ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಇಲಾಖೆ ಮುಖ್ಯಸ್ಥರಿಂದ ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದು ಜಿಲ್ಲೆಯಲ್ಲಿ ಹಲವು ಪ್ರವಾಸಿ ತಾಣಗಳನ್ನು ವೀಕ್ಷಣೆ ಮಾಡಲಾಗಿದ್ದು ಅವುಗಳನ್ನು ಮುಂದಿನ ದಿನಗಳಲ್ಲಿ ಪಾಲಿಕೆ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಲಾಗುತ್ತದೆ ಎಂದರು.

ಬೆಂಗಳೂರಿನ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರ ಸುತ್ತೋಲೆ ಹಿನ್ನಲೆಯಲ್ಲಿ ಅಧಿಕೃತ ಆಸ್ತಿಗಳಿಗೆ ಎ–ಖಾತಾ ಮತ್ತು ಬಿ–ಖಾತಾ ಪಡೆಯಲು ಅಗತ್ಯ ದಾಖಲಾತಿಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗುವುದು. ಅಲ್ಲದೆ ಪೌರ ಸುಧಾರಣಾ ಕೋಶದಿಂದ ರಾಷ್ಟ್ರೀಯ ಸೂಚ್ಯಾಂಕ ಕೇಂದ್ರದ ಸಹಯೋಗದೊಂದಿಗೆ ಇ–ಆಸ್ತಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು, ಇನ್ನು ಕೆಲವೇ ದಿನಗಳಲ್ಲಿ ಈ ತಂತ್ರಾಂಶವನ್ನು ಲೋಕಾರ್ಪಣೆ ಮಾಡಲಾಗುವುದು. ಈ ತಂತ್ರಾಂಶದಲ್ಲಿ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಅಧಿಕೃತ, ಅಧಿಕೃತವಲ್ಲದ ಮತ್ತು ಅಕ್ರಮ ಆಸ್ತಿಗಳ ಮಾಹಿತಿಯನ್ನು ದಾಖಲಿಸಲು/ತಿದ್ದುಪಡಿ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಇಲಾಖೆಯ ಪ್ರಕರಣ 26ರ ತಿದ್ದುಪಡಿ ಮೂಲ ಅಧಿನಿಯಮದಡಿ ಮೂರು ತಿಂಗಳುಗಳಿಗೆ ಎಂಬ ಪದಗಳ ಬದಲಿಗೆ ಎರಡು ವರ್ಷಗಳವರೆಗೆ ಹಾಗೂ ಎರಡು ಸಾವಿರ ರೂಪಾಯಿಗಳಿಗೆ ಎಂಬ ಪದಗಳ ಬದಲಿಗೆ ಒಂದು ಲಕ್ಷ ರೂಪಾಯಿಗಳಿಗೆ ಎಂಬ ಪದಗಳನ್ನು ಸೇರಿಸಲಾಗಿದ್ದು, ಈ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲಾಗುವುದೆಂದರು.

ಸಭೆಯಲ್ಲಿ ನವರಂಗ ದರ್ವಾಜ್ ಹಾಗೂ ಪುರತತ್ವ ಇಲಾಖೆಯ ವಸ್ತು ಸಂಗ್ರಹಾಲಯ, ತೀನ್ ಕಂದಿಲ್, ಕಾಸಭಾವಿ, ಅಮ್ ತಲಾಬ್, ಮಾವಿನ ಕೆರೆ ಅಭಿವೃದ್ಧಿ ಕುರಿತು ಸುಧೀರ್ಘ ಚರ್ಚಿಸಲಾಯಿತು. ಕೋಟೆ ವೀಕ್ಷಣೆ: ಪತ್ರಿಕಾಗೋಷ್ಠಿಗೂ ಮೊದಲು ನಗರದ ನವರಂಗ್ ಧರ್ವಾಜ್ ಕೋಟೆಗೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿ ಕಾಮಗಾರಿಯು ಗುಣಮಟ್ಟ ಹಾಗೂ ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಸಂಬಂಧಿಸಿದವರಿಗೆ ಸೂಚನೆ ನೀಡಲಾಯಿತು. ಇದೇ ಸಂದರ್ಭದಲ್ಲಿ ಪುರಾತತ್ವ ಇಲಾಖೆಯ ವಿವಿಧ ಅಧಿಕಾರಿಗಳು ಹಾಗೂ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿಗಳು ಇದ್ದರು.

# ಜಾನುವಾರುಗಳಿಗೆ ಲಸಿಕೆ ಹಾಕಿಸಿ, ಆರ್ಥಿಕ ನಷ್ಟ ತಪ್ಪಿಸಿ: ಶಿವಾನಂದ



ಮಲ್ಲಮ್ಮ ನುಡಿ ವಾರ್ತೆ


ರಾಯಚೂರು : ಇಲಾಖಾ ಅಧಿಕಾರಿಗಳು ಮತ್ತು ಸಿಬ್ಬಂದಿ ಪೋಲಿಯೋ ಲಸಿಕೆಯ ಮಾದರಿಯಲ್ಲಿ ಎಲ್ಲಾ ಹಳ್ಳಿಗಳಲ್ಲಿ ಲಸಿಕೆ ಅಭಿಯಾನ ನಡೆಸಬೇಕು. ರೈತ ಬಾಂಧವರು ತಮ್ಮಲ್ಲಿರುವ ಎಲ್ಲಾ ದನ, ಎಮ್ಮೆ ಮತ್ತು 3 ತಿಂಗಳ ಮೇಲ್ಪಟ್ಟ ಕರುಗಳಿಗೆ ತಪ್ಪದೇ ಲಸಿಕೆ ಹಾಕಿಸಿ ಸಾಂಕ್ರಾಮಿಕ ರೋಗದಿಂದಾಗುವ ಆರ್ಥಿಕ ನಷ್ಟ ತಪ್ಪಿಸಬೇಕು.

ಈ ಕಾರ್ಯಕ್ರಮಕ್ಕೆ ಎಲ್ಲರೂ ಸಹಕರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ ಅವರು ಹೇಳಿದರು.

ನವೆಂಬರ್ 03ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರಾಷ್ಟೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 8ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಸಾಮೂಹಿಕ ಲಸಿಕಾ ಕಾರ್ಯಕ್ರಮಕ್ಕೆ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಾಲನೆ ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ.ಪೋಮ್ ಸಿಂಗ್, ವಿ.ವೈ.ವಾಲ್ಮೀಕಿ ಸೇರಿದಂತೆ ಇತರರು ಇದ್ದರು.

# ಪಾರ್ಶ್ವವಾಯು ಸಂಭವಿಸಿದಾಗ ತಕ್ಷಣ ಚಿಕಿತ್ಸೆ ಪಡೆಯಿರಿ: ಡಾ.ಬಸರೆಡ್ಡಿ.ಎನ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.04:ಮನುಷ್ಯನಿಗೆ ಪಾರ್ಶ್ವವಾಯು ಸಂಭವಿಸಿದಾಗ ನಿರ್ಲಕ್ಷ್ಯವಹಿಸದೇ ತಕ್ಷಣ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ.ಎನ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ, ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರ, ಜಿಲ್ಲಾ ಆಸ್ಪತ್ರೆ, ಮರಿಸ್ವಾಮಿ ಮಠ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ 'ಪ್ರತಿಕ್ಷಣವೂ (ಎಣಿ–ಕೆ) ಮುಖ್ಯವಾಗುತ್ತದೆ' ಎಂಬ ಘೋಷವಾಕ್ಯದಡಿ ನಗರದ 07 ನೇ ವಾರ್ಡ್ ಭಲವಾದಿಗೇರಿಯ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ವಿಶ್ವ ಸ್ಟ್ರೋಕ್ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪಾರ್ಶ್ವವಾಯು ಅಥವಾ ಮೆದುಳಿನ ಆಘಾತವು ಮೆದುಳಿನ ಭಾಗಕ್ಕೆ ಕಡಿಮೆ ಆಮ್ಲಜನಕ ಉಂಟಾಗುವ ಸ್ಥಿತಿಯಾಗಿದ್ದು, 30 ವರ್ಷ ಮೇಲ್ಪಟ್ಟ ವ್ಯಕ್ತಿಗಳು ತಮ್ಮ ಆರೋಗ್ಯದ ಬಗ್ಗೆ 6 ತಿಂಗಳಿಗೊಮ್ಮೆ ತಪಾಸಣೆ ಮಾಡಿಸಿಕೊಳ್ಳಬೇಕು. ಮದ್ಯಪಾನ ಮತ್ತು ಧೂಮಪಾನದಿಂದ ದೂರವಿದ್ದು, ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪಾರ್ಶ್ವವಾಯುವಿನರೋಗಲಕ್ಷಣಗಳನ್ನು ನೆನಪಿಡಲು ನಾವು ಬಿ–ಫಾಸ್ಟ್ (ಃಇ ಈಂಖಖಿ) ಎಂಬ ಸಂಕ್ಷಿಪ್ತ ರೂಪ ಬಳಸುತ್ತೇವೆ. ಬಿ–ಬ್ಯಾಲೆನ್ಸ್ ರೋಗಿಯ ದೇಹದ ಸಮತೋಲನ ತಪ್ಪುವುದು. ಇ–ಐ ದೃಷ್ಟಿಯ ಸಮಸ್ಯೆಗಳು ಉಂಟಾಗುವುದು ಕೆಲವರಲ್ಲಿ ಇದು ಕುರುಡುತನವನ್ನು ಉಂಟುಮಾಡುತ್ತದೆ. ಎಫ್–ಫೇಸ್ ಫೇಸಿಯಲ್ ಅಸಿಮ್ಮೆಟ್ರಿ. ಮುಖದ ಒಂದು ಭಾಗ ವಕ್ರ ವಾಗುವುದು. ಎ–ಆರ್ಮ್ ವೀಕ್ನೆಸ್. ಕೈ ಅಥವಾ ಕಾಲು ಸ್ವಾಧೀನ ತಪ್ಪುವುದು. ಎಸ್–ಸ್ಪೀಚ್ ಡಿಸ್ಟರ್ಬೆನ್ಸ್. ಮಾತನಾಡಲು ತೊದಲುವುದು, ಮಾತು ನಿಂತುಹೋಗುವುದು, ಅಥವಾ ಬೇರೆಯವರು ಮಾತನಾಡಿದ್ದು ಅರ್ಥವಾಗದೇ ಇರುವುದು. ಟಿ–ಟೈಮ್ ರೋಗಿ ಸಂಪೂರ್ಣವಾಗಿ ನಾರ್ಮಲ್ ಆಗಿದ್ದ ಸಮಯ, ಅಥವಾ ಪಾರ್ಶ್ವವಾಯು ಸಂಭವಿಸಿದ ಮೊದಲ ನಾಲ್ಕು ಗಂಟೆಗಳಲ್ಲಿ (ಗೋಲ್ಡನ್ ಅವರ್) ರೋಗಿಗೆ ವೈದ್ಯಕೀಯ ನೆರವು ನೀಡುವ ಸಮಯವಾಗಿದೆ ಎಂದು ತಿಳಿಸಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಅನುಷ್ಠಾನಾಧಿಕಾರಿಹಾಗೂ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರಕುಮಾರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಪಾರ್ಶ್ವವಾಯು ಎಂದರೆ ಮೆದುಳಿನ ರಕ್ತನಾಳ ಹೆಪ್ಪುಗಟ್ಟಿ ಅಥವಾ ಒಡೆದು ಹೋಗಿ ಅದರಿಂದಾಗುವ ನರಮಂಡಲದ ಮೇಲಾಗುವ ಪರಿಣಾಮಕ್ಕೆ ಪಾರ್ಶ್ವವಾಯು ಎಂದು ಕರೆಯುತ್ತಾರೆ ಎಂದರು.

ರಕ್ತನಾಳ ಹೆಪ್ಪುಗಟ್ಟಿ ಮೆದುಳಿನ ಅಂಗಾಂಶಗಳಿಗೆ ಘಾಸಿ ಆಗುವುದನ್ನು ಇಸ್ಕಿಮಿಕ್ ಸ್ಟ್ರೋಕ್ ಎಂದು, ರಕ್ತನಾಳ ಒಡೆದು ಹೋಗಿ ಮೆದುಳಿನ ಒಳಗೆ ಉಂಟಾಗುವ ರಕ್ತಸ್ರಾವವನ್ನು ಹೆಮರೇಜಿಕ್ ಸ್ಟ್ರೋಕ್ ಎಂದು ಎರಡು ವಿಧಗಳಿವೆ ಎಂದು ತಿಳಿಸಿದರು.

ಜೀವನ ಶೈಲಿಯ ಬದಲಾವಣೆಯಿಂದ ಆರೋಗ್ಯದಲ್ಲಿ ಏರು–ಪೇರು ಉಂಟಾಗುವ ಸಾಧ್ಯತೆ ಇದ್ದು, ನಿಯಮಿತ ಆಹಾರ ಸೇವನೆ, ಯೋಗ–ವ್ಯಾಯಾಮ, ಸಂಗೀತ ಆಲಾಪನೆ ಸೇರಿದಂತೆ ಇತರೆ ಕ್ರಿಯಾಶೀಲ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳುವ ಮೂಲಕ ಶಿಸ್ತಿನ ಜೀವನ ನಡೆಸಿ ಸುಸ್ಥಿರ ಆರೋಗ್ಯ ಹೊಂದಬೇಕು ಎಂದು ಅವರು ಕರೆ ನೀಡಿದರು.

ಅಧಿಕ ರಕ್ತದೊತ್ತಡ, ಹೆಚ್ಚಿನ ಮಧುಮೇಹ, ತಲೆಸುತ್ತು, ರಕ್ತ ಪರಿಚಲನೆಯಲ್ಲಿ

ಬದಲಾವಣೆ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣವೇ ವೈದ್ಯರನ್ನು ಸಂಪರ್ಕಿಸಿ ಅಗತ್ಯ ಚಿಕಿತ್ಸೆ ಪಡೆದುಕೊಳ್ಳುವ ಮೂಲಕ ರೋಗಮುಕ್ತರಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ ಕುರಿತ ಭಿತ್ತಿಪತ್ರಗಳನ್ನು ಗಣ್ಯರು ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ 7ನೇ ವಾರ್ಡ್ ನ ಸದಸ್ಯರಾದ ಉಮಾದೇವಿ ಶಿವರಾಜು, ಕರ್ನಾಟಕ ಛಲವಾದಿ ಮಹಾಸಭಾ ಜಿಲ್ಲಾಧ್ಯಕ್ಷ ಜೆ.ಶ್ರೀನಿವಾಸ, ಮರಿಸ್ವಾಮಿ ಮಠ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಸೌಜನ್ಯ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮದ ಜಿಲ್ಲಾ ಕಾರ್ಯಕ್ರಮ ಸಂಯೋಜಕ ಸಣ್ಣಕೇಶವ ಸೇರಿದಂತೆ ವೈದ್ಯಾಧಿಕಾರಿಗಳು,

ಸಿಬ್ಬಂದಿ, ಆಶಾ ಕಾರ್ಯಕರ್ತರು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಇತರರು ಉಪಸ್ಥಿತರಿದ್ದರು.

# ದಿ.8ರಂದು ವಿಶ್ವಚೇತನ ಕನಕದಾಸ ಅದ್ದೂರಿ ಜಯಂತಿ ಆಚರಣೆ– ಕೆ. ಬಸವಂತಪ್ಪ



ರಾಯಚೂರು, ನ.5–ದಾಸ ಶ್ರೇಷ್ಠ ಕನಕದಾಸರ 538ನೇ ಜಯಂತೋತ್ಸವ ಕಾರ್ಯಕ್ರಮವನ್ನು ದಿ.8 ರಂದು ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಅತ್ಯಂತ ವಿಜೃಂಭಣೆಯಿಂದ ಆಚರಣೆ ಮಾಡಲಾಗುವುದು ಎಂದು ಕನಕದಾಸ ಸಂಘದ ಜಿಲ್ಲಾಧ್ಯಕ್ಷರಾದ ಕೆ. ಬಸವಂತಪ್ಪ ಅವರು ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಪರಮಪೂಜ್ಯ ಶ್ರೀ ಸಿದ್ಧರಾಮನಂದ ಮಹಾಸ್ವಾಮಿಗಳ ಕನಕ ಗುರುಪೀಠ ಮಹಾಸಂಸ್ಥಾನ, ಕುಲಬುರ್ಗಿ ವಿಭಾಗ , ತಿಂಥಿಣಿ ಬ್ರಿಡ್ಜ್ ಇವರ ಸಹಯೋಗದೊಂದಿಗೆ ದಾಸಶ್ರೇಷ್ಠ ಕನಕದಾಸರ 538 ನೇ ಜಯಂತಿಯನ್ನು ವಿಜೃಂಭಣೆಯಿಂದ ಆಚಸರಿಸಲಾಗುತ್ತಿದ್ದು, ನ.8 ರಂದು ಬೆಳಿಗ್ಗೆ 10 ಗಂಟೆಗೆ ಗಂಜ್ ವೃತ್ತದಲ್ಲಿನ ಕನಕದಾಸ ಪುತ್ಥಳಿಗೆ ಮಾರ್ಲಾಪಣೆ ನಂತರ ಡೊಳ್ಳು ಭಜಂತ್ರಿ ವಿವಿಧ ಕಲಾತಂಡಗಳು ಮತ್ತು ಕುಂಭ ಹೊತ್ತ ಮಹಿಳೆಯರಿಂದ ಭವ್ಯ ಮೆರವಣಿಗೆ ನಡೆಯಲಿದೆ ಎಂದರು.

ನಂತರ ಮಧ್ಯಾಹ್ನ 12 ಗಂಟೆಗೆ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದ್ದು ಇದರಲ್ಲಿ ಸಚಿವರು, ಶಾಸಕರುಗಳು ಸ್ಥಳೀಯ ಜನಪ್ರತಿನಿಧಿಗಳು ಭಾಗವಹಿಸಲಿದ್ದು, ಕನಕದಾಸರ ಕುರಿತು ಪ್ರಾಧ್ಯಾಪಕರಾದ ಪ್ರಾಣೇಶ್ ಕುಲಕರ್ಣಿಯವರು ಉಪನ್ಯಾಸವನ್ನು ನೀಡಲಿದ್ದಾರೆ. ನಂತರ ಗಣನೀಯ ಸೇವೆ ಮಾಡಿದ ಕೆ.ಕರಿಯಪ್ಪ ಸಿಂಧನೂರು ರವರಿಗೆ ಕನಕರತ್ನ ಪ್ರಶಸ್ತಿ ನೀಡಿ ಗೌರವಿಸಲಿದ್ದು , ಕನಕ ಶ್ರೀ ಪ್ರಶಸ್ತಿಯನ್ನು ಶಿಕ್ಷಣ ಕ್ಷೇತ್ರದಲ್ಲಿ ರಾಜಶೇಖರ್ ಸುಂಕೇಶ್ವರಹಾಳ್ , ಮಾಧ್ಯಮ ಕ್ಷೇತ್ರದಲ್ಲಿ ಶ್ರೀಕಾಂತ್ ಸಾವೂರ್ , ಸಾಹಿತ್ಯ ಕ್ಷೇತ್ರದಲ್ಲಿ ರಾಜಶ್ರೀ ಕಲ್ಲೂರ್ , ವೈದ್ಯಕೀಯ ಕ್ಷೇತ್ರದಲ್ಲಿ ಡಾ.ಅರುಣ್ ಮಸ್ಕಿ , ಪರಿಸರ ಕ್ಷೇತ್ರದಲ್ಲಿ ಸರಸ್ವತಿ , ಸಂಗೀತ ಕ್ಷೇತ್ರದಲ್ಲಿ ಸೂಗೂರೇಶ್ವರ ಅಸ್ಕಿಹಾಳ್ , ಸಾಮಾಜಿಕ ಕ್ಷೇತ್ರದಲ್ಲಿ ಲಿಂಗಪ್ಪ ಪೂಜಾರಿಯವರಿಗೆ ನೀಡಿ ಗೌರವಿಸಲಾಗುವುದು ಎಂದರು. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಸಮಾಜದ ಭಾಂದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಸ್ವಾಗತ ಸಮಿತಿ ಅಧ್ಯಕ್ಷರಾದ ಶೇಖರ್ ವಾರದ್ , ಮಾಜಿ ನಗರಸಭೆ ಸದಸ್ಯರಾದ ಈರಣ್ಣ , ಕಾರ್ಯಾಧ್ಯಕ್ಷರಾದ ಬಿ.ಬಸವರಾಜ್ , ನಾಗೇಂದ್ರಪ್ಪ ಮಟಮಾರಿ, ಹನುಂತಪ್ಪ ವಕೀಲರು, ಬಜಾರಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು

# ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.04:ಪ್ರಸ್ತಕ ಸಾಲಿಗೆ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 6, 7, 8, 9 ಮತ್ತು 11 ನೇ ತರಗತಿಯ ವಿದ್ಯಾರ್ಥಿನಿಯರಿಗೆ ಕರಾಟೆ–ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ವಾರದಲ್ಲಿ ಎರಡು ದಿನಗಳಂತೆ 6 ತಿಂಗಳ ತರಬೇತಿ ನೀಡುವ ನಿಟ್ಟಿನಲ್ಲಿ ಅರ್ಹ ಮಹಿಳಾ ಮತ್ತು ಪುರುಷ(ಮಹಿಳೆಯರಿಗೆ ಮೊದಲ ಆದ್ಯತೆ) ತರಬೇತುದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ನೀಡುವ ತರಬೇತುದಾರರಿಗೆ ಸಂಭಾವನೆ ರೂ.750 ಮತ್ತು ಪ್ರಯಾಣ ವೆಚ್ಚ ರೂ.100 ರಂತೆ ನೀಡಲಾಗುತ್ತಿದ್ದು, ಆಸಕ್ತ ಕರಾಟೆ–ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ ಪಡೆದ ಮಹಿಳೆ ಮತ್ತು ಪುರುಷ ತರಬೇತುದಾರರು ಅರ್ಜಿ ಸಲ್ಲಿಸಬಹುದಾಗಿದೆ. ಅಧಿಸೂಚನೆ ಮತ್ತು ವಿವರಗಳಿಗಾಗಿ ಆನ್ ಲೈನ್ ವೆಬ್ ಸೈಟ್ http:// dom.karnataka.gov.inಗೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392–200125/224 ಹಾಗೂ ಜಿಲ್ಲೆಯ ಅಲ್ಪಸಂಖ್ಯಾತರ ತಾಲ್ಲೂಕು ಮಾಹಿತಿ ಕೇಂದ್ರಗಳಲ್ಲಿ (ಬಳ್ಳಾರಿ–8310321101, ಸಂಡೂರು–9036925966/ 8660575061 ಮತ್ತು ಸಿರುಗುಪ್ಪ–9148889975) ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈಟಿಪಿಎಸ್ ನಲ್ಲಿ ಕಲ್ಲಿದ್ದಲು ಕಳ್ಳ ಸಾಗಾಣಿಕೆ–ಶಿವಕುಮಾರ ಆರೋಪ



ರಾಯಚೂರು, ನ.5–ವೈಟಿಪಿಎಸ್ ವಿದ್ಯುತ್ ಘಟಕಕ್ಕೆ ಸಂಬಂಧಿಸಿದ ಕಲ್ಲಿದ್ದಲು ರೈಲ್ವೆ ಅಧಿಕಾರಿಗಳು ಅಕ್ರಮ ಕೂಟ ರಚನೆ ಮಾಡಿಕೊಂಡು ವಾಮಾ ಮಾರ್ಗದಿಂದ ಅಕ್ರಮವಾಗಿ ಕಲ್ಲಿದ್ದಲು ಕಳ್ಳಸಾಗಾಣಿಕೆ ಮಾಡಲಾಗುತ್ತಿದ್ದು, ಇದರಿಂದ ಸರಕಾರಕ್ಕೆ ಕೋಟ್ಯಾಂತರ ರೂ. ನಷ್ಟ ವಂಚನೆ ಮಾಡಲಾಗುತ್ತಿದೆ ಕೂಡಲೇ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ ನಷ್ಟವಾದ ನೂರಾರು ಕೋಟಿ ರೂ. ವಸೂಲಿ ಮಾಡಬೇಕು ಎಂದು ಜಯ ಕರ್ನಾಟಕ ಸಂಘಟನೆಯ ಜಿಲ್ಲಾಧ್ಯಕ್ಷ ಎಸ್. ಶಿವಕುಮಾರ ಯಾದವ್ ಒತ್ತಾಯಿಸಿದರು. ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಅವರು, ವೈಟಿಪಿಎಸ್ ಇಲಾಖೆಯ ಕೆಲವು ಅಧಿಕಾರಿಗಳು, ಉಪ ಗುತ್ತಿಗೆ ಪಡೆದಿರುವ ಪವಮ್ಯಾಕ್ ಕಂಪನಿಯ ಕೆಲ ಸಿಬ್ಬಂದಿಗಳು ಹಾಗೂ ರೈಲ್ವೆ ಇಲಾಖೆಯ ಅಧಿಕಾರಿಗಳು ಮತ್ತು ಆಂಧ್ರ ಮೂಲದ ಕಲ್ಲಿದ್ದಲು ಕ್ಲೀನಿಂಗ್ ಕಾಮಗಾರಿ ಪಡೆದಿರುವ ಗುತ್ತಿಗೆದಾರರು ಸೇರಿಕೊಂಡು ಪ್ರತಿನಿತ್ಯ ನೂರಾರು ಟನ್‌ಗಳಷ್ಟು ಕಲ್ಲಿದ್ದಲನ್ನು ಕಳ್ಳಸಾಗಾಣಿಕೆ ಮಾಡಿ ರಾಜ್ಯ ಸರ್ಕಾರಕ್ಕೆ ಪ್ರತಿ ತಿಂಗಳು ಕೋಟ್ಯಾಂತರ ರೂಪಾಯಿಗಳ ನಷ್ಟವನ್ನುಂಟು ಮಾಡಿರುವ ಇವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ ಇವರುಗಳಿಂದ ಕಳೆದ ಹಲವು ತಿಂಗಳುಗಳಿಂದ ನಷ್ಟವಾದ ನೂರಾರು ಕೋಟಿ ರೂಪಾಯಿಗಳನ್ನು ವಸೂಲಿ ಮಾಡಿ ಅಕ್ರಮದಲ್ಲಿ ಭಾಗಿಯಾದ ಎಲ್ಲಾ ಅಧಿಕಾರಿಗಳು ಹಾಗೂ ಗುತ್ತಿಗೆದಾರರನ್ನು ಕಾನೂನಿನ ಪ್ರಕಾರ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಸರ್ಕಾರದ ಹಣ ದುರ್ಬಳಕೆ ಮಾಡಿ, ಸರಕಾರಕ್ಕೆ ಆರ್ಥಿಕ ನಷ್ಟವುಂಟು ಮಾಡುತ್ತಿರುವ ಹಾಗೂ ತೆರಿಗೆ ವಂಚನೆ ಮಾಡಿ ಇನ್ನಿತರ ಅಕ್ರಮ ಆರ್ಥಿಕ ಅವ್ಯವಹಾರದಂತಹ, ಕ್ರಿಮಿನಲ್ ಸ್ವರೂಪ ದಂತಹ ಅಕ್ರಮಗಳನ್ನು ಗಂಭೀರವಾಗಿ ಪರಿಗಣಿಸಿ ವೈಟಿಪಿಎಸ್ ಅಧಿಕಾರಿಗಳಾದ ಶ ಹರೀಶ್ ಪುಂಡಿ ಇ.ಇ., ಚಂದ್ರಶೇಖರ್ ಶೆಟ್ಟಿ ಎಸ್.ಇ., ಉಪಗುತ್ತಿಗೆ ಪಡೆದ ಪವರ್‌ಮ್ಯಾಕ್ ಸೂಪರ್ವೈಸರ್ ಶ ಹರಿಕೃಷ್ಣ, ಸುರೇಂದ್ರನಾಥ್ ಕೆ. ಮ್ಯಾನೇಜರ್, ಯರಮರಸ್ ರೈಲ್ವೆ ನಿಲ್ದಾಣದ ಅಧಿಕಾರಿ ಸರಕಾರ್, ಸ್ಟೇಷನ್ ಮಾಸ್ಟರ್ ಮತ್ತು ರೈಲ್ವೆ ನಿಲ್ದಾಣದ ವ್ಯಾಗಿನ್ ಕ್ಲೀನಿಂಗ್ ಗುತ್ತಿಗೆದಾರ ಶೇಷಗಿರಿ ರಾವ್, ಮಾಲೀಕರು ಶ್ರೀ ಗುರು ರಾಘವೇಂದ್ರ ಎಂಟರ್‌ಸಸ್ ಇವರುಗಳು ಎಲ್ಲಾ ಸೇರಿ ಅಕ್ರಮ ಕೂಟವನ್ನು ರಚಿಸಿಕೊಂಡು ರಾಜ್ಯ ಸರ್ಕಾರದ ಅಧೀನದಲ್ಲಿರುವ ವೈಟಿಪಿಎಸ್ ವಿದ್ಯುತ್ ಕೇಂದ್ರಕ್ಕೆ ಸಂಪೂರ್ಣವಾಗಿ ತಲುಪಬೇಕಾದ ಕಲ್ಲಿದ್ದಲು ವಾಮ ಮಾರ್ಗಗಳಿಂದ ಪ್ರತಿನಿತ್ಯ ಟನ್ ಗಟ್ಟಲೆ ಕಲ್ಲಿದ್ದಲು ಕಳ್ಳತನದಿಂದ ಖಾಸಗಿ ಲಿಕ್ಕರ್ ಕಂಪನಿಗೆ ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಈ ಸಂಧರ್ಭದಲ್ಲಿ ಕರುಣಾಕರ್ ರೆಡ್ಡಿ ಗುಂಜಹಳ್ಳಿ, ಟಿ. ವಿಶಾಲ್ ಕುಮಾರ್, ಸೈಯದ್ ಕೈಸರ್ ಹುಸೇನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕ. ಸಾ. ಪ. ನಡೆ ಸಾಹಿತಿಗಳ ಮನೆ ಕಡೆ.



ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ :– ನ 5 ಇಲ್ಲಿನ ಕರ್ನಾಟಕ ರಾಜ್ಯೋತ್ಸವದ ನಿಮಿತ್ತವಾಗಿ ಹಮ್ಮಿಕೊಂಡ ಕನ್ನಡ ಸಾಹಿತ್ಯ ಪರಿಷತ್ತಿನ ನಡೆ ಸಾಹಿತಿಗಳ ಮನೆಯ ಕಡೆ ಕಾರ್ಯಕ್ರಮ ಅಡಿಯಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಸಾಹಿತ್ಯ ಕ್ಷೇತ್ರಕ್ಕೆ ಅನನ್ಯ ಕೊಡುಗೆ ನೀಡಿರುವ ಸಾಹಿತ್ಯ ಗಳನ್ನು ಸನ್ಮಾನಿಸಿ ಗೌರವಿಸುವ ಕಾರ್ಯಕ್ರಮ ಜರುಗಿತು. ತಹಸೀಲ್ದಾರರಾದ ದತ್ತಾತ್ರೇಯ ಗಾದಾ. ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಅಧ್ಯಕ್ಷರಾದ ರುದ್ರಮಣಿ ಮಠಪತಿ. ಉಪಾಧ್ಯಕ್ಷರಾದ ರಮೇಶ ಉಮಾಪೂರೆ. ಶಾಲಿವಾನ ಕಾಕನಾಳೆ. ವೀರಶೆಟ್ಟಿ ಪಾಟೀಲ್. ಸೇರಿದಂತೆ ಅನೇಕರು ಸೇರಿ ನಗರದಲ್ಲಿ ಇತ್ತೀಚೆಗೆ ನಿವೃತ್ತ ಶಿಕ್ಷಕರು ಹಾಗೂ ಸಾಹಿತಿಗಳಾದ ರೇವಣಪ್ಪ ವಾಂಜರಖೇಡೆ. ಪಿ. ಜಿ. ಹಿರೇಮಠ. ಲಕ್ಷ್ಮೀಬಾಯಿ ಪಾಟೀಲ. ಶಿಕ್ಷಕರಾದ ನಾಗೇಂದ್ರ ಬಿರಾದಾರ ಅವರ ಮನೆಗೆ ಭೇಟಿ ನೀಡಿ ಸನ್ಮಾನಿಸಿ ಗೌರವಿಸಿದರು.

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ನ 5. ತಾಲೂಕಿನ ಟೋಕರೆ ಕೋಳಿ ಸಮಾಜದ ಸರ್ಕಾರಿ ನೌಕರರ ಸಂಘದ ವತಿಯಿಂದ 2025–26 ನೇ ಸಾಲಿನ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳುವ ಪ್ರಯುಕ್ತ ಪೂರ್ವಭಾವಿ ಸಭೆ ಕರೆದು ಚರ್ಚಿಸಿದಂತೆ, ಡಿಸೆಂಬರ್ 2025 ನೇ ಕಾರ್ಯಕ್ರಮ ನಡೆಸಲು ನಿರ್ಧರಿಸಲಾಗಿದೆ. ಕಾರಣ 2024–25 ನೇ ಸಾಲಿನ ಎಸ್,ಎಸ್,ಎಲ್,ಸಿ ಹಾಗೂ ಪಿ,ಯು,ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 75 ಕ್ಕಿಂತ ಹೆಚ್ಚು ಪ್ರತಿಶತ ಅಂಕ ಪಡೆದವರು,ಎಮ್,ಬಿ,ಬಿ, ಎಸ್,ಬಿ,ಎ,ಎಮ್,ಎಸ್, ಬಿ,ಡಿ,ಎಸ್, ಐ ಐ ಟಿ, ಗೆ ಪ್ರವೇಶ ಪಡೆದವರು, ಸ್ನಾತಕೋತ್ತರ ಪದವಿಯಲ್ಲಿ ವಿಶ್ವವಿದ್ಯಾಲಯಕ್ಕೆ ರಾ. ಗಳಿಸಿ ಚಿನ್ನದ ಪದಕ ಪಡೆದವರು, ಪಿ ಹೆಚ್ ಡಿ, ಪದವಿ ಪೂರೈಸಿದ ಟೋಕರೆ ಕೋಳಿ ಸಮಾಜದ ವಿದ್ಯಾರ್ಥಿಗಳು ದಿನಾಂಕ 20/11/2025 ರ ಒಳಗಾಗಿ ದೃಢಿಕೃತ ಜೆರಾಕ್ಸ್ ಅಂಕ ಪಟ್ಟಿ ಮತ್ತು ಪೋಟೋ ಸಹಿತ ಅರ್ಜಿ ಸಲ್ಲಿಸಬಹುದು ಎಂದು, ಸಮಾಜದ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಚನ್ನವೀರ ಎಸ್. ಜಮಾದಾರ ಹಾಗೂ ಪ್ರಧಾನ ಕಾರ್ಯದರ್ಶಿ ತುಕಾರಾಮ ಕೆ. ರೊಡ್ಡೆ ಹಾಗೂ ಸಂಘದ ಸರ್ವ ಪದಾಧಿಕಾರಿಗಳು ಸಂಪರ್ಕಿಸುವ ಮೊಬೈಲ್ ನ. (1)ಚನ್ನವೀರ ಎಸ್ ಜಮಾದಾರ್.9901648199.

(2)ತುಕಾರಾಮ ಕೆ ರೊಡ್ಡೆ.9900468201.

(3)ಸುಭಾಷ್ ಚಾಟ್ಲೆ. 9449852940.

(4)ಗೋವಿಂದ ಚಿಟ್ಟಮಾಪಲ್ಲೆ. 9844616068.

(5)ಹಣಮಂತ ಜಮಾದಾರ್. 9611903423.

(6) ವಿಜಯಕುಮಾರ ಜಮಾದಾರ್. 9449138686. ಮಾಹಿತಿಗಾಗಿ ಸಂಪರ್ಕಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೀರ ವನಿತೆ ಓನಕೆ ಓಬವ್ವ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.04: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ವೀರ ವನಿತೆ ಓನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ನ.11 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು. ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್.ಗಣೇಶ್, ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತದ ಉಪಾಧ್ಯಕ್ಷ ಹೆಚ್.ಲಕ್ಷ್ಮಣ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಛಲವಾದಿ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಸಿ.ಶಿವಕುಮಾರ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಬಳ್ಳಾರಿಯ ಸಾಹಿತಿ ಎನ್.ಡಿ.ವೆಂಕಮ್ಮ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ಎಸ್.ಲಕ್ಷ್ಮೀ ಪವನ್ ಕುಮಾರ್ ಅವರಿಂದ ಸುಗಮ ಸಂಗೀತ ಕಾರ್ಯಕ್ರಮ ಇರಲಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಮಹಾನಗರ ಪಾಲಿಕೆಯ ಆಯುಕ್ತ ಮಂಜುನಾಥ ಪಿ.ಎಸ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ವಿವಿಧ ಸೃಜನಾತ್ಮಕ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಲು ಮಕ್ಕಳಿಂದ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.04:ಕರ್ನಾಟಕ ರಾಜ್ಯ ಬಾಲಭವನ ಸೊಸೈಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಪ್ರಸ್ತಕ ಸಾಲಿನ ಮಕ್ಕಳ ದಿನಾಚರಣೆ ಕಾರ್ಯಕ್ರಮ ಆಯೋಜಿಸಿದ್ದು, ಕಾರ್ಯಕ್ರಮದಲ್ಲಿ ವಿವಿಧ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಲು ಮಕ್ಕಳಿಂದ ನೋಂದಣಿಗೆ ಆಹ್ವಾನಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.*ವಿವಿಧ ಸ್ಪರ್ಧೆಗಳು:*

ಸೃಜನಾತ್ಮಕ ಕಲೆ: ಚಿತ್ರಕಲೆ, ಕರಕುಶಲೆ, ಜೇಡಿಮಣ್ಣಿನ ಕಲೆ.ಸೃಜನಾತ್ಮಕ ಬರವಣಿಗೆ: ಕಥೆ, ಕವನ, ಪ್ರಬಂಧ ಬರೆಯುವುದು.ಸೃಜನಾತ್ಮಕ ಪ್ರದರ್ಶನ ಕಲೆ: ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಹಾಗೂ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ವಾದ್ಯ ಸಂಗೀತ, ಯಕ್ಷಗಾನ, ಯಕ್ಷಿಣಿ ಪ್ರದರ್ಶನ, ಸುಗಮ ಸಂಗೀತ, ಏಕಪಾತ್ರಾಭಿನಯ ಸೇರಿದಂತೆ ಯಾವುದಾದರೊಂದು ಕಲೆಯನ್ನು ವಿಷಯದ ಬಗ್ಗೆ ಪ್ರದರ್ಶಿಸಲು ಅವಕಾಶವಿರುತ್ತದೆ.ವಿಜ್ಞಾನದಲ್ಲಿ ನೂತನ ಆವಿಷ್ಕಾರ: ವಿಜ್ಞಾನಕ್ಕೆ ಸಂಬಂಧಪಟ್ಟಂತೆ ಒಂದು ವಿಷಯದ ಬಗ್ಗೆ ಮಾದರಿ ಪ್ರದರ್ಶನ ಹಾಗೂ ವಿವರಣೆ ನೀಡುವುದು.

ಅಂಗವಿಕಲ, ಬುಡಕಟ್ಟು ಪ್ರದೇಶದ ಮಕ್ಕಳಿಗಾಗಿ ಮೇಲಿನ ಯಾವುದೇ ಪ್ರಕಾರದಲ್ಲಿ ಭಾಗವಹಿಸಬಹುದು. 09 ರಿಂದ 16 ವರ್ಷದೊಳಗಿನ ಆಸಕ್ತಿಯುಳ್ಳ ಸರ್ಕಾರಿ ಶಾಲೆ ಮಕ್ಕಳು, ಗ್ರಾಮೀಣ ಪ್ರದೇಶ ಮಕ್ಕಳು ನೋಂದಾಯಿಸಿಕೊಳ್ಳಬಹುದು. ಸೌಲಭ್ಯ ವಂಚಿತ ಮಕ್ಕಳಿಗೆ ಸುಧಾರಣಾ ಸಂಸ್ಥೆಗಳ ಬಾಲಕರು, ಬಾಲಕಿಯರ ಬಾಲ ಮಂದಿರದ ಮಕ್ಕಳಿಗೆ ಮೊದಲನೇ ಆದ್ಯತೆ ನೀಡಲಾಗುವುದು.

ಮಕ್ಕಳ ಹೆಸರು ನೋಂದಾಯಿಸಿದವರಿಗೆ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಬಹುದು. ನೋಂದಾಯಿಸಿಕೊಳ್ಳಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು. ನ.10 ಕೊನೆಯ ದಿನವಾಗಿದೆ. ಕಾರ್ಯಕ್ರಮದ ದಿನಾಂಕವನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂ.08392–266219, ಮೊ.9741965198 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.04:ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಮಕ್ಕಳು ಮತ್ತು ಯುವಜನರಲ್ಲಿರುವ ಕಲಾ ಪ್ರತಿಭೆ ಗುರುತಿಸಿ, ಅವರಿಗೆ ಉತ್ತೇಜನ ನೀಡುವ ಮತ್ತು ತಮ್ಮ ಕಲಾ ನೈಪುಣ್ಯವನ್ನು ವೃದ್ಧಿಗೊಳಿಸುವಂತೆ ಪ್ರೋತ್ಸಾಯಿಸಲು ಜಿಲ್ಲಾ ಮಟ್ಟದ ಕಲಾಪ್ರತಿಭೋತ್ಸವ ಕಾರ್ಯಕ್ರಮಕ್ಕಾಗಿ ವಿವಿಧ ಪ್ರಕಾರಗಳ ಪ್ರತಿಭೆಗಳಿಗೆ ಅರ್ಜಿ ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಸುವ ಅವಧಿಯನ್ನು ನ.20 ರ ವರೆಗೆ ವಿಸ್ತರಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಇದೇ ನ.26 ಮತ್ತು 27 ರಂದು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಜಿಲ್ಲಾಮಟ್ಟದ ಕಲಾಪ್ರತಿಭೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ.ಬಾಲಪ್ರತಿಭೆ ಹಾಗೂ ಕಿಶೋರ ಪ್ರತಿಭೆ ವಿಭಾಗದಲ್ಲಿ ಏಕ ವ್ಯಕ್ತಿಯ ಸ್ಪರ್ಧೆಯಲ್ಲಿ ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಜನಪದ ಗೀತೆ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ, ಹಿಂದೂಸ್ತಾನಿ ಮತ್ತು ಶಾಸ್ತ್ರೀಯ ಸಂಗೀತ ಗಾಯನ ಸೇರಿದಂತೆ ಹಲವಾರು ಕಲಾ ಪ್ರಕಾರಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಬಾಲ ಪ್ರತಿಭೆ 08 ರಿಂದ 14 ವರ್ಷದ ಒಳಗಿನ ಹಾಗೂ ಕಿಶೋರ ಪ್ರತಿಭೆ 14 ರಿಂದ 18 ವರ್ಷದ ಒಳಗಿನ ಯುವ ಪ್ರತಿಭೆ ವಿಭಾಗದಲ್ಲಿ ಏಕ ವ್ಯಕ್ತಿಯ ಸ್ಪರ್ಧೆಯಲ್ಲಿ ನನ್ನ ಮೆಚ್ಚಿನ ಸಾಹಿತಿ (ಆಶುಭಾಷಣ), ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಕರ್ನಾಟಕ/ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಹಾಗೂ ವಾದ್ಯ ಸಂಗೀತ ಕಲಾ ಪ್ರಕಾರಗಳಿವೆ.

ಯುವ ಪ್ರತಿಭೆ 18 ರಿಂದ 30 ವರ್ಷಕ್ಕಿಂತ ಕಡಿಮೆಯಾಗಿರಬೇಕು. ಸಮೂಹ ಸ್ಪರ್ಧೆಯಲ್ಲಿ ನಾಟಕ ಕಲಾ ಪ್ರಕಾರ ಇದ್ದು, ಈ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವ ತಂಡದ ಸದಸ್ಯರ ಸಂಖ್ಯೆ ಕನಿಷ್ಠ 10 ಮತ್ತು ಗರಿಷ್ಠ 15 ಮೀರಬಾರದು.ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳು ವಯಸ್ಸಿನ ದೃಢೀಕರಣಕ್ಕಾಗಿ ದಾಖಲೆಗಳನ್ನು ತಾವು ವ್ಯಾಸಂಗ ಮಾಡುತ್ತಿರುವ ವಿದ್ಯಾ ಸಂಸ್ಥೆಯಿಂದ ಪಡೆದು ಅರ್ಜಿಯ ಜೊತೆಗೆ ಲಗತ್ತಿಸಬೇಕು. ಒಬ್ಬರಿಗೆ ಒಂದು ಕಲಾ ಪ್ರಕಾರದಲ್ಲಿ ಮಾತ್ರ ಸ್ಪರ್ಧಿಸಲು ಅವಕಾಶವಿದ್ದು, ಶಾಲಾ ಮುಖ್ಯಸ್ಥರು ತಮ್ಮ ಶಾಲಾ ಮೂಲಕ ಸ್ಪರ್ಧಿಗಳು ಅರ್ಜಿ ಸಲ್ಲಿಸುವಾಗ ಪ್ರತಿ ಕಲಾ ಪ್ರಕಾರ ಹಾಗೂ ಪ್ರತಿ ವಿಭಾಗದ ಸ್ಪರ್ಧಿಗಳ ಜನ್ಮ ದಿನಾಂಕವನ್ನು ದೃಢೀಕರಿಸಿದ ಪಟ್ಟಿಯನ್ನು ಪ್ರತ್ಯೇಕವಾಗಿ ಕಳುಹಿಸಬೇಕು. ಖಾಸಗಿ ಸ್ಪರ್ಧಿಯಾಗಿದ್ದಲ್ಲಿ ಶಾಲಾ–ಕಾಲೇಜಿನ ಜನ್ಮ ದಿನಾಂಕ ದೃಢೀಕರಣ ಪತ್ರ ಅಥವಾ ಪಂಚಾಯಿತಿ, ಪುರಸಭೆ, ನಗರಸಭೆ ಕಚೇರಿಗಳಿಂದ ನೀಡುವ ಜನನ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

ಸ್ಪರ್ಧೆಗಳಲ್ಲಿ ಭಾಗವಹಿಸುವವರು ಅರ್ಜಿಯನ್ನು ನ.20 ರೊಳಗಾಗಿ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು, ದೂ.08392–275182 ಗೆ ಅಥವಾ ಈ ವಿಳಾಸಕ್ಕೆ ನೇರವಾಗಿ ಅಂಚೆಯ ಮೂಲಕ ಸಲ್ಲಿಸಬಹುದು.ನಿಯಮಗಳು ಮತ್ತು ನಿಬಂಧನೆಗಳಿದ್ದಲ್ಲಿ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾಲ್ಕಿಯಲ್ಲಿ ಕನ್ನಡ ದೀಕ್ಷೆ ರಥಯಾತ್ರೆಗೆ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ, ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ವತಿಯಿಂದ ಜಿಲ್ಲೆಯಾದ್ಯಂತ ಸಂಚರಿಸುತ್ತಿರುವ ಕನ್ನಡ ದೀಕ್ಷೆ ರಥಯಾತ್ರೆಗೆ ಪಟ್ಟಣದಲ್ಲಿ ಸ್ವಾಗತ ಕೋರಲಾಯಿತು. ಪಟ್ಟಣದ ಹೊರ ವಲಯದಲ್ಲಿ ಬುಧವಾರ ಕರವೇ ತಾಲೂಕು ಘಟಕದ ಪದಾಧಿಕಾರಿಗಳು, ಕನ್ನಡಾಭಿಮಾನಿಗಳು, ವಿದ್ಯಾರ್ಥಿಗಳು ಘೋಷಣೆಗಳನ್ನು ಕೂಗುತ್ತ ಕನ್ನಡ ದೀಕ್ಷೆ ರಥಯಾತ್ರೆಗೆ ಸ್ವಾಗತ ಕೋರಿದರು.

ತಾಲೂಕು ಕರವೇ ಗೌರವಾಧ್ಯಕ್ಷ ವಿಷ್ಣುವರ್ಧನ ಕೋಟೆ, ತಾಲೂಕು ಅಧ್ಯಕ್ಷ ಬಂಡೆಪ್ಪ ಕಸರಣ್ಣ ಸೇರಿದಂತೆ ಮುಂತಾದವರು ಮಾತನಾಡಿ, ಬೀದರ್ ನಗರದ ಪೂಜ್ಯ ಶ್ರೀ ಚನ್ನಬಸವ ಪಟ್ಟದ್ದೇವರ ರಂಗ ಮಂದಿರದಲ್ಲಿ ನ.7ರಂದು ಕನ್ನಡ ದೀಕ್ಷೆ ಮತ್ತು ಪ್ರತಿಜ್ಞಾವಿಧಿ ಕಾರ್ಯಕ್ರಮ ಜರುಗಲಿದೆ.

ಈ ಐತಿಹಾಸಿಕ ಸಮಾರಂಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಸೇರಿದಂತೆ ನಾಡಿನ ಮಠಾಧೀಶರು, ಸಚಿವರು, ಶಾಸಕರು, ಸಾಹಿತಿಗಳು, ಬುದ್ಧಿಜೀವಿಗಳು ಭಾಗವಹಿಸಲಿದ್ದಾರೆ. ಹಾಗಾಗಿ ತಾಲೂಕಿನ ಕನ್ನಡಾಭಿಮಾನಿಗಳು ಕೂಡ ಈ ಸಮಾರಂಭದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಬಾಲರಾಜ ಶಿವಣಗೆ, ರೇವಣಸಿದ್ದಯ್ಯ ಸ್ವಾಮಿ, ಶಿವಶರಣ ಕೋಟೆ ಸೇರಿದಂತೆ ಮುಂತಾದವರು ಹಾಜರಿದ್ದರು.

# ಅಹಿಂದ ಸಂಘಟನೆಯಲ್ಲಿ ನನಗೆ ಹೆಗಲಾಗಿದ್ದರು ಎಚ್.ವೈ.ಮೇಟಿ ನಿಷ್ಠಾವಂತ ರಾಜಕಾರಣಿ–ಸಿಎಂ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.5–ಶಾಸಕ ಎಚ್.ವೈ.ಮೇಟಿ ನಿಷ್ಠಾವಂತ ರಾಜಕಾರಣಿ, ಅಹಿಂದ ಸಂಘಟನೆಯಲ್ಲಿ ಅವರು ನನಗೆ ಹೆಗಲಾಗಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಮಂಗಳವಾರ ನಿಧನರಾದ ಬಾಗಲಕೋಟೆ ಶಾಸಕ ಎಚ್.ವೈ. ಮೇಟಿಯವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ತಿಮ್ಮಾಪೂರಕ್ಕೆ ಬಂದಿದ್ದ ಅವರು, ಅಂತ್ಯಕ್ರಿಯೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇಟಿ ಅವರು ಜಾತ್ಯಾತೀತ ನಾಯಕರಾಗಿದ್ದರು ಎಂದರು.

1983 ರಿಂದ ನನ್ನ ಜೊತೆ ಒಡನಾಟ ಹೊಂದಿದ್ದ ಮೇಟಿ, ನಾನು ಜನತಾ ಪಕ್ಷ, ಜನತಾ ದಳ ಹಾಗೂ ಕಾಂಗ್ರೆಸ್ ಪಕ್ಷದಲ್ಲಿದ್ದರೂ ನನ್ನ ಜೊತೆಯಲ್ಲೇ ಬಂದು ನಾನು ಕೈಗೊಳ್ಳುವ ತೀರ್ಮಾನಗಳಿಗೆ ಬದ್ಧರಾಗಿದ್ದರು. ಅಹಿಂದ ಸಂಘಟನೆಯಲ್ಲಿ ನನ್ನೊಂದಿಗೆ ಹೆಗಲಿಗೆ ಹೆಗಲು ಕೊಟ್ಟು ದುಡಿದರು. ಅವರೊಬ್ಬ ನಿಷ್ಠಾವಂತ ರಾಜಕಾರಣಿ. ನಾನು ಅವರಿಗಿಂತ ಒಂದು ವರ್ಷ ಕಿರಿಯನಾಗಿದ್ದರೂ ನನ್ನನ್ನು ಅತ್ಯಂತ ಗೌರವದಿಂದ ಕಾಣುತ್ತಿದ್ದರು ಎಂದು ಮುಖ್ಯಮಂತ್ರಿ ಹೇಳಿದರು.

ಶಾಸಕರಾಗಿ, ಸಂಸದರಾಗಿ, ಸಚಿವರಾಗಿ ಸೇವೆ ಸಲ್ಲಿಸಿದ ಮೇಟಿಯವರು ವಿನಯವಂತರಾಗಿದ್ದರು. ಅಧಿಕಾರ ಶಾಶ್ವತವಾದುದಲ್ಲ. ಜನರಿಂದ ದೊರಕುವ ಅಧಿಕಾರವನ್ನು ಜನರ ಒಳಿತಿಗಾಗಿ ಬಳಸಬೇಕು ಎನ್ನುವ ಮನೋಭಾವ ಅವರದು ಎಂದು ಹೇಳಿದ ಸಿದ್ದರಾಮಯ್ಯ, ಬಹಳ ವಿದ್ಯಾವಂತರಲ್ಲದಿದ್ದರೂ ರಾಜಕೀಯ ತತ್ವಗಳನ್ನು ತಪ್ಪದೇ ಪಾಲಿಸುತ್ತಿದ್ದರು. ಜನರೊಂದಿಗೆ ಬೆರೆಯುವ ಗುಣ ಹೊಂದಿದ್ದ ಅವರು ಕುರುಬ ಸಮುದಾಯದವರಾಗಿದ್ದರೂ, ಜಾತ್ಯಾತೀತ ತತ್ವದ ಪಾಲಕರಾಗಿದ್ದರು. ಎಲ್ಲ ಜಾತಿ ಧರ್ಮಗಳನ್ನು ಪ್ರೀತಿಯಿಂದ ಕಾಣುವ ಸ್ವಭಾವದವರಾಗಿದ್ದರು ಎಂದರು.

ಬಾಗಲಕೋಟೆಯಲ್ಲಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯನ್ನು ಸ್ಥಾಪಿಸುವುದಕ್ಕೆ ಮೇಟಿ ಅವರೇ ಕಾರಣರಾಗಿದ್ದರು. ಅದಕ್ಕೆ ಅಡಿಗಲ್ಲು ಹಾಕುವ ಕಾರ್ಯಕ್ರಮದ ಸಂದರ್ಭದಲ್ಲಿ ಅವರು ಇಲ್ಲದಿರುವುದು ವಿಷಾದನೀಯ. ಅವರ ಆಸೆಯಂತೆ ಈಗಾಗಲೇ ಟೆಂಡರ್ ಕೂಡ ಕರೆಯಲಾಗಿದೆ. ಶೀಘ್ರದಲ್ಲಿಯೇ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದರು.

ಮೇಟಿಯವರ ನಿಧನದಿಂದ ದು:ಖವಾಗಿದೆ. ವೈಯಕ್ತಿಕವಾಗಿ ನನಗೆ ದೊಡ್ಡ ನಷ್ಟವಾಗಿದೆ. 1996 ರಲ್ಲಿ ಸಮೀಕ್ಷೆ ಮಾಡಿಸಿ ಮೇಟಿಯವರಿಗೆ ಬಾಗಲಕೋಟೆಯಲ್ಲಿ ಲೋಕಸಭೆ ಚುನಾವಣೆಗೆ ನಿಲ್ಲಿಸಲು ನಿರ್ಧಾರವಾಗಿತ್ತು. ಆ ಸಂದರ್ಭದಲ್ಲಿ ಸಚಿವರಾಗಿದ್ದ ಮೇಟಿಯವರು ನನ್ನ ಮಾತನ್ನು ಗೌರವಿಸಿ ಸಚಿವ ಸ್ಥಾನಕ್ಕೆ ರಾಜಿನಾಮೆ ನೀಡಿ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಜಯಸಾಧಿಸಿದರು ಎಂದು ಹೇಳಿದ ಮುಖ್ಯಮಂತ್ರಿಗಳು, ಜನಾನುರಾಗಿಯಾಗಿದ್ದರೆ ಮಾತ್ರ ಬಾಗಲಕೋಟೆ ಕ್ಷೇತ್ರದಲ್ಲಿ ಗೆಲ್ಲಲು ಸಾಧ್ಯ ಎಂದು ಹೇಳಿದರು.

ಹುಟ್ಟು ಆಕಸ್ಮಿಕ, ಸಾವು ಖಚಿತ ಇವೆರಡರ ಮಧ್ಯೆ ಇರುವ ಜೀವನವನ್ನು ಸಾರ್ಥಕ ಮಾಡಿಕೊಳ್ಳುವುದು ಮುಖ್ಯ. ಮೇಟಿಯವರು ಅಂತಹ ಸಾರ್ಥಕ ಜೀವನ ನಡೆಸಿದ್ದಾರೆ. ಅವರ ಆದರ್ಶಗಳು ಇತರರಿಗೆ ಮಾದರಿಯಾಗಲಿ ಎಂದು ಹೇಳಿ. ಇನ್ನೊಬ್ಬ ಮೇಟಿ ಹುಟ್ಟುವುದು ಕಷ್ಟ. ಮೇಟಿಗೆ ಮೇಟಿಯೇ ಸಾಟಿ ಜನರ ಆಶೀರ್ವಾದದಿಂದ ಇಷ್ಟು ಎತ್ತರಕ್ಕೆ ಬೆಳೆದು ಹಳ್ಳಿಯಿಂದ ದಿಲ್ಲಿಯವರೆಗೆ ರಾಜಕಾರಣ ಮಾಡಿದರು ಎಂದರು.

# ಮಕ್ಕಳು ಉತ್ತಮ ಆರೋಗ್ಯ ಅಭ್ಯಾಸ ರೂಢಿಸಿಕೊಳ್ಳಿ: ಲಕ್ಷ್ಮಿದೇವಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.05(ಕರ್ನಾಟಕ ವಾರ್ತೆ): ಆರೋಗ್ಯವಂತ ಯುವ ನಾಡನ್ನು ರೂಪಿಸಬೇಕೆಂದರೆ ಮಕ್ಕಳು ಉತ್ತಮ ಆರೋಗ್ಯದ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ಬಳ್ಳಾರಿ ಪೂರ್ವ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಲಕ್ಷ್ಮಿದೇವಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಪಂ ಪೋಷಣ್ ವಿಭಾಗದಿಂದ ಕೆ.ಎಂ.ಇ.ಅರ್.ಸಿ ಇಲಾಖೆಯ ಸಿಇಪಿಎಂಐಜೆಡ್ ಯೋಜನೆಯಡಿ ನಗರದ ಕರ್ನಾಟಕ ಪಬ್ಲಿಕ್ ಶಾಲೆ (ಬಾಲಕಿಯರ) ಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವಿಶೇಷ ಪೂರಕ ಪೌಷ್ಠಿಕ ಅಹಾರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಾಲಾ ಮಕ್ಕಳಲ್ಲಿರುವ ಅಪೌಷ್ಠಿಕತೆ, ರಕ್ತಹೀನತೆ ಮತ್ತು ಬಹುಪೋಷಕಾಂಶಗಳ ನ್ಯೂನ್ಯತೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಬಿಸಿಯೂಟ, ಕ್ಷೀರಭಾಗ್ಯ ಯೋಜನೆ ಮತ್ತು ಎಎನ್ಎಫ್ ಯೋಜನೆಯ ಜೊತೆಗೆ ಶಾಲಾವಧಿಯ ನಂತರ ಮಕ್ಕಳಿಗೆ ಉಸುಲಿಕಾಳು ಹಾಗೂ ಹಣ್ಣನ್ನು ವಿತರಿಸಲಾಗುತ್ತದೆ ಎಂದರು. ಜಿಪಂ ಪೋಷಣ್ ವಿಭಾಗದ ಶಿಕ್ಷಣಾಧಿಕಾರಿ ಡಿ.ಕಸ್ತೂರಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯ ಸರ್ಕಾರವು ಶಾಲಾ ಮಕ್ಕಳ ಪೋಷಕರಂತೆ ಕಾಳಜಿ ವಹಿಸುತ್ತಿದೆ. ಮಕ್ಕಳಿಗೆ ಹಲವಾರು ಸೌಲಭ್ಯಗಳನ್ನು ನೀಡುತ್ತಿದೆ. ಉಸುಲಿಕಾಳಲ್ಲಿರುವ ವಿಟಮಿನ್, ಪ್ರೋಟಿನ್‌ಗಳು ಮಕ್ಕಳ ದೈಹಿಕ ಬೆಳವಣಿಗೆಯ ಆರೋಗ್ಯ–ಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ಉಪಯೋಜನಾ ಸಮನ್ವಯಾಧಿಕಾರಿಗಳ ಕಚೇರಿಯ ಎಪಿಸಿ ಶಖೀಲ್ ಅಹ್ಮದ್, ಬಳ್ಳಾರಿ ಪಶ್ಚಿಮ ವಲಯದ ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ್ ಜಿ.ಎಸ್., ಸಿರುಗುಪ್ಪ ತಾಲ್ಲೂಕು ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಝೂಫರ್ ಷರೀಫ್, ಜಿಲ್ಲೆಯ CEPMIZ ಯೋಜನೆಯ ನಿಕಟಪೂರ್ವ ನೋಡಲ್ ಅಧಿಕಾರಿ ಬಸವರಾಜ್ ಮಿಂಚೇರಿ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಇದ್ದರು. ಬಳ್ಳಾರಿ ಪೂರ್ವ ಮತ್ತು ಪಶ್ಚಿಮ ವಲಯಗಳ ಅಕ್ಷರ ದಾಸೋಹ ಸಹಾಯಕ ಅಧಿಕಾರಿ ಶಿವನನಾಯ್ಡ್ ಸ್ವಾಗತಿಸಿದರು. ಸಂಡೂರಿನ ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ಶ್ರೀಧರಮೂರ್ತಿ.ಪಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಇಂಕ್ಯುಬೇಶನ್ ಯೋಜನೆ ಕುರಿತು ನ.10 ರಂದು ಜಾಗೃತಿ ಕಾರ್ಯಾಗಾರ

ಬಳ್ಳಾರಿ,ನ.05(ಕರ್ನಾಟಕ ವಾರ್ತೆ):

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಆರ್‌ಎಎಂಪಿ ಯೋಜನೆಯಡಿ ಇಂಕ್ಯುಬೇಶನ್ ಯೋಜನೆ ಕುರಿತು ನ.10 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಹೊರವಲಯದ ಅಲ್ಲೀಪುರ ಬಳಿಯ ಬಳ್ಳಾರಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮ್ಯಾನೇಜ್‌ಮೆಂಟ್ (ಬಿಐಟಿಎಂ) ಇಂಜಿನಿಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳು ಮತ್ತು ಉದ್ಯಮಿಗಳಲ್ಲಿ ಹಣಕಾಸು, ತಾಂತ್ರಿಕ ಮತ್ತು ಮಾರ್ಗದರ್ಶನ ಬೆಂಬಲದ ಕುರಿತು ಜಾಗೃತಿ ಮೂಡಿಸಲಾಗುವುದು. ಇಂಕ್ಯುಬೇಶನ್ ಸೌಲಭ್ಯಗಳ ಪ್ರದರ್ಶನ, ಯಶಸ್ಸಿನ ಕಥೆಗಳ ಹಂಚಿಕೊಳ್ಳುವಿಕೆ ಮತ್ತು ನೆಟ್ ವರ್ಕಿಂಗ್‌ಗಾಗಿ ತಜ್ಞರು, ಅಧಿಕಾರಿಗಳು ಮತ್ತು ಉದ್ಯಮಿಗಳೊಂದಿಗೆ ಸಂಪರ್ಕ ಸಾಧಿಸಲು ಅವಕಾಶ ಒದಗಿಸಿಕೊಡಲಾಗುವುದು. ಆಸಕ್ತ ವಿದ್ಯಾರ್ಥಿಗಳು, ಉದ್ದಿಮೆದಾರರು ಪಾಲ್ಗೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಮೊ.9449226221, 9964768334 ಮತ್ತು 08392242370 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಡಿಸಿಸಿ ಬ್ಯಾಂಕ್‌ನ ಆಡಳಿತಾಧಿಕಾರಿ ಸಿಇಓ ಕುರೇರ ನೇಮಕ



ಬಾಗಲಕೋಟೆ: ನವೆಂಬರ 05 (ಕರ್ನಾಟಕ ವಾರ್ತೆ) : ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನ ಆಡಳಿತ ಅವಧಿ ನವೆಂಬರ 4ಕ್ಕೆ ಮುಕ್ತಾಯಗೊಂಡ ಹಿನ್ನಲೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಆಡಳಿತಾಧಿಕಾರಿಯಾಗಿ ನೇಮಕಗೊಂಡಿದ್ದು, ಆಡಳಿತಾಧಿಕಾರಿಯ ಪ್ರಭಾರ ಅಧಿಕಾರವನ್ನು ಗುರುವಾರ ವಹಿಸಿಕೊಂಡಿದ್ದಾರೆ.

# ಸರ್ವಾಂಗೀಣ ಅಭಿವೃದ್ಧಿಗಾಗಿ ಒತ್ತಾಯಿಸಿ : ಕುಕನೂರು ಪಟ್ಟಣ ಸಂಪೂರ್ಣ ಬಂದ್ ಯಶಸ್ವಿ



ಮಲ್ಲಮ್ಮ ನುಡಿ ವಾರ್ತೆ

ಕುಕನೂರು : ತಾಲ್ಲೂಕು ಆಡಳಿತ ಸೌಧ, ನ್ಯಾಯಾಲಯ ಸಂಕೀರ್ಣ ಮತ್ತು ಬುದ್ಧ ಬಸವ ಅಂಬೇಡ್ಕರ್ ಭವನ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಳಿಗಾಗಿ ಆಗ್ರಹಿಸಿ ಕುಕನೂರ ತಾಲ್ಲೂಕು ಅಭಿವೃದ್ಧಿ ಸಮಿತಿ, ವಕೀಲರ ಸಂಘ, ಕನ್ನಡಪರ ಸಂಘಟನೆಗಳು, ಹಮಾಲರ ಸಂಘ, ಕ್ರೀಡಾ ಪ್ರೇಮಿಗಳ ಸಂಘ, ಕಟ್ಟಡ ಕಾರ್ಮಿಕರ ಸಂಘ, ದಲಿತ ಸಂಘಟನೆಗಳು ಹಾಗೂ ಆಲ್ ಇಂಡಿಯಾ ಬಂಜಾರ ಸೇನೆ, ವರ್ತಕರ ಸಂಘ, ರೈತಪರ ಸಂಘಟನೆಗಳು, ಸುಡುಗಾಡ ಸಿದ್ಧರ ಸಂಘ ಸೇರಿ ಹಲವು ಸಂಘ ಸಂಸ್ಥೆಗಳು ಕುಕನೂರ್ ಪಟ್ಟಣ ಸ್ವಯಂ ಪ್ರೇರಿತ್ ಬಂದ್ ಕರೆಗೆ ಸೋಮವಾರ ಬೆಂಬಲ ನೀಡಿ ಬೃಹತ್ ಪ್ರತಿಭಟನೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದರು.

ಈ ಬಂದ್ ನಿಂದಾಗಿ ಸಾಕಷ್ಟು ಸಾರ್ವಜನಿಕರು, ವಿದ್ಯಾರ್ಥಿಗಳು ತೊಂದರೆ ಅನುಭವಿಸುವಂತಾಯಿತು. ಪ್ರತಿಭಟನಾನಿರತರು ರಸ್ತೆ ಮಧ್ಯದಲ್ಲಿ ಪ್ರಮುಖ ವೃತ್ತಗಳಲ್ಲಿ ಟೈರ್ ಗೆ ಬೆಂಕಿ ಹಚ್ಚಿ ತಮ್ಮ ಆಕ್ರೋಶವನ್ನು ಹೊರಹಾಕಿದರು.

ಅಲ್ಲದೇ ಪಟ್ಟಣದಲ್ಲಿ ಮೆಡಿಕಲ್ ಶಾಪ್, ಆಸ್ಪತ್ರೆಗಳು ಹೊರತುಪಡಿಸಿ ಇನ್ನುಳಿದ ಎಲ್ಲಾ ಅಂಗಡಿ ಮುಗ್ಗಟ್ಟುಗಳು ಸಂಪೂರ್ಣ ಬಂದಾಗಿದ್ದು ಪರಿಣಾಮ ವ್ಯಾಪರ ವಹಿವಾಟು ಸ್ಥಗಿತಗೊಂಡಿತ್ತು, ಶಾಲಾ ಕಾಲೇಜುಗಳು ಸಹ ಮುಚ್ಚಿದು, ಬಂದ್ ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಪಟ್ಟಣದ ಎಪಿಎಂಸಿ ಯಲ್ಲಿ ಪ್ರತಿಭಟನಾಕಾರರು ಜಮಾಯಿಸಿ ಅಲ್ಲಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆ ಶಿರೂರ ವೀರಭದ್ರಪ್ಪ ಸರ್ಕಲ್ ನಿಂದ ತೇರಿನ ಗಡ್ಡಿ ವೃತ್ತ ಮಾರ್ಗವಾಗಿ ಕೋಳಿಪೇಟೆ, ಅಂಬೇಡ್ಕರ್ ಸರ್ಕಲ್ ನಿಂದ ಮರಳಿ ಶಿರೂರ ವೀರಭದ್ರಪ್ಪ ಸರ್ಕಲ್ ನಲ್ಲಿ ಆಗಮಿಸಿ ಬೃಹತ್ ಪ್ರತಿಭಟನೆ ನಡೆಸಿದರು. ಬಳಿಕ ಸಹಾಯಕ ಆಯುಕ್ತ ಕ್ಯಾಪ್ಟನ್ ಮಹೇಶ್ ಮಾಲಗತ್ತಿ ಅವರಿಗೆ ಮನವಿ ನೀಡಿ, ಪ್ರಮುಖ ಬೇಡಿಕೆಗಳು ಬಗೆಹರಿಸುವಂತೆ ಒತ್ತಾಯಿಸಿದರು.

ತಾಲೂಕ ಕ್ರೀಡಾಂಗಣ ನಿರ್ಮಾಣ ವೇದಿಕೆಯ ಪ್ರಮುಖರಾದ ಚಂದ್ರಕಾಂತ ಗುಡಿಮನಿ ಮಾತನಾಡಿ, ಪಟ್ಟಣವು 30ಸಾವಿರಕ್ಕೂ ಹೆಚ್ಚು ಜನಸಂಖ್ಯೆಯನ್ನು ಹೊಂದಿದ್ದು ಒಂದೇ ಒಂದು ಕ್ರೀಡಾಂಗಣವನ್ನು ಸಹ ಹೊಂದಿರುವುದಿಲ್ಲ. ಇದ–ಕ್ಕೆ ಕ್ರೀಡಾಪಟುಗಳು ಕ್ರೀಡಾ ಚಟುವಟಿಕೆಗಾಗಿ ಹರಸಾಹಸ ಪಡುವ ಪರಿಸ್ಥಿತಿ ಉಂಟಾಗಿದ್ದು ಪೊಲೀಸ್ ಹಾಗೂ ಸೇನೆ ಸೇರುವ ಉದ್ದೇಶ ಹೊಂದಿರುವ ಯುವಕರು ದೈಹಿಕ ಸಾಮರ್ಥ್ಯ ಉದ್ದೇಶದಿಂದ ಕ್ರೀಡಾ ಚಟುವಟಿಕೆಗಾಗಿ ಬೇರೆ ಬೇರೆ ಕಡೆ ಅವಲಂಬಿಸಬೇಕಾದ ಅನಿವಾರ್ಯತೆ ಉಂಟಾಗಿದೆ ಆದ್ದರಿಂದ ಶೀಘ್ರದಲ್ಲಿ ತಾಲೂಕ ಕ್ರೀಡಾಂಗಣ ನಿರ್ಮಾಣಗೊಳ್ಳಲಿ ಎಂದು ಆಗ್ರಹಿಸಿದರು

ಪ್ರತಿಭಟನೆಯಲ್ಲಿ ಪ್ರಮುಖರಾದ ಸತ್ಯನಾರಾಯಣಪ್ಪ ಹರಪನಹಳ್ಳಿ, ಈರಪ್ಪ ಕುಡುಗುಂಟಿ, ಅಶೋಕ ತೋಟದ, ಗಗನ ನೋಟಗಾರ, ರಾಮಣ್ಣ ಬಂಕದ ಮನೆ, ಸಂಗಮೇಶ ಗುತ್ತಿ, ರೆಹಮಾನ್ ಸಾಬ್ ಮಕಪ್ಪನವರ್, ಬಸವರಾಜ ಜಂಗ್ಲಿ, ರಮೇಶ್ ಗಜಕೋಶ, ಪ್ರಶಾಂತ್ ಆರ ಬೆರಳಿನ, ಕಾರ್ತಿಕ ಜಾದವ್, ನಿಂಗಪ್ಪ ಗೊರ್ಲೆಕೊಪ್ಪ, ಸಿದ್ದು ವಾಲ್ಮೀಕಿ, ರವಿ ನಾಲ್ವಡ, ರಾಘು ಕಾತರಕಿ, ಮಂಜುನಾಥ ಯಡೆಯಾಪುರ, ಸೇರಿದಂತೆ ನೂರಾರು ಜನ ಪಾಲ್ಗೊಂಡಿದ್ದರು.

**ಮಂಗಳೂರು ಮತ್ತು ಕುಕುನೂರು ಹೋಬಳಿ ಒಳಗೊಂಡಂತೆ ಕುಕನೂರು ಪಟ್ಟಣವನ್ನು ತಾಲೂಕ ಕೇಂದ್ರವನ್ನಾಗಿ ಘೋಷಣೆ ಮಾಡಿ ಸುಮಾರು ಎಂಟು ವರ್ಷಗಳು ಕಳೆದರೂ ಸಹ ಇಂದಿಗೂ ಪಟ್ಟಣದಲ್ಲಿ ಸಂಪೂರ್ಣವಾಗಿ ತಾಲೂಕ ಕೇಂದ್ರದಲ್ಲಿ ಆಡಳಿತ ಮಾಡಿಸಬೇಕಾದ ಸರ್ಕಾರಿ ಕಾರ್ಯಾಲಯಗಳು ಕಾರ್ಯ ಆರಂಭ ಮಾಡದೇ ಇರುವುದು ವಿಪರ್ಯಾಸದ ಸಂಗತಿಯಾಗಿದೆ- ಮುಖಂಡ ಸಿದ್ದಯ್ಯ ಕಳ್ಳಿಮಠ**

# ಜಿಲ್ಲೆಯ ಎಪಿಎಂಸಿ ಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಿ: ಡಾ. ಸುರೇಶ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯ ಕೃಷಿ ಉತ್ಪನ್ನ ಮಾರುಕಟ್ಟೆ (ಎಪಿಎಂಸಿ) ಗಳಲ್ಲಿ ಮೂಲಭೂತ ಸೌಕರ್ಯಗಳಾದ ಪಾರ್ಕಿಂಗ್ ವ್ಯವಸ್ಥೆ, ಲೈಟಿಂಗ್, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಕೃಷಿ ಉತ್ಪನ್ನ ಮಾರುಕಟ್ಟೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು.

ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಸರಿಯಾದ ವ್ಯವಸ್ಥೆ ಇಲ್ಲದಿದ್ದರೆ ಹಳ್ಳಿಯಿಂದ ಬರುವ ರೈತರಿಗೆ ತೊಂದರೆಯಾಗುತ್ತದೆ. ಇಲ್ಲಿಗೆ ಬರುವ ರೈತರಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ತಮ್ಮದು. ಕೃಷಿ ಮಾರುಕಟ್ಟೆ ಅಧಿಕಾರಿ ಮತ್ತು ಕಾರ್ಯದರ್ಶಿಗಳು ಏನು ಮಾಡುತ್ತಿದ್ದೀರಾ, ಜಿಲ್ಲೆಯ ಕೆಲವು ಕಡೆ ಸ್ವಚ್ಚತೆ ಇಲ್ಲ ಈ ಕುರಿತು ಅಧಿಕಾರಿಗಳು ಎಚ್ಚೆತ್ತು ಸರಿಯಾಗಿ ಕೆಲಸ ಮಾಡದಿದ್ದರೆ ಸಂಬಂಧಿಸಿದವರ ಮೇಲೆ ಸೂಕ್ತ ಕ್ರಮ ಜರುಗಿಸಬೇಕಾಗುತ್ತದೆ ಎಂದು ಹೇಳಿದರು.

ಎಲ್ಲಾ ಎಪಿಎಂಸಿ ಗಳಲ್ಲಿ ರೈತರಿಂದ ಯಾವುದೇ ರೀತಿಯ ಕಮೀಷನ್ ಪಡೆಯಬಾರದು ಎಂದು ದೊಡ್ಡದಾಗಿ ಪರ್ಮನೆಂಟ್ ಬೋರ್ಡ್ ಹಾಕಿಸಬೇಕು. ಬೆಳವಿನಾಳ ಎಪಿಎಂಸಿಯಲ್ಲಿ ಯಾವುದೇ ಸರಿಯಾದ ವ್ಯವಸ್ಥೆ ಇಲ್ಲ ಅಲ್ಲಿಗೆ ಮಾರಾಟಕ್ಕೆ ಬರುವ ರೈತರಿಗೆ ತೊಂದರೆಯಾಗುತ್ತದೆ. ಸರಿಯಾದ ರಸ್ತೆ ಸಹ ಇಲ್ಲ. ಅಲ್ಲಿ ಅಪ್ರೋಚ್ ರೋಡ್ ಮಾಡಬೇಕು ಮತ್ತು ಮಾರ್ಕೆಟ್ ಸಮಯ ಬೆಳಿಗ್ಗೆ 5:30 ರಿಂದ ಪ್ರಾರಂಭಿಸಬೇಕು. ಬರುವ ಮತ್ತೊಂದು ಸಭೆಯೊಳಗೆ ತಾವು ಮಾಡಿದ ಕೆಲಸದ ಕುರಿತು ಸಮಗ್ರ ಮಾಹಿತಿ ನೀಡಬೇಕೆಂದರು.

ಈ ಸಭೆಯಲ್ಲಿ ಕೃಷಿ ಇಲಾಖೆಯ ಉಪನಿರ್ದೇಶಕರಾದ ಎಲ್.ಸಿದ್ದೇಶ್ವರ, ಕೃಷಿ ಮಾರಾಟ ಇಲಾಖೆಯ ಅಧಿಕಾರಿ ವೀರಭದ್ರಯ್ಯ ಹಿರೇಮಠ, ಜಿಲ್ಲಾ ಕಾರ್ಮಿಕ ಅಧಿಕಾರಿ ಸುಧಾ ಗರಗ, ಕೃಷಿ ಉತ್ಪನ್ನ ಮಾರುಕಟ್ಟೆ ಕೊಪ್ಪಳ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ ಹಿರೇಮಠ, ಲೀಡ್ ಬ್ಯಾಂಕ್ ಮ್ಯಾನೇಜರ್ ಮಾರುತಿ ಹಾಗೂ ಜಿಲ್ಲೆಯ ಎಲ್ಲಾ ಕೃಷಿ ಉತ್ಪನ್ನ ಮಾರುಕಟ್ಟೆಯ ಕಾರ್ಯದರ್ಶಿಗಳು ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ನವೆಂಬರ್ 6 ರಂದು ವಿದ್ಯುತ್ ವ್ಯತ್ಯಯ

ಕಲಬುರಗಿ,ನ.07.(ಕ.ವಾ)–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆನಗರ ವಿಭಾಗದಲ್ಲಿ ಬರುವ 11ಕೆ.ವಿ. ಬಸವೇಶ್ವರ ಫೀಡರ್ ವ್ಯಾಪ್ತಿಯಲ್ಲಿ ನಿರ್ವಹಣಾ ಕಾರ್ಯಕೈಗೊಳ್ಳುವ ಪ್ರಯುಕ್ತ ನವೆಂಬರ್ 6ರಂದು ಗುರುವಾರ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ

ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ)

ಪ್ರಕಟಣೆಯಲ್ಲಿ ಕೋರಿದ್ದಾರೆ. ಬಸವೇಶ್ವರ ಫೀಡರ್: ನವಾಬ್ ಸಾಬ್ ಮೊಹಲ್ಲಾ, ಗುರುಸ್ನಾಯ್‌ಕಾಲೋನಿ, ಚುನ್ನಾಭಟ್ಟಿ, ನ್ಯೂ ರಹೆಮತ್ ನಗರ, ಪೀರ್ದೋಸ್ ಕಾಲೋನಿ, ಬಸವಣ್ಣ ಕಟ್ಟಾ, ಝುಮ್‌ಝುಮ್ ಕಾಲೋನಿ, ಸಿಟಿ ಸ್ಕೂಲ್, ಸಭಾ ಫಂಕ್ಷನ್‌ಹಾಲ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

# ಇಂದು ಪೌರಾಡಳಿತ ಸಚಿವ ರಹೀಂ ಖಾನ್ ಅವರ ಬೀದರ ಪ್ರವಾಸ

ಬೀದರ, ನವೆಂಬರ್ 04 (ಕರ್ನಾಟಕ ವಾರ್ತೆ) : ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ನವೆಂಬರ್.5 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅವರು ನ.5 ರಂದು ಬೆಳಿಗ್ಗೆ ಬೆಂಗಳೂರಿನಿಂದ ನಿರ್ಗಮಿಸಿ ಬೆಳಿಗ್ಗೆ 7.35ಕ್ಕೆ ಬೀದರಗೆ ಆಗಮಿಸಲಿದ್ದಾರೆ. ಬೆಳಿಗ್ಗೆ 9 ರಿಂದ 12.30 ಗಂಟೆಯವರೆಗೆ ಬೀದರ್ ಜಿಲ್ಲೆಯಲ್ಲಿ ನಿಗಧಿಪಡಿಸಿದ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 12.30ಕ್ಕೆ ಬೀದರ ಗುರುದ್ವಾರದಲ್ಲಿ ಹಮ್ಮಿಕೊಂಡಿರುವ ಗುರುನಾನಕ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ರಾತ್ರಿ 7 ಗಂಟೆಗೆ ಬೀದರನ ಮುಂತಾಜ್ ಪಂಕ್ಷನ್ ಹಾಲ್‌ದಲ್ಲಿ ಹಮ್ಮಿಕೊಂಡಿರುವ ಡಾ.ಅಬ್ದುಲ್ ಖದೀರ್ ಅಭಿನಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರದ ವಿವಿಧ ಸ್ಥಳಗಳಿಗೆ ಭೇಟಿ ನೀಡಿದ ಯು.ನಿಸಾರ ಅಹಮದ್

ಬೀದರ, ನವೆಂಬರ್.04 (ಕರ್ನಾಟಕ ವಾರ್ತೆ):– ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ ಅಹಮದ್ ಅವರು ಸೋಮವಾರ ಬೀದರ ನಗರದ ಟಿಪ್ಪುಸುಲ್ತಾನ ಕಾಲೋನಿಯ ಅಂಗನವಾಡಿ, ಪೊಲೀಸ್ ಕ್ವಾಟರ್ಸ ಬೀದರ ಹತ್ತಿರ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರ, ಕೆ.ಪಿ.ಎಸ್ ಬಾಲಕರ ಶಾಲೆ ರಾವು ತಾಲಿಂ ಬೀದರ ಹಾಗೂ ಇರಾನಿ ಕಾಲೋನಿಗೆ ಭೇಟಿ ನೀಡಿ ಜನರ ಸ್ಥಿತಿ–ಗತಿಗಳ ಬಗ್ಗೆ ಚರ್ಚಿಸಿದರು.

ಭೇಟಿ ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಜಿಲ್ಲೆಗಳಿಂದ ಆಗಮಿಸಿರುವ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ನಾಮ ನಿರ್ದೇಶಿತ ಸದಸ್ಯರುಗಳು, ಮಾಹಿತಿ ಕೇಂದ್ರಗಳ ಸಿಬ್ಬಂಗಳು ಹಾಗೂ ತಾಲ್ಲೂಕ ವಿಸ್ತರಣಾಧಿಕಾರಿಗಳೊಂದಿಗೆ ಸಭೆ ನಡೆಸಿ ಪ್ರತಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಳ ಹಾಗೂ ಶೇ.100% ಫಲಿತಾಂಶ ಸಾಧಿಸಲು ಸಲಹೆ ಸೂಚನೆಗಳನ್ನು ನೀಡಿದರು.

ತಾಲ್ಲೂಕ ಮಾಹಿತಿ ಕೇಂದ್ರದ ಸಿಬ್ಬಂದಿಗಳಿಗೆ ಆಯೋಗದಿಂದ ಸೂಚಿಸಲಾಗಿರುವ ಎಲ್ಲಾ ಅಂಶಗಳ ಮಾಹಿತಿಯನ್ನು ಕ್ರೂಢೀಕರಿಸಿ ಕೈಪಿಡಿಯನ್ನು ತಯಾರಿಸಲು ಯು.ನಿಸಾರ ಅಹಮದ್ ಅವರು ಸೂಚಿಸಿದರು. ಬಿದರಿ ಕಲೆ ತಯಾರಿಕೆ ಕೇಂದ್ರಗಳಿಗೆ ಭೇಟಿ ಮಾಡಿ ಕಾರ್ಮಿಕರ ಸ್ಥಿತಿಗತಿ ಹಾಗೂ ದೈನಂದಿನ ಜೀವನದ ಕುರಿತು ಮಾಹಿತಿ ಪಡೆದರು.

# ಕನ್ನಡ ರಾಜ್ಯೋತ್ಸವ: ಸ್ತಬ್ಧ ಚಿತ್ರ ವಿಭಾಗದಲ್ಲಿ ಬೀದರ ತೋಟಗಾರಿಕೆ ಇಲಾಖೆ ಪ್ರಥಮ ಸ್ಥಾನ




ಮಲ್ಲಮ್ಮ ನುಡಿ ವಾರ್ತೆ

ಬೀದರ, ನವೆಂಬರ್.04 (ಕರ್ನಾಟಕ ವಾರ್ತೆ):– ನ.1ರ ಕನ್ನಡ ರಾಜ್ಯೋತ್ಸವ ನಿಮಿತ್ಯ ಬೀದರ ನೆಹರು ಕ್ರೀಡಾಂಗಣದಲ್ಲಿ ತೋಟಗಾರಿಕೆ ಇಲಾಖೆಯಿಂದ ಹಣ್ಣು, ತರಕಾರಿ ಮತ್ತು ಹೂವುಗಳಿಂದ ಅಲಂಕೃತಗೊಂಡ ಸರ್ಕಾರದ ವಿವಿಧ ಯೋಜನೆಗಳ ಸ್ತಬ್ಧ ಚಿತ್ರವನ್ನು ಪ್ರದರ್ಶಿಸುವ ಮೂಲಕ ಪ್ರಥಮ ಸ್ಥಾನ ಪಡೆದುಕೊಂಡಿದೆ. ಇದಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಪ್ರಮಾಣ ಪತ್ರವನ್ನು ನೀಡಿದರು.

ಸ್ತಬ್ಧ ಚಿತ್ರದಲ್ಲಿ ಪ್ರದರ್ಶಿಸಲಾದ ವಿವಿಧ ಯೋಜನೆಗಳ ವಿವರ: ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆ, ಹನಿ ನೀರಾವರಿ ಯೋಜನೆ, ರಾಷ್ಟ್ರೀಯ ತೋಟಗಾರಿಕೆ ಮಿಷನ್, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಮತ್ತು ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಯೋಜನೆಗಳ ಮಾಹಿತಿ ಕಠಿಣ ಹವಾಮಾನ ಪರಿಸ್ಥಿತಿಗಳಲ್ಲಿ ಮತ್ತು ನಿಯಂತ್ರಿತ ಪರಿಸರದೊಂದಿಗೆ ಕೀಟರೋಗಗಳಿಂದ ರಕ್ಷಿಸಿ ಸೂಕ್ತವಾದ ಆರೋಗ್ಯವಾದ ಬೆಳೆಗಳನ್ನು ಬೆಳೆಸುವ ವಿಧಾನಗಳ ಮಾದರಿ. ಹಣ್ಣಿನ ಬೆಳೆಗಳ ಪ್ರಾತ್ಯಕ್ಷಿತೆ ತಾಕುಗಳು, ಕೃಷಿಹೊಂಡ, ಎರೆಹುಳು ಗೊಬ್ಬರ ಘಟಕ ಮತ್ತು ವಿವಿಧ ತಳಿಗಳ ಸಸ್ಯೋತ್ಪಾದನೆ ಮಾಹಿತಿ. ಅಂಗಾಂಶ ಕೃಷಿಯಿಂದ ಬಾಳೆ ಸಸಿಗಳ ತಯಾರಿಕೆ ಜೈವಿಕ ಗೊಬ್ಬರಗಳ ತಯಾರಿಕೆ, ಎರೆಹುಳು ಗೊಬ್ಬರ ತಯಾರಿಕೆ, ಅಣಬೆ ತಯಾರಿಕೆ ಹಾಗೂ ಮಣ್ಣು ಮತ್ತು ನೀರು ಪರೀಕ್ಷೆ ಇತ್ಯಾದಿಗಳನ್ನು ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪ್ರದರ್ಶಿಸಲಾಯಿತು.

# ಬಾಳ ಉನ್ನತಿ ಗೆ ಮನಸ್ಸು ಮೂಲ : ಶ್ರೀ ರಂಭಾಪುರಿ ಜಗದ್ಗುರುಗಳು

ಮಲ್ಲಮ್ಮನುಡಿ ವಾರ್ತೆ ನವಂಬರ್–5 ಸುಖ ಬಯಸುವುದು ಮನುಷ್ಯನ ಸಹಜ ಗುಣ. ದುರ್ನಡತೆಯಿಂದಾಗಿ ಮನುಷ್ಯನ ಬದುಕು ಛಿದ್ರಗೊಂಡಿದೆ. ಬಾಳಿನ ಉನ್ನತಿ ಅವನತಿಗಳಿಗೆ ಮನುಷ್ಯನ ಮನಸ್ಸೇ ಕಾರಣವೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಹುಣ್ಣಿಮೆ ಕಾರ್ತಿಕ ದೀಪೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಜೀವನ ಜೋಕಾಲಿ ಸುಖದಿಂದ ದು:ಖದತ್ತ ದು:ಖದಿಂದ ಸುಖದತ್ತ ಸದಾ ತೂಗುತ್ತಿರುತ್ತದೆ. ಪ್ರಪಂಚದಲ್ಲಿ ಭಯ ಭೀತಿ ಉದ್ವೇಗ ಚಿಂತೆ ಒತ್ತಡ ಎಲ್ಲರಿಗೂ ಇರುತ್ತದೆ. ಮನುಷ್ಯ ತನ್ನ ಬಾಳಿನಲ್ಲಿ ನೀತಿ ಸಂಹಿತೆ ಸದಾಚಾರ ಸಂಪನ್ನತೆ ಧ್ಯಾನ ಜ್ಞಾನ ಇವುಗಳನ್ನು ಅಳವಡಿಸಿಕೊಂಡು ಬಾಳಿದರೆ ಜೀವನದಲ್ಲಿ ಸುಖ ಶಾಂತಿ ನೆಮ್ಮದಿ ಪ್ರಾಪ್ತವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ.

# ಸಿದ್ಧರಾಮೇಶ್ವರ ಕಾಲೋನಿಗೆ ಶಾಸಕಿ ಕನೀಜ್ ಫಾತಿಮಾ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.5:ಕರ್ನಾಟಕರೇಷ್ಮೆ ಕೈಗಾರಿಕೆ ನಿಗಮದ ಅಧ್ಯಕ್ಷೆ ಮತ್ತು ಉತ್ತರಕ್ಷೇತ್ರದಶಾಸಕಿಕನೀಜ್ಫಾತಿಮಾ ಅವರುನಗರದವಾರ್ಡ್‌ಸಂಖ್ಯೆ 8 ರಸಿದ್ಧರಾಮೇಶ್ವರಕಾಲೋನಿಗೆಭೇಟಿ ನೀಡಿ,ನಿವಾಸಿಗಳೊಂದಿಗೆಸಂವಾದ ನಡೆಸಿನಾಗರಿಕಸೌಲಭ್ಯಗಳುಮತ್ತು ಮೂಲಸೌಕರ್ಯಕ್ಕೆಸಂಬಂಧಿಸಿದಅವರ ಕುಂದುಕೊರತೆಗಳನ್ನು ಆಲಿಸಿದರು.

ಭೇಟಿಯಸಮಯದಲ್ಲಿ,ಕನೀಜ್ ಫಾತಿಮಾಅವರುರಸ್ತೆಗಳು,ಒಳಚರಂಡಿ, ನೀರು ಸರಬರಾಜು ಮತ್ತು ಇತರ ಮೂಲಭೂತಸೌಲಭ್ಯಗಳಿಗೆಸಂಬಂಧಿಸಿದಸಮಸ್ಯೆಗಳನ್ನು ಒಳಗೊಂಡಂತೆ ನಿವಾಸಿಗಳುಎತ್ತಿರುವಸಮಸ್ಯೆಗಳನ್ನು ತಾಳ್ಮೆಯಿಂದ ಆಲಿಸಿದರು. ಅವರ ಕಾಳಜಿಗಳನ್ನು ಪರಿಹರಿಸಲು ಅಗತ್ಯ ಕ್ರಮಗಳನ್ನು ಆದಷ್ಟು ಬೇಗ ತೆಗೆದುಕೊಳ್ಳಲಾಗುವುದು ಎಂದು ಅವರುಸಭೆಗೆಭರವಸೆನೀಡಿದರು.

ಪ್ರದೇಶವನ್ನು ಪರಿಶೀಲಿಸಲುಮತ್ತು ದೂರುಗಳಪರಿಹಾರಕ್ಕಾಗಿತಕ್ಷಣದ ಕ್ರಮಗಳನ್ನು ಪ್ರಾರಂಭಿಸಲು, ಬಾಕಿ ಇರುವ ಅಭಿವೃದ್ಧಿ ಕಾರ್ಯಗಳು ವಿಳಂಬವಿಲ್ಲದೆಪೂರ್ಣಗೊಳ್ಳುವಂತೆ ನೋಡಿಕೊಳ್ಳಲುಅವರುಸಂಬಂಧಪಟ್ಟ ಅಧಿಕಾರಿಗಳಿಗೆನಿರ್ದೇಶನನೀಡಿದರು.

ಕೆಪಿಸಿಸಿಸದಸ್ಯ ಜನಾಬ್ ಫರಾಜ್ ಉಲ್ ಇಸ್ಲಾಂಮತ್ತು ಶಹಬಜಾರ್ ಬ್ಲಾಕ್ ಅಧ್ಯಕ್ಷ ಶರಣ್ ಕುಮಾರ್ ಗೋಡಿಪರಿಶೀಲನೆಯಸಮಯದಲ್ಲಿ ಶಾಸಕರೊಂದಿಗೆ ಇದ್ದರು.

# ಅಂತರ್ ಕಾಲೇಜು ಮಹಿಳಾ ಅಥ್ಲೇಟಿಕ್ ಮೀಟ್ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ನಗರದಗುಲಬರ್ಗಾವಿಶ್ವವಿದ್ಯಾಲಯದಕ್ರೀಡಾಂಗಣದಲ್ಲಿಕು. ಶರಣೇಶ್ವರಿ ರೇಷ್ಮಿ ಮಹಿಳಾ ಶಿಕ್ಷಣ ಮಹಾವಿದ್ಯಾಲಯ ಹಾಗೂ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ, ವಿಜಯಪುರ ಇವರ ಸಹಯೋಗದಲ್ಲಿ ಮೂರು ದಿನಗಳ ಕಾಲ ಆಯೋಜಿಸಿದ್ದ 19ನೇ ಅಂತರ್ ಮಹಿಳಾ ಮಹಾವಿದ್ಯಾಲಯಗಳ ಅಥ್ಲೇಟಿಕ್ ಮೀಟ್‌ಅನ್ನು ಅಂತರಾಷ್ಟ್ರೀಯ ಕ್ರೀಡಾಪಟು ಶೃದಿಯಾ ರಾಮನಗೌಡ ಅವರು ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಗುವಿವಿ ಕುಲಪತಿ ಪ್ರೊ.ಶಶಿಕಾಂತ ಎಸ್.ಉಡಿಕೇರಿ, ಕುಲಸಚಿವರಾದಪ್ರೊ.ರಮೇಶಲಂಡನ್‌ಕರ್, ರೇಷ್ಮಿ ಎಜುಕೇಷನಲ್ ಆಂಡ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷೆ ಡಾ.ಭಾರತಿ ಎನ್.ರೇಷ್ಮಿ, ಮೌಲ್ಯಮಾಪನ ಕುಲಸಚಿವರಾದಪ್ರೊ.ಎನ್.ಜಿ.ಕಣ್ಣೂರ,ಸದಸ್ಯರಾದ ಶ್ರೀಪಾದಚೌಡಾಪೂರಕರ್, ಅತೀಕ್ ರೆಹಮಾನ್, ರಾಘವೇಂದ್ರ ಎಂ.ಭೈರಪ್ಪ, ದೈಹಿಕ ಶಿಕ್ಷಣ ನಿರ್ದೇಶಕರ ಸಂಘದಅಧ್ಯಕ್ಷಶಿವಯೋಗಿಎಲಿ, ಪ್ರೊ.ಹನುಮಂತಯ್ಯ ಪೂಜಾರಿ, ಕಾಲೇಜಿನ ರೇಷ್ಮಿ ಎಜುಕೇಷನಲ್ ಆಂಡ್ ಚಾರಿಟೇಬಲ್ ಟ್ರಸ್ಟ್‌ನ ಕಾರ್ಯದರ್ಶಿ ಶರದ್ ಎನ್.ರೇಷ್ಮಿ, ಅಥಿತಿ ಸಹಾಯಕ, ದೈಹಿಕ ಶಿಕ್ಷಣ ನಿರ್ದೇಶಕ ಡಾ.ವಿಶ್ವನಾಥ ನಡಗಟ್ಟಿ, ರೇಷ್ಮಿ ಎಜುಕೇಷನಲ್ ಆಂಡ್ ಚಾರಿಟೇಬಲ್ ಟ್ರಸ್ಟ್‌ನ ಚೀಫ್ ಟ್ರಸ್ಟಿ ಶಿಶಿರ ಎನ್.ರೇಷ್ಮಿ, ಕಾಲೇಜಿನ ಪ್ರಾಂಶುಪಾಲೆ ಡಾ.ಗೀತಾ ಆರ್., ಸಂಯೋಜಕ ಸಂಗಣ್ಣ ಕೆ. ಸೇರಿದಂತೆ ಇತರರಿದ್ದರು.

# ನಿರ್ಮಲಾಸೀತಾರಾಮನ್ ಅವರನ್ನು ಭೇಟಿಮಾಡಿದ ವಿ.ಸೋಮಣ್ಣ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ನ05:ನವದೆಹಲಿಯಲ್ಲಿಂದು ಕೇಂದ್ರ ವಿತ್ತ ಸಚಿವರಾದ ಶ್ರೀಮತಿ ನಿರ್ಮಲಾಸೀತಾರಾಮನ್ ಅವರನ್ನು ಕೇಂದ್ರ ಜಲಶಕ್ತಿ ಹಾಗೂರೈಲ್ವೆರಾಜ್ಯ ಖಾತೆ ಸಚಿವರಾದ ವಿ.ಸೋಮಣ್ಣ ಅವರು ಸೌಹಾರ್ಧಯುತವಾಗಿ ಭೇಟಿ ಮಾಡಿದರು.



ಇದೇವೇಳೆಜಿಎಸ್‌ಟಿಬೆಲೆಇಳಿಕೆಯ ಮಹತ್ವದ ನಿರ್ಧಾರ ಕೈಗೊಂಡು ದೇಶದಜನತೆಯಆಶೋತ್ತರಗಳಿಗೆ ಸ್ಪಂದಿಸಿದ್ದಕ್ಕೆಅಭಿನಂದನೆಸಲ್ಲಿಸಿದರು.

ಕಳೆದ ಸೆಪ್ಟೆಂಬರ್ 22 ರಿಂದಲೇ ಜಿಎಸ್‌ಟಿಬೆಲೆಇಳಿಕೆಯನಿರ್ಧಾರ ಜಾರಿಗೆ ಬಂದಿದ್ದು, ಶೇ.90 ರಷ್ಟು ಸಾಮಗ್ರಿಗಳಬೆಲೆಇಳಿಕೆಯಾಗಿದೆ. ಇದು ದೇಶದ ಬಡವರು ಹಾಗೂ ಮಧ್ಯಮವರ್ಗದವರಜೀವನಮಟ್ಟದ ಹೆಚ್ಚಳದ ಜೊತೆಗೆ ಉಳಿತಾಯಕ್ಕೂ ಕಾರಣವಾಗಿದೆ. ಅಲ್ಲದೆ ದೇಶದ ಆರ್ಥಿಕ ಪ್ರಗತಿಗೂ ಶಕ್ತಿ ನೀಡಿದೆ.

ತುಮಕೂರಿನವಿವಿಧಭಾಗಗಳಿಗೆ ಭೇಟಿನೀಡಿದಸಂದರ್ಭದಲ್ಲಿಯೂ ಜನತೆಜಿಎಸ್‌ಟಿಬೆಲೆಇಳಿಕೆನಿರ್ಧಾರದ ಬಗ್ಗೆ ತಮ್ಮ ಸಂತೋಷವನ್ನು ಹಂಚಿಕೊಂಡಿದ್ದರುಎಂದುತಿಳಿಸಿದರು.

# ಆಯೋಗದಕೆಲಸಗಳಿಗೆಸಹಕಾರ: ಲಕ್ಷ್ಮಿ ಹೆಬ್ಬಾಳಕರ್



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ,ಕರ್ನಾಟಕರಾಜ್ಯ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾಗಿ ಅಧಿಕಾರವಹಿಸಿಕೊಂಡಿರುವಶಶಿಧರ ಕೋಸಂಬೆಅವರುಮಹಿಳಾಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಅವರನ್ನು ಬಿದ್ರಿ ಕಲೆಯ ಬಸವಣ್ಣನವರ ಫೋಟೋ ನೀಡಿಸನ್ಮಾನಿಸಿದರು. ಬೆಂಗಳೂರಿನಲ್ಲಿ ಬುಧವಾರ ಸಚಿವೆ ಹೆಬ್ಬಾಳಕರ್ ಅವರನ್ನು ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಭೇಟಿಯಾಗಿ ಕೃತಜ್ಞತೆ ಸಲ್ಲಿಸಿ, ಸಾಕಷ್ಟು ವಿಶ್ವಾಸ ಮತ್ತು ನಂಬಿಕೆ ಇಟ್ಟು ನನಗೆ ಜವಾಬ್ದಾರಿ ವಹಿಸಿದ್ದೀರಿ ತಾವು ವಹಿಸಿರುವ ಜವಾಬ್ದಾರಿಯನ್ನು ಸಮರ್ಥವಾಗಿನಿರ್ವಹಿಸಿಆಹುದ್ದೆಗೆ ಗೌರವ ತಂದು ಕೊಡುವ ಕೆಲಸ ಮಾಡುತ್ತೇನೆ. ಮಕ್ಕಳ ಕ್ಷೇತ್ರದಲ್ಲಿ ಸಾಕಷ್ಟು ನ್ಯೂನತೆ ಮತ್ತು ಕುಂದು ಕೊರತೆಗಳು ಇದ್ದು ಅವುಗಳನ್ನು ಬಗೆಹರಿಸಲುಸಹಕಾರನೀಡಬೇಕು ಎಂದು ಮನವಿ ಮಾಡಿದರು.

ಸನ್ಮಾನ ಸ್ವೀಕರಿಸಿದ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಮಾತನಾಡಿ, ರಾಜ್ಯ ಮಕ್ಕಳಹಕ್ಕುಗಳರಕ್ಷಣಾಆಯೋಗದ ಎಲ್ಲಕೆಲಸಕಾರ್ಯಗಳಿಗೆಸಂಪೂರ್ಣ ಸಹಕಾರನೀಡುತ್ತೇನೆ.ತಾವುಎಲ್ಲರನ್ನು ವಿಶ್ವಾಸಕ್ಕೆ ಪಡೆದು ಉತ್ತಮ ಕೆಲಸ ಮಾಡಿಆಯೋಗದಗೌರವ,ಘನತೆ ಹೆಚ್ಚಿಸಬೇಕು ಎಂದು ತಿಳಿಸಿದರು.

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ಸಂಸ್ಕಾರ ಅಗತ್ಯ : ಸಂಸದ ಸಾಗರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮಕ್ಕಳಿಗೆ ಗುಣಮಟ್ಟದ ಶಿಕ್ಷಣಮತ್ತುಸಂಸ್ಕಾರನೀಡುವುದು ಪೋಷಕರು ಹಾಗೂ ಶಿಕ್ಷಕರ ಕರ್ತವ್ಯವಾಗಿದೆ ಎಂದು ಸಂಸದ ಸಾಗರಖಂಡ್ರೆ ಹೇಳಿದರು. ತಾಲೂಕಿನ ನೀಲಮ್ಮ ವೀರಬಸಪ್ಪ ಪಾಟೀಲ್ ಕಲ್ಯಾಣಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಭಾಲ್ಕಿ ವತಿಯಿಂದಬುಧವಾರಆಯೋಜಿಸಿದ್ದ ಕರ್ನಾಟಕರಾಜ್ಯೋತ್ಸವ ಹಾಗೂ ವಿ.ಕೆ.ಪಾಟೀಲ್ ಜನ್ಮದಿನೋತ್ಸವ ಮತ್ತು ನೀಲಮ್ಮ ವಿ.ಕೆ.ಪಾಟೀಲ್ ಶಾಲಾವಾರ್ಷಿಕೋತ್ಸವಸಮಾರಂಭ ಉದ್ಘಾಟಿಸಿಅವರುಮಾತನಾಡಿದರು.

ಮಕ್ಕಳಲ್ಲಿ ಶಿಕ್ಷಣದಜತೆಗೆಉತ್ತಮ ಸಂಸ್ಕಾರ,ಸಂಸ್ಕೃತಿಮತ್ತುಮಾನವೀಯ ಮೌಲ್ಯಗಳನ್ನು ಕಲಿಸುವುದುಅವಶ್ಯಕ. ಅಂತಹ ಅತ್ಯುತ್ತಮಕೆಲಸನಾಡೋಜ ಡಾ.ಬಸವಲಿಂಗಪಟ್ಟದ್ದೇವರುತೆರೆದ ವಿದ್ಯಾಸಂಸ್ಥೆಯಲ್ಲಿನಡೆಯುತ್ತಿರುವುದು ಸಂತಸತರಿಸಿದೆಎಂದರು. ಪೂಜ್ಯರ ವಿದ್ಯಾಸಂಸ್ಥೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ, ಸಂಸ್ಕಾರ ಪಡೆದು ಉತ್ತಮ ಸಾಧನೆ ತೋರುತ್ತಿದ್ದಾರೆ ಎಂದುಮೆಚ್ಚುಗೆವ್ಯಕ್ತಪಡಿಸಿದರು. ವಿದ್ಯಾರ್ಥಿಗಳು ವಿಜ್ಞಾನ ವಸ್ತು ಪ್ರದರ್ಶನದಲ್ಲಿ ವಿವಿಧಮಾದರಿಗಳನ್ನು ಪ್ರದರ್ಶಿಸಿ ತಮ್ಮ ಜ್ಞಾನವನ್ನು ಇನ್ನಷ್ಟು ವಿಸ್ತರಿಸಿಕೊಳ್ಳುತ್ತಿರುವುದು ಖುಷಿ ತಂದು ಕೊಟ್ಟಿದೆ ಎಂದರು. ಗಡಿಭಾಗದಲ್ಲಿ ಕನ್ನಡ ಭಾಷೆಗೆ ಪ್ರಾತಿನಿಧ್ಯ ನೀಡುವುದು ಅತ್ಯಂತ ಅವಶ್ಯಕವಾಗಿದೆ. ಮಹಾರಾಷ್ಟ್ರ ಮತ್ತು ತೆಲಂಗಾಣ ರಾಜ್ಯಗಳಿಗೆ




ಹೊಂದಿಕೊಂಡಿರುವ ಗಡಿಭಾಗದ ಗ್ರಾಮಗಳಲ್ಲಿ ಅನ್ಯ ಭಾಷೆಗಳಪ್ರಭಾವ ಹೆಚ್ಚಿದೆ. ಇಂತಹಕಡೆಗಳಲ್ಲಿಕನ್ನಡದ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಆಗಬೇಕಿದೆ ಎಂದು ತಿಳಿಸಿದರು.

ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ ಮಾತನಾಡಿದರು. ಆಡಳಿತಾಧಿಕಾರಿ ಮೋಹನ ರೆಡ್ಡಿ ಪ್ರಾಸ್ತಾವಿಕವಾಗಿಮಾತನಾಡಿದರು. ವಿ.ಕೆ.ಪಾಟೀಲ್

ಶಿಕ್ಷಣ ಸಮುಚ್ಚಯದ ಅಧ್ಯಕ್ಷೆ ನೀಲಮ್ಮ ವಿಕೆಪಾಟೀಲ್ ಅಧ್ಯಕ್ಷತೆ ವಹಿಸಿದ್ದರು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರುಸಾನ್ನಿಧ್ಯ ವಹಿಸಿದ್ದರು.

ಈಸಂದರ್ಭದಲ್ಲಿ ವಿ.ಕೆ.ಪಾಟೀಲ್ ಶಿಕ್ಷಣಸಮುಚ್ಚಯದನಿರ್ದೇಶಕರಾದ ವೀರೇಂದ್ರ ಪಾಟೀಲ್, ಶಾಂತಕುಮಾರ ರಾಗಾ, ಹಿರಿಯ ಮುಖಂಡ ಬಸವರಾಜ ಚನ್ನಮ್ಮಲ್, ಸಿಆರ್‌ಪಿ ಚನ್ನಬಸಪ್ಪ ತಳವಾಡೆ ಸೇರಿದಂತೆ ಹಲವರು ಇದ್ದರು. ಎಂಜಿಎಸ್ ಎಸ್‌ಕೆ ನಿರ್ದೇಶಕಮಲ್ಲಿಕಾರ್ಜುನ ಪಾಟೀಲ್ ಮುಗನೂರಸ್ವಾಗತಿಸಿದರು. ಶಿವಶಂಕರಹಡಪದನಿರೂಪಿಸಿದರು. ಮುಖ್ಯಗುರುಗುರುರಾಜವಿ.ಎಚ್.

# ನ.5 ರಿಂದ ಎಂಟು ವಾರ ತೊಗರಿ ಆರೋಗ್ಯ ಸಮೀಕ್ಷೆ ಕಾರ್ಯ: ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.05:2025-26ನೇಸಾಲಿನಮುಂಗಾರು ಹಂಗಾಮಿನಲ್ಲಿಬಿತ್ತನೆಯಾದತೊಗರಿಆರೋಗ್ಯಸಮೀಕ್ಷೆ/ ಕ್ಷಿಪ್ರ ಸಂಚಾರಿಸಮೀಕ್ಷೆ(ಚಿಟಜಿಳ್ಕಟಡಿಜ್ಞಿಜಖ್ಣಡಳಿಢ) ಕಾರ್ಯವನ್ನು ನವೆಂಬರ್ 5 ರಿಂದ ಎಂಟುವಾರದವರೆಗೆ ಸರ್ವೇಕ್ಷಣಾ ಕಾರ್ಯ ಜರುಗಿಸಲು ನಿರ್ಧರಿಸಲಾಗಿದೆ ಎಂದು ಕಲಬುರಗಿ ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಅವರು ತಿಳಿಸಿದ್ದಾರೆ.

ಇಂದುಕಲಬುರಗಿಕೃಷಿಜಂಟಿನಿರ್ದೇಶಕರಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದಸಭೆಯಲ್ಲಿ ಅವರು ಮಾತನಾಡಿ, ತೊಗರಿ, ಹತ್ತಿ, ಕಬ್ಬು ಹಾಗೂ ಹಿಂಗಾರು ಹಂಗಾಮಿನಲ್ಲಿ ಬಿತ್ತನೆಯಾದ ಕಡಲೆ, ಜೋಳ ಹಾಗೂ ಇತರೆ ವಿವಿಧ ಬೆಳೆಗಳಲ್ಲಿ ಬರಬಹುದಾದಕೀಟ, ರೋಗಹಾಗೂ ಇತರ ಪೀಡೆಗಳ ಜಂಟಿ ಸರ್ವೇಕ್ಷಣೆಗಾಗಿ ಕೃಷಿ ಇಲಾಖೆಯ ಅಧಿಕಾರಿಗಳು ಹಾಗೂ ಕೃಷಿ ವಿಶ್ವವಿದ್ಯಾಲಯದ ಕೃಷಿ ವಿಜ್ಞಾನಿಗಳ ಒಳಗೊಂಡ 7 ತಂಡಗಳನ್ನು ರಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಪ್ರತಿಬುಧುವಾರದಂದು 7 ತಂಡಗಳಲ್ಲಿಯ ಅಧಿಕಾರಿಗಳು ಜಿಲ್ಲೆಯ ಎಲ್ಲಾ 11 ತಾಲೂಕುಗಳ ವಿವಿಧಗ್ರಾಮಗಳಲ್ಲಿನ ಕೃಷಿ ಕ್ಷೇತ್ರಗಳಿಗೆ ಭೇಟಿ ನೀಡಿ, ಕೀಟ ಹಾಗೂ ರೋಗ ಸಮೀಕ್ಷೆ ಮಾಡಿ ತೆಗೆದುಕೊಳ್ಳಬಹುದಾದ ನಿರ್ವಹಣಾ ಕ್ರಮಗಳ ಬಗ್ಗೆ ರೈತರಿಗೆ ಮಾಹಿತಿ ನೀಡಲಿದ್ದಾರೆ.

ಪ್ರತಿ ಗುರುವಾರದಂದು ಎಂಟು ವಾರದವರೆಗೆ ರೇಡಿಯೋ (ಅ್ಣಜ್ಞಿಳಜಿಚ್ಕಚಿಳಜಿಟ) ಮುಖಾಂತರ ಕೃಷಿ ಇಲಾಖೆಯ ಅಧಿಕಾರಿಗಳು ಹಾಗೂ ಕೃಷಿ ವಿಜ್ಞಾನಿಗಳು ರೈತರೊಂದಿಗೆ ವಿವಿಧ ಬೆಳೆಗಳಿಗೆ ಬರಬಹುದಾದಕೀಟ, ರೋಗ ಹಾಗೂ ಇತರ ವಿಷಯಗಳ ಕುರಿತು ಸಂವಾದ ನಡೆಸಲಿದ್ದಾರೆ.

ಸಭೆಯಲ್ಲಿ ಸಹಾಯಕಸಂಶೋಧನಾನಿರ್ದೇಶಕರಾದ ಡಾ|| ಬಿ.ಎಂ. ದೊಡ್ಡಮನಿ, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ|| ರಾಜು ತೇಗ್ಗೆಳ್ಳಿ, ಕಲಬುರಗಿ ಮತ್ತು ಸೇಡಂ ಉಪ ಕೃಷಿ ನಿರ್ದೇಶಕರು, ಎಲ್ಲಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರು ಹಾಗೂ ಕೃಷಿ ವಿಜ್ಞಾನಿಗಳು ಭಾಗವಹಿಸಿದ್ದರು.

# ಪುರಸಭೆ ಅಧ್ಯಕ್ಷ ಫಿರ್ದೋಸ್ ಅನ್ಸಾರಿ ಸದಸ್ಯತ್ವ ರದ್ದು

ಮಲ್ಲಮ್ಮ ನುಡಿ ವಾರ್ತೆ



ಆಳಂದ: ಪುರಸಭೆಯ ಅಧ್ಯಕ್ಷ ಫಿರ್ದೋಸ್‌ಅನ್ಸಾರಿಅವರಸದಸ್ಯತ್ವವನ್ನು ರದ್ದುಗೊಳಿಸಿಕಲಬುರಗಿಜಿಲ್ಲಾಧಿಕಾರಿ ಫೌಜಿಯಾತರನ್ನುಮ್ ಅವರುಆದೇಶ ಹೊರಡಿಸಿದ್ದಾರೆ. ಕಳೆದಒಂದುವರ್ಷದಿಂದ ಅಧ್ಯಕ್ಷರಾಗಿಆಡಳಿತನಡೆಸುತ್ತಿದ್ದ ಅವರ ಸದಸ್ಯತ್ವ ರದ್ದುಗೊಳಿಸುವ ಮೂಲಕ ಅವರಆಡಳಿತಕ್ಕೆಅಂತ್ಯ ಹಾಡಲಾಗಿದೆ.

ಜಿಲ್ಲಾಧಿಕಾರಿಅವರಆದೇಶದಪ್ರಕಾರ, ಫಿರ್ದೋಸ್ ಅನ್ಸಾರಿ ಅವರು ಪುರಸಭೆ ಸಭೆಗಳಿಗೆ ಸತತವಾಗಿ ಗೈರು ಹಾಜರಾಗಿದ್ದು, ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಪ್ರಕರಣ 16(2)(ಸಿ)ಯನ್ನು ಉಲ್ಲಂಘಿಸಿರುವುದು ಕಂಡುಬಂದಿದೆ. ಇದರಿಂದಾಗಿ ಅವರಸದಸ್ಯಸ್ಥಾನವುಸಾಮಾನ್ಯ ಅನರ್ಹತೆಯಿಂದ ಖಾಲಿಯಾಗಿರುತ್ತದೆ ಎಂದು ಅಕ್ಟೋಬರ್ 31, 2025ರಂದು ಹೊರಡಿಸಿರುವ ಆದೇಶದಲ್ಲಿ ತಿಳಿಸಲಾಗಿದೆ.

ಆಳಂದಪುರಸಭೆಯಲ್ಲಿಮೊದಲಅವಧಿಯಲ್ಲಿಸದಸ್ಯರಾಗಿದ್ದಸಂದರ್ಭದಲ್ಲಿ ಅವರವಿರುದ್ಧಸಲ್ಲಿಕೆಯಾಗಿದ್ದದೂರಿನಅನ್ವಯಈಕ್ರಮಕೈಗೊಳ್ಳಲಾಗಿದೆ. ಸದ್ಯ ಎರಡನೇ ಅವಧಿಯಲ್ಲಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಅವರ ಸದಸ್ಯತ್ವ ರದ್ದುಗೊಳಿಸುವ ನಿರ್ಧಾರವು ಸ್ಥಳೀಯ ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದೆ. ಹಿಂದಿನ ದೂರಿನ ವಿಚಾರಣೆಯನ್ನು ಅಂತಿಮಗೊಳಿಸಿದ ಜಿಲ್ಲಾಧಿಕಾರಿಗಳು, ಸತತ ಗೈರು ಹಾಜರಿ ನಿಯಮ ಉಲ್ಲಂಘನೆಯನ್ನು ಆಧರಿಸಿ ಈ ಆದೇಶ ಹೊರಡಿಸಿದ್ದಾರೆ.

# ಉಮೀದ ಪೋರ್ಟಲ್ ಡಾಟಾ ಅಪ್ಲೋಡಿಂಗ್ ಕಾರ್ಯ: ಕರ್ನಾಟಕ ರಾಜ್ಯ ವಕ್ ಅಧ್ಯಕ್ಷರಿಂದ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಕೆಬಿಎನ್ ವಿಶ್ವವಿದ್ಯಾಲಯದ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ವಿಭಾಗದ ಕಂಪ್ಯೂಟರ್ ಲ್ಯಾಬ್‌ನಲ್ಲಿ ಬುಧವಾರ ಆರಂಭವಾದ

ಒಇಇಆ ಕೇಂದ್ರ ಪೋರ್ಟಲ್ (ಏಕೀಕೃತ ವಕ್ಫ್ ನಿರ್ವಹಣೆ, ಸಬಲೀಕರಣ, ದಕ್ಷತೆ ಮತ್ತು ಅಭಿವೃದ್ಧಿ) ಮೂಲಕವಕ್ಫ್ ಆಸ್ತಿಗಳ ಡಿಜಿಟಲೀಕರಣಮತ್ತು ನಿರ್ವಹಣೆ ಕಾರ್ಯವನ್ನು ಕರ್ನಾಟಕರಾಜ್ಯ ವಕ್ಫ ಮಂಡಳಿಯಅಧ್ಯಕ್ಷರಾದಆಫೀಜ ಜನಾಬ ಸಯ್ಯದ ಮುಹಮ್ಮದ ಅಲಿಅಲಹುಸ್ನೇನಿಯವರುಭೇಟಿ ನೀಡಿ ವೀಕ್ಷಣೆ ಮಾಡಿ ಕಾರ್ಯದ ಪ್ರಗತಿಯನ್ನು ಪರಿಶೀಲಿಸಿದರು.

ಸುಮಾರು 45 ಕಂಪ್ಯೂಟರಗಳಲ್ಲಿ ಕೆಲಸ ವೇಗವಾಗಿ ಸಾಗಿದೆ ಎಂದು ಸಂತೋಷ ವ್ಯಕ್ತಪಡಿಸಿದರು. ಈ ಕಾರ್ಯದಲ್ಲಿ ಕೆಬಿಎನ ವಿವಿಯ ವಿದ್ಯಾರ್ಥಿ ಮತ್ತು ಉಪನ್ಯಾಸಕರು ತುಂಬಾ ಉತ್ಸಾಹ ದಿಂದ ಕೆಲಸ ಮಾಡುತ್ತಿದ್ದಾರೆ ಎಂದರು.

3 ಹಂತಗಳಲ್ಲಿ ಡಾಟಾ ಅಪ್ಲೋಡಿಂಗ ಕಾರ್ಯ ನಡೆಯಲಿದ್ದು, ಮೇಕರ ಹಂತ ಕೆಬಿಎನನಲ್ಲಿ ನಡೆದಿದೆ, ಈ ಹಂತ ಬೇಗ ಮುಗಿದರೆ ಇನ್ನುಳಿದ ವೆರಿಫಿಕೇಷನಮತ್ತು ಅನುಮೋದನೆ ಹಂತ ಮುಗಿಯುತ್ತವೆ ಎಂದರು.

ಕರ್ನಾಟಕರಾಜ್ಯದಲ್ಲಿ ಸುಮಾರು 3300 ವಖ್ಫ ಸಂಸ್ಥೆಗಳಿದ್ದು, 36000 ವಾಕ್ಫ ಅಸ್ತಿಗಳಿವೆ ಹಾಗೆಯೇ ಗುಲ್ಬರ್ಗಾ ಜಿಲ್ಲೆಯಲ್ಲಿ 4500 ವಕ್ಫ ಸಂಸ್ಥೆಗಳಿದ್ದು 6000 ಅಸ್ತಿಗಳಿವೆ. ಕರ್ನಾಟಕದ ಕೆಲವು ಭಾಗಗಳಲ್ಲಿ ಅಪ್ಲೋಡಿಂಗ ಕಾರ್ಯ ಮುಗಿದಿದೆ, ಮಿಕ್ಕಭಾಗಗಳಲ್ಲಿ ನಡೆದಿದೆ ಎಂದುಹೇಳಿದರು. ಕೆಲವು ರಾಜ್ಯಗಳು ಕೇಂದ್ರ ಸರಕಾರಕ್ಕೆ ಕೊನೆಯ ದಿನಾಂಕ ವಿಸ್ತರಿಸುವಂತೆ ಮನವಿ ಮಾಡಿಕೊಂಡಿವೆ, ಸಮಯ ವಿಸ್ತರಣೆಯಾದರೆ ಕೆಲಸ ಇನ್ನೂ ಅಚ್ಚುಕಟ್ಟಾಗಿ ನಡೆಯುತ್ತದೆ ಎಂದರು. ಯಾವುದೇ ಅಸ್ತಿಯ ದಾವೆಯಿದ್ದರೆ ನಾವು ಅದನ್ನು ಈ ಪೋರ್ಟಲನಲ್ಲಿ ದಾಖಲೆ ಮಾಡುತ್ತೇವೆ ಎಂದು ಎಂದು ಜಿಲ್ಲಾ ವಕ್ಫ ಅಧಿಕಾರಿ ಅಬ್ದುಲ್ ಮನ್ನಾನ ಹೇಳಿದರು. ಈ ಸಂದರ್ಭದಲ್ಲಿ ಕೆಬಿಎನ ವಿವಿಯ ನಿರ್ದೇಶಕರಾದ ಡಾ ಮುಸ್ತಫಾ ಅಲ ಹುಸ್ನೇನಿ, ಹಜರತ್ ಅಲಿ ನದಾಫ್-ಜಿಲ್ಲಾವ್ಯವಸ್ಥಾಪಕರು ಕೆಎಂಡಿಸಿಕಲಬುರಗಿ, ಪರ್ವೇಜ್ ಆಲಂ, ಲೆಕ್ಕಪರಿಶೋಧಕ, ಕೆಬಿಎನ ಉಪಕುಲಪತಿ ಪ್ರೊ ಅಲಿ ರಜಾ ಮೂಸ್ವಿ, ಸಮ ಉಪಕುಲಪತಿ ಪ್ರೊ ಅಶಫಾಕ್ ಅಹ್ಮದ, ಕುಲಸಚಿವಮಿರ ವಿಲಾಯತ ಅಲಿ, ಡಾ ಆಜಾಮ, ಇಂಜಿನಿಯರಿಗಡೀನ್ ಪ್ರೊ ಕಮಲ್, ಡಾ ನಿಖತ ಹಾಜರಿದ್ದರು

# ಕಂಠೀರವ ಸ್ಟುಡಿಯೋಸ್ ವಜ್ರ ಮಹೋತ್ಸವಕ್ಕೆ ಸರ್ಕಾರದಿಂದ 1 ಕೋಟಿ ರೂ. ಬಿಡುಗಡೆ- ಮಹಬೂಬ್ ಪಾಷಾ

## ಕನ್ನಡಚಿತ್ರಗಳಿಗೆ ಜಾಗತಿಕವೇದಿಕೆ ಕಲ್ಪಿಸಲು ಒಟಿಟಿ ಸ್ಥಾಪನೆ ಶೀಘ್ರ

ಮಲ್ಲಮ್ಮ ನುಡಿ ವಾರ್ತೆ

ಬೀದರ, ನವೆಂಬರ್.05 (ಕರ್ನಾಟಕ ವಾರ್ತೆ) : ಮುಂಬರುವ ಹೊಸ ವರ್ಷದಲ್ಲಿ ಕನ್ನಡಚಿತ್ರಗಳಿಗೆ ಜಾಗತಿಕ ವೇದಿಕೆ ಕಲ್ಪಿಸಲು ಶೀಘ್ರವೆ ಒಟಿಟಿ ಪ್ರಾರಂಭಿಸಲಾಗುತ್ತಿದೆಎಂದುಕಂಠೀರವ ಸ್ಟುಡಿಯೋಸ್ ನಿಯಮಿತ ಅಧ್ಯಕ್ಷ ಮಹಬೂಬ್ ಪಾಷಾ ಹೇಳಿದರು.

ಅವರು ಬುಧವಾರ ನಗರದ ಪತ್ರಿಕಾಭವನದಲ್ಲಿ ಆಯೋಜಿಲಾದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಅಮೆಜಾನ್, ಜೀ5, ಜಿಯೋ ಹಾಸ್ಟಾರ್, ನೆಫ್ಲಿಕ್ಸ್ ಸೇರಿದಂತೆ ಖಾಸಗಿ ಒಟಿಟಿಗಳಲ್ಲಿ ಕನ್ನಡದ ಆಯ್ದ ಚಲನಚಿತ್ರಗಳಿಗೆ ಮಾತ್ರ ವೇದಿಕೆದೊರಕುತ್ತಿದೆ. ಇದರಿಂದಾಗಿ ಸುಮಾರು 4 ಸಾವಿರಕ್ಕೂ ಅಧಿಕ ಕನ್ನಡ ಸಿನಿಮಾಗಳು, ವಿತರಕರು ಹಾಗೂ ಚಿತ್ರ ಮಂದಿರಗಳ ಕೊರತೆಯಿಂದ ಬಿಡುಗಡೆ ಭಾಗ್ಯವನ್ನೇ ಕಂಡಿಲ್ಲ. ಇದರಿಂದಾಗಿ ನಿರ್ಮಾಕರು, ಕಲಾವಿದರು, ತಂತ್ರಜ್ಞರು ಸಂಕಷ್ಟದಲ್ಲಿ ಇದ್ದಾರೆ. ಇಂಥ ಸಿನಿಮಾಗಳಿಗೆ ಕೇವಲ ನಮ್ಮ ರಾಜ್ಯ, ದೇಶಮಾತ್ರವಲ್ಲ, ಜಾಗತಿಕವಾಗಿ ವೇದಿಕೆ ಕಲ್ಪಿಸಿ ಕೊಡಲು ಸರ್ಕಾರದಿಂದಲೇ ಮುಂಬರುವ ಹೊಸ ವರ್ಷದಲ್ಲಿ ಒಟಿಟಿ ಪ್ರಾರಂಭಿಸಲಾಗುತ್ತಿದೆ. ಈ ಬಗ್ಗೆ ಚರ್ಚಿಸಿ ತೀರ್ಮಾನ



ಕೈಗೊಳ್ಳಲು ಉನ್ನತಮಟ್ಟದಸಮಿತಿ ಸಹ ರಚಿಸಲಾಗಿದೆ ಎಂದು ಅಧ್ಯಕ್ಷ ಮೆಹಬೂಬ್ ಪಾಷಾ ತಿಳಿಸಿದರು.

ಒಟಿಟಿ ಸ್ಥಾಪನೆಗೆ ಸಂಬಂಧ ಈಗಾಗಲೆ ಸರ್ಕಾರ ಬಜೆನಲ್ಲಿಯೇ ಘೋಷಿಸಿದೆ. ತಾಂತ್ರಿಕಸಿದ್ದತೆಗಳನ್ನು ಕೂಡಕೈಗೊಳ್ಳಲಾಗಿದೆ. ಹಲವುಬಾರಿ ಉನ್ನತಮಟ್ಟದಸಭೆಗಳುನಡೆದಿವೆ.

ಒಟಿಟಿಸ್ಥಾಪನೆಯಿಂದಕನ್ನಡಸಿನಿಮಾಗಳ ಜೊತೆಗೆಧಾರವಾಹಿ, ಜಾನಪದಕಲೆ ಹಾಗೂಸ್ಥಳೀಯಮತ್ತು ಬುಡಕಟ್ಟು ಸಂಸ್ಕೃತಿಗಳಿಗೂ ಸಹ ಜಾಗತಿಕ ಮಟ್ಟದಲ್ಲಿ ವೇದಿಕೆ ದೊರಕಲಿದೆ. ವಿವಿಧ ಡಿಜಿಟಲ್ ವೇದಿಕೆಗಳಲ್ಲಿ ಚಲನಚಿತ್ರಗಳ ವೀಕ್ಷಣೆಗೆ ಹೆಚ್ಚಿನ ದರ ವಿಧಿಸಿದರೆ, ರಾಜ್ಯ ಸರ್ಕಾರ ಪ್ರಾರಂಭಿಸಿವ ಒಟಿಟಿ ವೇದಿಕೆಯಲ್ಲಿ ಅಲ್ಪಮೊತ್ತಪಾವತಿಸಿ, ವಿಶ್ವದಎಲ್ಲೆಡೆ ಇರುವಕನ್ನಡಿಗರು ಚಂದಾದರರಾಗಿ ಕನ್ನಡ ಸಿನಿಮಾ ಹಾಗೂ ಜಾನಪದ ಕಲೆಗಳನ್ನು ವೀಕ್ಷಿಸಬಹುದಾಗಿದೆ. ಇದರಿಂದ ಸಂಕಷ್ಟದಲ್ಲಿರುವ ನಿರ್ಮಾಪಕರಿಗೆ, ನಿರ್ದೇಶಕರಿಗೆ, ನಟ ನಟಿಯರು, ಕಲಾವಿದರು ತಂತ್ರಜ್ಞರಿಗೆ ಇದರಿಂದ ಉಪಯುಕ್ತವಾಗಲಿದೆ. ಜೊತೆಗೆಹೊಸಪ್ರತಿಭೆಗಳಿಗೂಹೆಚ್ಚಿನ ಅವಕಾಶದೊರಕಲಿದೆ. ವೀಕ್ಷಣೆಯ ಆಧಾರದಲ್ಲಿ ನಿರ್ಮಾಪಕರೊಂದಿಗೆ ಲಾಭಾಂಶವನ್ನು ಹಂಚಿಕೊಳ್ಳಲಾಗುವುದು ಎಂದು ಅಧ್ಯಕ್ಷ ಮೆಹಬೂಬ್ ಪಾಷಾ ಅವರು ಸ್ಪಷ್ಟಪಡಿಸಿದರು.

ಸರ್ಕಾರಿ ಸ್ವಾಮ್ಯದ ಕಂಠೀರವ ಸ್ಟುಡಿಯೋಸ್ ಸ್ಥಾಪನೆಯಾಗಿ 60 ವರ್ಷ ಪೂರ್ಣಗೊಂಡಿರುವಹಿನ್ನೆಲೆಯಲ್ಲಿ ವಜ್ರಮಹೋತ್ಸವ ಆಚರಣೆ ಮಾಡಲು ಉದ್ದೇಶಿಸಲಾಗಿದೆ. ಈಹಿನ್ನಲೆಯಲ್ಲಿ ಸಿನಿಮಾ ನಿರ್ಮಾಣ, ಸ್ಟುಡಿಯೋ ಕುರಿತು ವಿಚಾರಸಂಕಿರಣ, ಕಂಠೀರವ ಸ್ಟುಡಿಯೋಸ್ ನಿರ್ಮಾಣದ ಸ್ಥಾಪಕ ಟಿ.ಎಸ್.ಕರಿಬಸವಯ್ಯ ಪುತ್ಥಳಿ ನಿರ್ಮಾಣ, ಮಾಜಿಮುಖ್ಯಮಂತ್ರಿ ದಿ. ಎಸ್.ನಿಜಲಿಂಗಪ್ಪ ಚಲನಚಿತ್ರ ನಿರ್ಮಾಣ ಮಾಡುವುದು ಹಾಗೂ ಸಂಗೀತಸಂಜೆಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಯೋಜನೆ ರೂಪಿಸಲಾಗುತ್ತಿದೆ ಎಂದರು.

ಕಂಠೀರವ ಸ್ಟುಡಿಯೋಸ್ ವಜ್ರ ಮಹೋತ್ಸವ ಆಚರಣೆಗಾಗಿ ಸರ್ಕಾರದಿಂದ ಈಗಾಗಲೇ 1 ಕೋಟಿ ರೂ. ಅನುದಾನ ಮಂಜೂರಾಗಿದ್ದು, ಇನ್ನೂ ಹೆಚ್ಚಿನ ಅನುದಾನಕ್ಕಾಗಿ ಬೇಡಿಕೆ ಸಲ್ಲಿಸಲಾಗಿದೆ. ವಜ್ರ ಮಹೋತ್ಸವ ಆಚರಣೆ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

1966ರಲ್ಲಿ ಕಂಠೀರವ ಸ್ಟುಡಿಯೋಸ್ ಅನ್ನು ಗುಬ್ಬಿ ವೀರಣ್ಣ, ಟಿ.ಎಸ್. ಕರಿಬಸಯ್ಯ ಮತ್ತಿತರರು ಸೇರಿದಂತೆ ಬೆಂಗಳೂರಿನಲ್ಲಿ ಜಮೀನು ಖರೀದಿ ಮಾಡಿ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪನೆ ಮಾಡಿದರು. ಇದಕ್ಕೂ ಪೂರ್ವದಲ್ಲಿ ಕನ್ನಡ ಚಲನಚಿತ್ರ ನಿರ್ಮಾಣ ಕುರಿತ ಕೆಲಸಕಾರ್ಯಗಳಿಗೆ ಮದ್ರಾಗೆ ಹೋಗಬೇಕಿತ್ತು. ಹೀಗಾಗಿ ಇಲ್ಲಿಯೇ ಚಲನಚಿತ್ರಗಳ ನಿರ್ಮಾಣಕ್ಕೆ ಸಂಬಧಿಸಿದ ಕೆಲಸಗಳು ಆಗಬೇಕು ಎನ್ನುವ ಕಾರಣಕ್ಕಾಗಿ, ಮೊಟ್ಟ ಮೊದಲನೆಯ ಕಂಠೀರವ ಸ್ಟುಡಿಯೋಗೆ ಅಂದಿನ ಮುಖ್ಯಮಂತ್ರಿಗಳಾಗಿದ್ದ ಎಸ್.ನಿಜಲಿಂಗಪ್ಪನವರು ರೂ.5 ಲಕ್ಷ ಅನುದಾನನೀಡಿ, ಸ್ಟುಡಿಯೋ ಅಭಿವೃದ್ಧಿಗೆ ಶ್ರಮಿಸುವ ಮೂಲಕ ಪ್ರೋತ್ಸಾಹ ನೀಡಿದರು ಎಂದು ತಿಳಿಸಿದ ಅವರು, ಬಳಿಕ ಕಂಠೀರವ ಸ್ಟುಡಿಯೋವನ್ನು ನಡೆಸಲು ಸಾಧ್ಯವಾಗದೇ 1974 ರಲ್ಲಿ ಸರ್ಕಾರಕ್ಕೆ ವಶಕ್ಕೆ ನೀಡಿದರು. ಆಗಿನಿಂದಲೂ ಸರ್ಕಾರವೇ ಕಂಠೀರವ ಸ್ಟುಡಿಯೋ ನಿರ್ವಹಣೆ ಮಾಡುತ್ತಿದೆ ಎಂದುಹೇಳಿದರು. ಈಸಂದರ್ಭದಲ್ಲಿ ಜಿಲ್ಲಾವಾರ್ತಾಧಿಕಾರಿ ಮಂಜುನಾಥ ಸುಳ್ಳೊಳ್ಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)